


Volume : 9 | Issue : 188 | October : 14 : 2026 : Wednesday
ಸಂಪುಟ : 9 | ಸಂಚಿಕೆ : 188 | ಅಕ್ಟೋಬರ್ : 14 : 2026 : ಬುಧವಾರ

www.VIKRAMAVAHINI.com

—— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ ——

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481




ಒಂಬತ್ತು ತಿಂಗಳಿಂದ ಹೊಸ ಚಿತ್ರಕ್ಕೆ ಸಹಿ ಹಾಕದ ಮೃಣಾಲ್ ಠಾಕೂರ್, ಸೃಜನಶೀಲ ತೃಪ್ತಿ ನೀಡುವ ಅರ್ಥಪೂರ್ಣ ಪಾತ್ರಗಳಿಗಾಗಿ ಕಾಯುತ್ತಿದ್ದಾರೆ. ಉತ್ತಮ ಕಥೆ ಮತ್ತು ನೆನಪಿನಲ್ಲಿ ಉಳಿಯುವಂತಹ ಪಾತ್ರಗಳಿಗೆ ಮಾತ್ರ ಆದ್ಯತೆ ನೀಡುವುದಾಗಿ ನಟಿ ತಿಳಿಸಿದ್ದಾರೆ.

ಸ್ಟಿಂಗ್ ಅಪರೇಷನ್-ವಿಪಕ್ಷಗಳ ಷಡ್ಯಂತ್ರ ಶೀಘ್ರ ಬಯಲು: ತಂಗಡಗಿ ಪುಟ 3

ಸ್ಟಿಂಗ್ ಆಪರೇಷನ್ ವಿವಾದ: ಸಿಬಿಐ ತನಿಖೆಗೆ ಕುಮಾರಸ್ವಾಮಿ ಆಗ್ರಹ ಪುಟ 4

# ಸ್ಟಿಂಗ್ ಆಪರೇಷನ್‌ಗೆ ಹೊಸ ತಿರುವು: ಸ್ವತಂತ್ರ ತನಿಖೆಗಾಗಿ ಅರ್ಜಿ

● ವಿಕ್ರಮ ವಾಹಿನಿ । ಬೆಂಗಳೂರು

ಯೂಟ್ಯೂಬ್ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ಹನಿಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದ ವಿಡಿಯೋದ ನೈಜತೆ ಹಾಗೂ ಅದರಲ್ಲಿನ ಆರೋಪಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಕರ್ನಾಟಕ ಹೈಕೋರ್ಟ್ ಅಥವಾ ಸುಪ್ರೀಂ ಕೋರ್ಟ್ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ನೈಜ ಹೋರಾಟಗಾರರ ವೇದಿಕೆ ಮನವಿ ಮಾಡಿದೆ.

ವೇದಿಕೆಯ ಎಚ್.ಎಂ. ವೆಂಕಟೇಶ್ ಅವರು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ, ಬಾಲ ನ್ಯಾಯಮಂಡಳಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಿಗೆ ಅಕ್ಟೋಬರ್ 9ರಂದು ಮನವಿ ಸಲ್ಲಿಸಿದ್ದು, ವಿಡಿಯೋದ ತುಣುಕನ್ನು ಪೆನ್‌ಡ್ರೈವ್‌ನಲ್ಲಿ ಒದಗಿಸಿದ್ದಾರೆ.

ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ವಿಡಿಯೋದಲ್ಲಿ ಪತ್ರಕರ್ತರೊಬ್ಬರು ಮತ್ತು ಮಹಿಳಾ ರಾಜಕಾರಣಿಯ ನಡುವಿನ ಸಂಭಾಷಣೆ ಇದ್ದು, ಕರ್ನಾಟಕದ ಪ್ರಭಾವಿ ರಾಜಕಾರಣಿಯೊಬ್ಬರ ಹೆಸರನ್ನೂ ಪ್ರಸ್ತಾಪಿಸಲಾಗಿದೆ.

ಸುಮಾರು 2011ರಲ್ಲಿ 14 ವರ್ಷದ ಬಾಲಕಿಯ ಮೇಲೆ ನಡೆದಿತ್ತೆನ್ನಲಾದ ಶೋಷಣೆಗೆ ಸಂಬಂಧಿಸಿದ ಆರೋಪಗಳು ಸಂಭಾಷಣೆಯಲ್ಲಿ ಕೇಳಿಬಂದಿವೆ ಎಂದು ವೇದಿಕೆ ಮನವಿಯಲ್ಲಿ ತಿಳಿಸಿದೆ. ಆದರೆ, ಈ ಆರೋಪಗಳ ಸತ್ಯಾಸತ್ಯತೆ ಇನ್ನೂ ಸ್ವತಂತ್ರವಾಗಿ ದೃಢಪಟ್ಟಿಲ್ಲ.

ಸಂತ್ರಸ್ತೆಯ ವಿಚಾರದಲ್ಲಿ ರಾಜಿ ಅಥವಾ ಇತ್ಯರ್ಥಕ್ಕೆ ಪ್ರಯತ್ನಿಸಿರುವುದು, ಪ್ರಕರಣವನ್ನು ಬಹಿರಂಗಪಡಿಸುವ ಕುರಿತು ಚರ್ಚಿಸಿರುವುದು ಹಾಗೂ ಅದರ ಕಾನೂನು ನಿರ್ವಹಣೆಗೆ ಸಂಬಂಧಿಸಿದ ಮಾತುಕತೆಗಳು ವಿಡಿಯೋದಲ್ಲಿವೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ. ಪ್ರಕರಣದಲ್ಲಿ ರಾಜಕಾರಣಿಗಳು, ಪತ್ರಕರ್ತರು ಮತ್ತು ಕಾನೂನು ವೃತ್ತಿಪರರ ಹೆಸರುಗಳು ಪ್ರಸ್ತಾಪವಾಗಿರುವುದರಿಂದ ಸಮಗ್ರ ತನಿಖೆ ಅಗತ್ಯ ಎಂದು ವೇದಿಕೆ ಅಭಿಪ್ರಾಯಪಟ್ಟಿದೆ.

ಅಪ್ರಾಪ್ತ ವಯಸ್ಸಿನ ಬಾಲಕಿಯ ಮೇಲಿನ ಶೋಷಣೆಯ ಆರೋಪಗಳನ್ನು ಮುಚ್ಚಿಹಾಕಲು ಅಥವಾ ಅವುಗಳನ್ನು ಹನಿಟ್ರ್ಯಾಪ್ ಹಾಗೂ ಸುಲಿಗೆಗೆ ಬಳಸಿ ಕೊಳ್ಳಲು ಯತ್ನಿಸಿರುವ ಸಾಧ್ಯತೆಯನ್ನೂ ಪರಿಶೀಲಿಸಬೇಕು ಎಂದು ಮನವಿಯಲ್ಲಿ ಕೋರಲಾಗಿದೆ. ವಿಡಿಯೋದ ಮೂಲ, ನೈಜತೆ ಮತ್ತು ಸಂದರ್ಭವನ್ನು ವೈಜ್ಞಾನಿಕ ಹಾಗೂ ತಾಂತ್ರಿಕ ವಿಧಾನಗಳ ಮೂಲಕ ಪರಿಶೀಲಿಸಿ, ಮೂಲ ದೃಶ್ಯಾವಳಿಗಳನ್ನು ಸುರಕ್ಷಿತವಾಗಿ ಸಂಗ್ರಹಿಸಬೇಕು ಎಂದು ಒತ್ತಾಯಿಸಲಾಗಿದೆ. ಇದೇ ವೇಳೆ, ಆರೋಪಿತ ಪ್ರಕರಣದಲ್ಲಿ ಸಂತ್ರಸ್ತೆ ಮತ್ತು ಅವರ ಕುಟುಂಬದವರ ಗೌಪ್ಯತೆ ಹಾಗೂ ಸುರಕ್ಷತೆಯನ್ನು ಕಾಪಾಡಬೇಕು. ಅವರಿಗೆ ಅಗತ್ಯ ಕಾನೂನು ನೆರವು ಮತ್ತು ರಕ್ಷಣೆ ಒದಗಿಸಲು ಸಂಬಂಧಪಟ್ಟ ಸಂಸ್ಥೆಗಳಿಗೆ ನಿರ್ದೇಶನ ನೀಡಬೇಕು ಎಂದು ವೇದಿಕೆ ಮನವಿ ಮಾಡಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಸ್ಟಿಂಗ್ ಆಪರೇಷನ್ ಬಳಸಲಾಗಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಇತ್ತೀಚೆಗೆ ಆರೋಪಿಸಿದ್ದರು.

ಪ್ರಕರಣದ ತನಿಖೆ ಯಾವುದೇ ರಾಜಕೀಯ ಒತ್ತಡ ಅಥವಾ ಪ್ರಭಾವಕ್ಕೆ ಒಳಗಾಗದಂತೆ ಸ್ವತಂತ್ರ ಸಂಸ್ಥೆಯ ಮೇಲ್ವಿಚಾರಣೆಯಲ್ಲಿ ನಡೆಯಬೇಕು. ಆರೋಪಗಳ ಸತ್ಯಾಸತ್ಯತೆ ದೃಢಪಡಿಸುವವರೆಗೆ ಸಂಬಂಧಪಟ್ಟ ವ್ಯಕ್ತಿಗಳ ವಿರುದ್ಧ ಪೂರ್ವಗ್ರಹಪೀಡಿತ ತೀರ್ಮಾನಕ್ಕೆ ಬರಬಾರದು ಹಾಗೂ ಸಂತ್ರಸ್ತೆಯ ಗುರುತು ಬಹಿರಂಗವಾಗದಂತೆ ಕಾನೂನುಬದ್ಧ ಗೌಪ್ಯತೆಯನ್ನು ಕಾಪಾಡಬೇಕು ಎಂದು ಮನವಿಯಲ್ಲಿ ಕೋರಲಾಗಿದೆ.

## ವೈರಲ್ ವಿಡಿಯೊದ ಸತ್ಯಾಸತ್ಯತೆ ಪರಿಶೀಲನೆಗೆ ಆಗ್ರಹ

- **ನ್ಯಾಯಾಂಗ ತನಿಖೆಗೆ ಮನವಿ:** ಹನಿಟ್ರ್ಯಾಪ್ ವಿಡಿಯೋದ ನೈಜತೆ ಹಾಗೂ ಆರೋಪಗಳ ಸತ್ಯಾಸತ್ಯತೆ ಪರಿಶೀಲಿಸಲು ಹೈಕೋರ್ಟ್ ಅಥವಾ ಸುಪ್ರೀಂಕೋರ್ಟ್ ಮೇಲ್ವಿಚಾರಣೆಯಲ್ಲಿ ಸ್ವತಂತ್ರ ತನಿಖೆ ನಡೆಸುವಂತೆ ನೈಜ ಹೋರಾಟಗಾರರ ವೇದಿಕೆ ಆಗ್ರಹಿಸಿದೆ.
- **ಅಪ್ರಾಪ್ತೆಯ ಶೋಷಣೆ ಆರೋಪ:** 2011ರಲ್ಲಿ 14 ವರ್ಷದ ಬಾಲಕಿಯ ಮೇಲೆ ಶೋಷಣೆ ನಡೆದಿತ್ತೆನ್ನಲಾದ ಆರೋಪಗಳು ವಿಡಿಯೋದ ಸಂಭಾಷಣೆಯಲ್ಲಿವೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಆರೋಪಗಳು ಸ್ವತಂತ್ರವಾಗಿ ದೃಢಪಟ್ಟಿಲ್ಲ.
- **ಹಣಕಾಸಿನ ಒಪ್ಪಂದದ ಮಾತುಕತೆ:** ಪ್ರಕರಣವನ್ನು ಇತ್ಯರ್ಥಪಡಿಸುವುದು, ಹಣ ನೀಡುವುದು ಹಾಗೂ ಚುನಾವಣಾ ಟಿಕೆಟ್‌ಗಾಗಿ ಬೇಡಿಕೆ ಇಡುವ ಕುರಿತು ಸಂಭಾಷಣೆ ಇದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.
- **ವಿಡಿಯೋದ ನೈಜತೆ ಪರಿಶೀಲನೆ:** ಮೂಲ ದೃಶ್ಯಾವಳಿಗಳನ್ನು ಸುರಕ್ಷಿತವಾಗಿ ಸಂಗ್ರಹಿಸಿ, ವೈಜ್ಞಾನಿಕ ಮತ್ತು ತಾಂತ್ರಿಕ ವಿಧಾನಗಳ ಮೂಲಕ ಪರಿಶೀಲಿಸುವಂತೆ ಮನವಿ ಮಾಡಲಾಗಿದೆ.
- **ಸಂತ್ರಸ್ತೆಯ ರಕ್ಷಣೆಗೆ ಒತ್ತಾಯ:** ಸಂತ್ರಸ್ತೆ ಮತ್ತು ಅವರ ಕುಟುಂಬದ ಗೌಪ್ಯತೆ, ಸುರಕ್ಷತೆ ಹಾಗೂ ಕಾನೂನು ನೆರವನ್ನು ಖಚಿತಪಡಿಸಬೇಕು ಎಂದು ವೇದಿಕೆ ಕೋರಿದೆ.
- **ರಾಜಕೀಯ ಚರ್ಚೆಗೆ ಗ್ರಾಸ:** ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಸ್ಟಿಂಗ್ ಆಪರೇಷನ್ ಬಳಸಲಾಗಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಆರೋಪಿಸಿದ್ದ ಹಿನ್ನೆಲೆಯಲ್ಲಿ ಪ್ರಕರಣ ರಾಜಕೀಯ ವಲಯದಲ್ಲೂ ಚರ್ಚೆಯಾಗಿದೆ.

## ಸ್ಟಿಂಗ್ ಹಿಂದೆ ಒಂದೇ ಜಾಲ: ರಾಜಣ್ಣ ಶಂಕೆ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಬಂಧಿಸಿದ ಸ್ಟಿಂಗ್ ಆಪರೇಷನ್ ವಿವಾದದ ಹಿಂದೆ, ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಸಿಡಿ ಪ್ರಕರಣದಲ್ಲಿ ಭಾಗಿಯಾಗಿದ್ದವರ ಕೈವಾಡವಿರಬಹುದು ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಶಂಕೆ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್‌ಗಳಿಗೆ ಒಂದೇ ರೀತಿಯ ವ್ಯವಸ್ಥೆ ಇರಬಹುದು, ಆದರೆ ಪಾಲುದಾರರು ಬೇರೆ ಇರಬಹುದು ಎಂದು ಅವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ರಾಜಣ್ಣ, ರಮೇಶ್ ಜಾರಕಿಹೊಳಿ ಅವರ ಸಿಡಿಯನ್ನು ಯಾರು ಸಿದ್ಧಪಡಿಸಿದ್ದರು ಎಂಬ ಪ್ರಶ್ನೆ ಎತ್ತಿದರು. ಅದೇ ತಂಡ ಸಿದ್ದರಾಮಯ್ಯ ಅವರ ವಿರುದ್ಧದ ಸ್ಟಿಂಗ್‌ನಲ್ಲೂ ಭಾಗಿಯಾಗಿದೆಯೇ ಎಂಬ ಅನುಮಾನವಿದ್ದು, ಈ ಬಗ್ಗೆ ಸಮಗ್ರ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

ತಮ್ಮ ಮೇಲೂ ಹಿಂದೆ ಸ್ಟಿಂಗ್ ಮಾಡಲು ಪ್ರಯತ್ನ ನಡೆದಿತ್ತು ಎಂದು ಹೇಳಿದ ಅವರು, ಈ ಬೆಳವಣಿಗೆಗಳನ್ನು ಬ್ಲ್ಯಾಕ್‌ಮೇಲ್ ತಂತ್ರವೆಂದು ಕರೆದರು. ಸಿದ್ದರಾಮಯ್ಯ ಅವರು ತನಿಖೆ ನಡೆಸಿ ಜನರಲ್ಲಿರುವ ಗೊಂದಲ ನಿವಾರಿಸಬೇಕು. ಇಂತಹ ಪ್ರಕರಣಗಳಿಂದ ರಾಜ್ಯದ ಗೌರವಕ್ಕೆ ಧಕ್ಕೆಯಾಗುತ್ತಿದ್ದು, ಸತ್ಯವನ್ನು ಬಹಿರಂಗಪಡಿಸಿದರೆ ಸ್ಟಿಂಗ್ ದಂಧೆಗೆ ಕಡಿವಾಣ ಹಾಕಬಹುದು ಎಂದು ಅಭಿಪ್ರಾಯಪಟ್ಟರು.

## ಸಿದ್ದುಗೆ ಕೋರ್ಟ್ ರಿಲೀಫ್: ವಿಡಿಯೋ ಪ್ರಸಾರಕ್ಕೆ ತಡೆ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ರಾಜಕೀಯದಲ್ಲಿ ತೀವ್ರ ಸಂಚಲನ ಮೂಡಿಸಿರುವ ಸ್ಟಿಂಗ್ ಆಪರೇಷನ್ ವಿವಾದದ ನಡುವೆಯೇ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನ್ಯಾಯಾಲಯದಿಂದ ಮಧ್ಯಂತರ ರಕ್ಷಣೆ ದೊರೆತಿದೆ. ತಮ್ಮ ವಿರುದ್ಧ ಅಪಪ್ರಚಾರಕ್ಕೆ ಬಳಸಲಾಗುತ್ತಿದೆ ಎನ್ನಲಾದ ವಿಡಿಯೋಗಳ ಪ್ರಸಾರಕ್ಕೆ ತಡೆ ನೀಡುವಂತೆ ಕೋರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಬೆಂಗಳೂರಿನ 18ನೇ ಸಿಸಿಹೆಚ್ ನ್ಯಾಯಾಲಯ, 42 ಮಾಧ್ಯಮಗಳ ವಿರುದ್ಧ ಮಧ್ಯಂತರ ನಿರ್ಬಂಧಕಾಜ್ಞೆ ವಿಧಿಸಿದೆ. ನ್ಯಾಯಾಲಯದ ಈ ಆದೇಶದಂತೆ, ಸಂಬಂಧಿತ ವಿಡಿಯೋಗಳನ್ನು ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ನಿರ್ಬಂಧ ವಿಧಿಸಲಾಗಿದೆ. ಈಗಾಗಲೇ ಕೆಲವು ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡಲಾಗಿರುವ ವಿಡಿಯೋಗಳನ್ನು ತೆರವುಗೊಳಿಸುವಂತೆಯೂ ನ್ಯಾಯಾಲಯ ಸೂಚನೆ ನೀಡಿದೆ ಎಂದು ವರದಿಯಾಗಿದೆ.

**ಸ್ಟಿಂಗ್ ಆಪರೇಷನ್–ರಾಜಕೀಯ ವಾಕ್ಸಮರ:**

ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿದ ವಿಡಿಯೋಗಳ ವಿಚಾರ ರಾಜ್ಯ ರಾಜಕೀಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ನಡುವೆ ತೀವ್ರ ವಾಕ್ಸಮರಕ್ಕೆ ಕಾರಣವಾಗಿದೆ. ವಿಡಿಯೋಗಳ ಸತ್ಯಾಸತ್ಯತೆ, ಅವುಗಳ ಬಳಕೆ ಹಾಗೂ ಈ ವಿಚಾರದ ಹಿಂದೆ ಯಾರಿದ್ದಾರೆ ಎಂಬುದರ ಕುರಿತು ರಾಜಕೀಯ ಆರೋಪ–ಪ್ರತ್ಯಾರೋಪಗಳು ಮುಂದುವರಿದಿವೆ. ಈ ಬೆಳವಣಿಗೆಯ ನಡುವೆ ತಮ್ಮ ವಿರುದ್ಧದ ವಿಡಿಯೋಗಳನ್ನು ಪ್ರಸಾರ ಮಾಡುವ ಮೂಲಕ ಅಪಪ್ರಚಾರ ನಡೆಸುವ ಸಾಧ್ಯತೆ ಇದೆ ಎಂದು ಆಕ್ಷೇಪಿಸಿರುವ ಸಿದ್ದರಾಮಯ್ಯ, ಮಾಧ್ಯಮಗಳ ಪ್ರಸಾರಕ್ಕೆ ನಿರ್ಬಂಧ ವಿಧಿಸುವಂತೆ ನ್ಯಾಯಾಲಯದ ಮೊರೆ ಹೋಗಿದ್ದರು. ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯವು 42 ಮಾಧ್ಯಮಗಳ ವಿರುದ್ಧ ಮಧ್ಯಂತರ ಆದೇಶ ನೀಡಿದೆ.

## ವಿಡಿಯೋಗೂ ನನಗೂ ಸಂಬಂಧವಿಲ್ಲ: ಸಿದ್ದರಾಮಯ್ಯ

**"ನಾನು ಸಂಪೂರ್ಣ ನಿರಪರಾಧಿ ಎನ್ನುವುದು ನನ್ನ ಆತ್ಮಸಾಕ್ಷಿಗೆ ಗೊತ್ತು" ಎಂದು ಹೇಳಿರುವ ಅವರು, ವಿಡಿಯೋ ವಿಚಾರದಲ್ಲಿ ತಮ್ಮ ವಿರುದ್ಧ ನಡೆಯುತ್ತಿರುವ ಪ್ರಚಾರವನ್ನು ತಳ್ಳಿಹಾಕಿದ್ದಾರೆ. ನ್ಯಾಯಾಲಯದ ಮಧ್ಯಂತರ ಆದೇಶವು ಸ್ಟಿಂಗ್ ಆಪರೇಷನ್ ವಿವಾದದ ನಡುವೆಯೇ ಮಹತ್ವ ಪಡೆದುಕೊಂಡಿದ್ದು, ಪ್ರಕರಣದ ಮುಂದಿನ ಬೆಳವಣಿಗೆಗಳತ್ತ ರಾಜಕೀಯ ವಲಯದ ಗಮನ ಹರಿದಿದೆ.**



## ಸುದ್ದಿ ಚುಟುಕು

### ಸಿಜೆಐ ವಿರುದ್ಧ ಕಾಂಗ್ರೆಸ್ ಪೋಸ್ಟ್‌ಗೆ ಬಾರ್ ಅಸೋಸಿಯೇಷನ್ ಖಂಡನೆ

● ವಿಕ್ರಮ ವಾಹಿನಿ । ನವದೆಹಲಿ

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ರಾಜೀನಾಮೆಗೆ ಆಗ್ರಹಿಸಿ ಕೇರಳ ಕಾಂಗ್ರೆಸ್‌ನ ಅಧಿಕೃತ ಎಕ್ಸ್ ಖಾತೆಯಲ್ಲಿ ಪ್ರಕಟಿಸಿದ್ದ ಪೋಸ್ಟ್‌ಗೆ ಸುಪ್ರೀಂಕೋರ್ಟ್ ಬಾರ್ ಅಸೋಸಿಯೇಷನ್ (ಎಸ್‌ಸಿಬಿಎ) ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ. ಇಂತಹ ಹೇಳಿಕೆಗಳು ನ್ಯಾಯಾಂಗದ ಘನತೆಗೆ ಧಕ್ಕೆ ತರುವುದಲ್ಲದೆ, ನ್ಯಾಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವ ಪ್ರಯತ್ನಕ್ಕೆ ಸಮಾನ ಎಂದು ಖಂಡಿಸಿದೆ.

ಕೇರಳ ಕಾಂಗ್ರೆಸ್ ತನ್ನ ಪೋಸ್ಟ್‌ನಲ್ಲಿ, ಕಾನೂನು ಮತ್ತು ಸುವ್ಯವಸ್ಥೆ ನಿರ್ವಹಿಸಲು ಸಾಧ್ಯವಾಗದಿದ್ದರೆ ಸಿಜೆಐ ರಾಜೀನಾಮೆ ನೀಡಬೇಕು ಎಂಬರ್ಥದ ಹೇಳಿಕೆ ಪ್ರಕಟಿಸಿತ್ತು. ಇದು ಸಾಮಾಜಿಕ ಜಾಲತಾಣಗಳಲ್ಲಿ ಟೀಕೆಗೆ ಗುರಿಯಾದ ಬಳಿಕ ಪೋಸ್ಟ್ ಅಳಿಸಲಾಗಿದೆ.

ವಿವಾದದ ಕುರಿತು ಸ್ಪಷ್ಟನೆ ನೀಡಿರುವ ಕೇರಳ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸನ್ನಿ ಜೋಸೆಫ್, ಪಕ್ಷದ ನಾಯಕರ ಗಮನಕ್ಕೆ ತಾರದೆ ಪೋಸ್ಟ್ ಪ್ರಕಟಿಸಲಾಗಿದೆ ಎಂದು ತಿಳಿಸಿದ್ದಾರೆ. ಪೋಸ್ಟ್ ಮಾಡಿದ ವ್ಯಕ್ತಿಯನ್ನು ಹುದ್ದೆಯಿಂದ ತೆಗೆದುಹಾಕಲಾಗಿದ್ದು, ನ್ಯಾಯಾಂಗದ ನಿಷ್ಪಕ್ಷಪಾತತೆಯ ಬಗ್ಗೆ ಪಕ್ಷಕ್ಕೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಹೇಳಿದ್ದಾರೆ.

ಇದೇ ವಿಚಾರವಾಗಿ ಕೇಂದ್ರ ಸಚಿವ ಕಿರಣ್ ರಿಜಿಜು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದು, ಸಾಂವಿಧಾನಿಕ ಸಂಸ್ಥೆಗಳು ಮತ್ತು ಅಧಿಕಾರಿಗಳನ್ನು ಬಹಿರಂಗವಾಗಿ ನಿಂದಿಸುವುದು ಖಂಡನೀಯ ಎಂದು ಹೇಳಿದ್ದಾರೆ.

### ಅಮೆರಿಕದಲ್ಲಿ ಯೂನಸ್‌ಗೆ ಪ್ರತಿಭಟನೆಯ ಬಿಸಿ

● ವಿಕ್ರಮ ವಾಹಿನಿ । ವಾಷಿಂಗ್ಟನ್

ಬಾಂಗ್ಲಾದೇಶದ ಮಧ್ಯಂತರ ಸರ್ಕಾರದ ಮಾಜಿ ಮುಖ್ಯಸ್ಥ ಹಾಗೂ ನೊಬೆಲ್ ಪ್ರಶಸ್ತಿ ಪುರಸ್ಕೃತ ಮುಹಮ್ಮದ್ ಯೂನಸ್ ಅವರಿಗೆ ಅಮೆರಿಕದ ನ್ಯೂಯಾರ್ಕ್‌ನ ಜಾನ್ ಎಫ್. ಕೆನಡಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಾಂಗ್ಲಾದೇಶ ಮೂಲದ ಪ್ರತಿಭಟನಾಕಾರರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಯೂನಸ್ ಅವರನ್ನು ಸುತ್ತುವರಿದ ಪ್ರತಿಭಟನಾಕಾರರು, 'ನೀನು ಭಯೋತ್ಪಾದಕ, ಇಲ್ಲಿಂದ ತೊಲಗು' ಎಂದು ಘೋಷಣೆ ಕೂಗಿ ಆಕ್ರೋಶ ಹೊರಹಾಕಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋದಲ್ಲಿ, ದೋಹಾ ಮೂಲಕ ಕತಾರ್ ಏರ್‌ವೇಸ್ ವಿಮಾನದಲ್ಲಿ ನ್ಯೂಯಾರ್ಕ್‌ಗೆ ಬಂದಿಳಿದ ಯೂನಸ್ ಅವರನ್ನು ವೀಲ್‌ಚೇರ್‌ನಲ್ಲಿ ಕರೆದೊಯ್ಯುತ್ತಿದ್ದಾಗ ಪ್ರತಿಭಟನಾಕಾರರು ಘೋಷಣೆ ಕೂಗುತ್ತಿರುವುದು ಕಂಡುಬಂದಿದೆ. 'ನೀನು ನರಹಂತಕ, ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸಿದ್ದೀಯ' ಎಂದು ಆರೋಪಿಸಿದ ಪ್ರತಿಭಟನಾಕಾರರು, ಬಾಂಗ್ಲಾದೇಶದಲ್ಲಿ ನಡೆದ ಹಿಂಸಾಚಾರ ಮತ್ತು ಬಂಧನಗಳಿಗೆ ಯೂನಸ್ ಅವರೇ ಹೊಣೆ ಎಂದು ದೂರಿದ್ದಾರೆ.

ಪರಿಸ್ಥಿತಿ ಗದ್ದಲಕ್ಕೆ ತಿರುಗುತ್ತಿದ್ದಂತೆ ಭದ್ರತಾ ಸಿಬ್ಬಂದಿ ಯೂನಸ್ ಹಾಗೂ ಅವರ ಸಹೋದ್ಯೋಗಿ ಲಾಮಿಯಾ ಮೋರ್ಶೆದ್ ಅವರನ್ನು ಸುರಕ್ಷಿತವಾಗಿ ವಿಮಾನ ನಿಲ್ದಾಣದ ಒಳಭಾಗಕ್ಕೆ ಕರೆದೊಯ್ದಿದ್ದಾರೆ.

2024ರ ಆಗಸ್ಟ್‌ನಲ್ಲಿ ಶೇಖ್ ಹಸೀನಾ ನೇತೃತ್ವದ ಸರ್ಕಾರ ಪತನಗೊಂಡ ಬಳಿಕ ಬಾಂಗ್ಲಾದೇಶದಲ್ಲಿ ನಡೆದ ಹಿಂಸಾಚಾರ ಮತ್ತು ರಾಜಕೀಯ ಅಸ್ಥಿರತೆಯ ಹಿನ್ನೆಲೆಯಲ್ಲಿ ಯೂನಸ್ ವಿರುದ್ಧ ಆಕ್ರೋಶ ವ್ಯಕ್ತವಾಗುತ್ತಿದೆ. ಮಧ್ಯಂತರ ಸರ್ಕಾರವು ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವಲ್ಲಿ ವಿಫಲವಾಗಿದೆ ಎಂದು ಅವರ ರಾಜಕೀಯ ವಿರೋಧಿಗಳು ಆರೋಪಿಸಿದ್ದಾರೆ. ಪ್ರತಿಭಟನಾಕಾರರು ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಅವಾಮಿ ಲೀಗ್ ಬೆಂಬಲಿಗರೆಂದು ಕೆಲವು ವರದಿಗಳು ತಿಳಿಸಿವೆ.

ಯೂನಸ್ ಮಧ್ಯಂತರ ಸರ್ಕಾರದ ಮುಖ್ಯಸ್ಥ ಸ್ಥಾನದಿಂದ ಕೆಳಗಿಳಿದ ಬಳಿಕ ಕೈಗೊಂಡ ಮೊದಲ ವಿದೇಶ ಪ್ರವಾಸದ ವೇಳೆ ಈ ಘಟನೆ ನಡೆದಿದೆ ಎಂದು ವರದಿಯಾಗಿದೆ. ಈ ಪ್ರತಿಭಟನೆ ಕುರಿತು ಯೂನಸ್ ಅವರಿಂದ ಅಧಿಕೃತ ಪ್ರತಿಕ್ರಿಯೆ ಬಂದಿಲ್ಲ. ಪ್ರತಿಭಟನಾಕಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಬಾಂಗ್ಲಾದೇಶ ಸರ್ಕಾರದ ಸಲಹೆಗಾರ ಜಾಹಿದ್ ಉರ್ ರೆಹಮಾನ್ ಹೇಳಿಕೆ ನೀಡಿದ್ದಾರೆ ಎಂದು ವರದಿಗಳು ತಿಳಿಸಿವೆ.

## ಕೆಪಿಎಸ್‌ಸಿ ಹಗರಣ: ಎಸ್‌ಐಟಿಯಿಂದ ಅಲೋಕ್ ಕುಮಾರ್ ಔಟ್

● ವಿಕ್ರಮ ವಾಹಿನಿ । ನವದೆಹಲಿ

ಪಶುವೈದ್ಯಾಧಿಕಾರಿಗಳ ನೇಮಕಾತಿ ಹಗರಣದ ತನಿಖೆಗೆ ಹೈಕೋರ್ಟ್ ರಚಿಸಿರುವ ವಿಶೇಷ ತನಿಖಾ ತಂಡದಲ್ಲಿ (ಎಸ್‌ಐಟಿ) ಬದಲಾವಣೆ ಮಾಡಲು ಸುಪ್ರೀಂಕೋರ್ಟ್ ಅನುಮತಿ ನೀಡಿದೆ. ಎಸ್‌ಐಟಿ ಮುಖ್ಯಸ್ಥರಾಗಿದ್ದ ಡಿಜಿಪಿ ಅಲೋಕ್ ಕುಮಾರ್ ಮತ್ತು ಡಿಐಜಿ ದಿವ್ಯಾ ಗೋಪಿನಾಥ್ ಅವರನ್ನು ಬದಲಿಸಿ, ಹೊಸ ಅಧಿಕಾರಿಗಳನ್ನು ನೇಮಿಸುವ ಪ್ರಕ್ರಿಯೆ ಮುಂದುವರಿಸಲು ರಾಜ್ಯ ಸರ್ಕಾರಕ್ಕೆ ನ್ಯಾಯಾಲಯ ಅವಕಾಶ ನೀಡಿದೆ.

ಎಸ್‌ಐಟಿ ರಚನೆ ಹಾಗೂ ಅಧಿಕಾರಿಗಳ ನೇಮಕಕ್ಕೆ ಸಂಬಂಧಿಸಿದ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಬದಲಿಗೆ ನೇಮಿಸಲು ಉದ್ದೇಶಿಸಿರುವ ಅಧಿಕಾರಿಗಳ ಹೆಸರುಗಳನ್ನು ಹೈಕೋರ್ಟ್‌ಗೆ ಸಲ್ಲಿಸಿ ಅಂತಿಮಗೊಳಿಸುವಂತೆ ರಾಜ್ಯ ಸರ್ಕಾರಕ್ಕೆ ಸೂಚಿಸಿದೆ.

**ಫೋನ್ ಕದ್ದಾಲಿಕೆ ಆರೋಪ ಪ್ರಸ್ತಾಪ**

ರಾಜ್ಯ ಸರ್ಕಾರದ ಪರವಾಗಿ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಿದರು. ಎಸ್‌ಐಟಿ ಮುಖ್ಯಸ್ಥ ಅಲೋಕ್ ಕುಮಾರ್ ವಿರುದ್ಧ ಫೋನ್ ಕದ್ದಾಲಿಕೆ ಆರೋಪಗಳಿರುವ ಹಿನ್ನೆಲೆಯಲ್ಲಿ ಅವರನ್ನು ತಂಡದಿಂದ ಬದಲಿಸುವ ಅಗತ್ಯವಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು.

ಎಸ್‌ಐಟಿ ನೇತೃತ್ವಕ್ಕೆ ಐಜಿಪಿ ಶ್ರೇಣಿಯ ಲಾಭೂರಾಮ್, ಚೇತನ್ ಸಿಂಗ್ ರಾಥೋಡ್ ಸೇರಿದಂತೆ ಐವರು ಅಧಿಕಾರಿಗಳ ಹೆಸರುಗಳನ್ನು ಸರ್ಕಾರ ಪರಿಗಣನೆಗೆ ನೀಡಿದೆ ಎಂದು ತಿಳಿಸಿದರು.

**ಸಿಬಿಐ ತನಿಖೆಗೆ ಅಭ್ಯರ್ಥಿಗಳ ಪಟ್ಟು**



ಇದಕ್ಕೆ ಅಭ್ಯರ್ಥಿಗಳ ಪರ ವಕೀಲರು ಆಕ್ಷೇಪ ವ್ಯಕ್ತಪಡಿಸಿದರು. ಫೋನ್ ಕದ್ದಾಲಿಕೆ ಪ್ರಕರಣದಲ್ಲಿ ಅಲೋಕ್ ಕುಮಾರ್ ಈಗಾಗಲೇ ಮುಕ್ತರಾಗಿದ್ದಾರೆ ಎಂದು ವಾದಿಸಿದ ಅವರು, ಇದೇ ರಾಜ್ಯ ಸರ್ಕಾರ ಅವರಿಗೆ ಡಿಜಿಪಿ ಹುದ್ದೆಗೆ ಬಡ್ತಿ ನೀಡಿ, ರಾಷ್ಟ್ರಪತಿ ಪದಕಕ್ಕೂ ಶಿಫಾರಸು ಮಾಡಿತ್ತು ಎಂದು ಉಲ್ಲೇಖಿಸಿದರು.

ಪ್ರಕರಣದ ತನಿಖೆಗೆ ಸರ್ಕಾರ ತನ್ನ ಆಯ್ಕೆಯ ಅಧಿಕಾರಿಗಳನ್ನು ನೇಮಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಅಭ್ಯರ್ಥಿಗಳ ಪರ ವಕೀಲರು, ರಾಜ್ಯ ಸರ್ಕಾರದ ಮೇಲೆ ವಿಶ್ವಾಸವಿಲ್ಲದ ಕಾರಣ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಒತ್ತಾಯಿಸಿದರು.

ಎಸ್‌ಐಟಿ ಅಧಿಕಾರಿಗಳ ಬದಲಾವಣೆ ಕುರಿತ ಸುಪ್ರೀಂಕೋರ್ಟ್‌ನ ಸೂಚನೆಯ ಹಿನ್ನೆಲೆಯಲ್ಲಿ, ಮುಂದಿನ ತನಿಖೆಯ ನೇತೃತ್ವ ಯಾರಿಗೆ ವಹಿಸಲಾಗುತ್ತದೆ ಎಂಬುದು ಕುತೂಹಲ ಮೂಡಿಸಿದೆ.

## ಸುದೀಪ್‌ಗೆ ಉಗ್ರಪ್ಪ ಸವಾಲು: ಮೀಸಲಾತಿ ಹೋರಾಟಕ್ಕೆ ಬನ್ನಿ

● ವಿಕ್ರಮ ವಾಹಿನಿ । ಚಿತ್ರದುರ್ಗ

ಮದಕರಿ ನಾಯಕ ಜಯಂತ್ಯುತ್ಸವದ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಹಿರಿಯ ನಾಯಕ ವಿ.ಎಸ್. ಉಗ್ರಪ್ಪ ಅವರು ನಟ ಕಿಚ್ಚ ಸುದೀಪ್ ಅವರಿಗೆ ಬಹಿರಂಗ ಸವಾಲು ಹಾಕಿದ್ದಾರೆ. ನಾಯಕ ಸಮುದಾಯದ ಮೀಸಲಾತಿ ಹೋರಾಟಕ್ಕೆ ಕೈಜೋಡಿಸಿ ಬೀದಿಗಿಳಿಯಬೇಕು ಎಂದು ಆಗ್ರಹಿಸಿದ ಅವರು, ಅಭಿಮಾನಿಗಳಿಂದ ಕೇಕೆ, ಶಿಳ್ಳೆ ಪಡೆಯುವುದಷ್ಟೇ ಅಲ್ಲದೆ ಸಮುದಾಯದ ಹಕ್ಕುಗಳಿಗಾಗಿ ಧ್ವನಿ ಎತ್ತಬೇಕು ಎಂದು ಹೇಳಿದ್ದಾರೆ.

ಮಂಗಳವಾರ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ನಡೆದ ಮದಕರಿ ನಾಯಕ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಉಗ್ರಪ್ಪ, "ನಾಯಕ ಸಮುದಾಯದ ಮಗನಾಗಿದ್ದರೆ ನಮ್ಮ ಜನರ ಮೀಸಲಾತಿಗಾಗಿ ಹೋರಾಟಕ್ಕೆ ಬನ್ನಿ. ದಮ್ಮು, ತಾಕತ್ತಿದ್ದರೆ ಮೀಸಲಾತಿ ಹೋರಾಟದಲ್ಲಿ ಪಾಲ್ಗೊಳ್ಳಿ" ಎಂದು ಸುದೀಪ್‌ಗೆ ಕರೆ ನೀಡಿದರು.

**ಮೀಸಲಾತಿ ಪ್ರಮಾಣ ಶೇ.56ಕ್ಕೆ ಏರಿಸಲು ಒತ್ತಾಯ**

ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣವನ್ನು ನ್ಯಾಯಾಲಯ ಇಳಿಕೆ ಮಾಡಿರುವ ಹಿನ್ನೆಲೆಯಲ್ಲಿ, ಹೈಕೋರ್ಟ್ ಆದೇಶದ ವಿರುದ್ಧ ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಬೇಕು ಎಂದು ಉಗ್ರಪ್ಪ ಒತ್ತಾಯಿಸಿದರು.

ಮೀಸಲಾತಿ ಪ್ರಮಾಣವನ್ನು ಮತ್ತೆ ಶೇ.56ಕ್ಕೆ ಹೆಚ್ಚಿಸಿ, ಸಂವಿಧಾನದ ಒಂಬತ್ತನೇ ಅನುಸೂಚಿಗೆ ಸೇರಿಸುವ ಮೂಲಕ ರಕ್ಷಣೆ ಒದಗಿಸಬೇಕು ಎಂದು ಹೇಳಿದರು.

ಸಮುದಾಯದ ಅಭಿವೃದ್ಧಿಗೆ ಜಾಗೃತಿ, ವೈಚಾರಿಕತೆ ಮತ್ತು ಸಂಘಟನೆ ಅಗತ್ಯ. ಈ ಗುಣಗಳಿಲ್ಲದ ಸಮಾಜ ಪ್ರಗತಿ ಸಾಧಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟ ಅವರು, ಮೀಸಲಾತಿ ಹೋರಾಟದಲ್ಲಿ ಸುದೀಪ್ ನಾಯಕತ್ವ ವಹಿಸಬೇಕು ಎಂದು ಮನವಿ ಮಾಡಿದರು. 2ನೇ ಪುಟಕ್ಕೆ...

## ಬೊಮ್ಮಾಯಿ ಸರ್ಕಾರದ ಎಡವಟ್ಟಿನಿಂದ ಹೈಕೋರ್ಟ್ ಆದೇಶ: ಮುನಿಯಪ್ಪ




● ವಿಕ್ರಮ ವಾಹಿನಿ । ನವದೆಹಲಿ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ವಿಚಾರದಲ್ಲಿ ಹಿಂದಿನ ಬಸವರಾಜ ಬೊಮ್ಮಾಯಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಂಡಿದ್ದರೆ ಈಗಿನ ಗೊಂದಲ ಸೃಷ್ಟಿಯಾಗುತ್ತಿರಲಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ಆರೋಪಿಸಿದರು.

ಕರ್ನಾಟಕ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳ ಒಟ್ಟು ಜನಸಂಖ್ಯೆ ಶೇ.24.1ರಷ್ಟಿದೆ. ಈ ಆಧಾರದಲ್ಲಿ ಎಸ್‌ಸಿಗೆ ಶೇ.17 ಮತ್ತು ಎಸ್‌ಟಿಗೆ ಶೇ.7ರಷ್ಟು ಮೀಸಲಾತಿ ನಿಗದಿಪಡಿಸಲಾಗಿತ್ತು. ಆದರೆ, ಒಟ್ಟು ಮೀಸಲಾತಿ ಶೇ.50ರ ಮಿತಿಯನ್ನು ಮೀರಿದ ಹಿನ್ನೆಲೆಯಲ್ಲಿ ನ್ಯಾಯಾಲಯದ ಆದೇಶ ಬಂದಿದೆ ಎಂದರು.

ಒಳಮೀಸಲಾತಿ ವಿಚಾರದಲ್ಲಿಯೂ ಹಿಂದಿನ ಸರ್ಕಾರದ ಅವಧಿಯಲ್ಲಿ ನಿರ್ಧಾರ ಕೈಗೊಳ್ಳಲಾಗಿತ್ತು. ನಾಗಮೋಹನ್ ದಾಸ್ ಮತ್ತು ಸದಾಶಿವ ಆಯೋಗಗಳ ವರದಿಗಳನ್ನು ಆಧರಿಸಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಕಲ್ಪಿಸಲಾಗಿತ್ತು. ಈ ವಿಚಾರದಲ್ಲಿ ನ್ಯಾಯಾಲಯದ ಆದೇಶವನ್ನು ಗೌರವಿಸಬೇಕಿದ್ದು, ಅದರ ಕುರಿತು ಹೆಚ್ಚಿನ ವ್ಯಾಖ್ಯಾನ ಮಾಡುವುದಿಲ್ಲ ಎಂದು ತಿಳಿಸಿದರು.

ತಮಿಳುನಾಡಿನಲ್ಲಿ ಶೇ.69ರಷ್ಟು ಮೀಸಲಾತಿಯನ್ನು ಸಂವಿಧಾನದ ಒಂಬತ್ತನೇ ಅನುಸೂಚಿಯಡಿ ರಕ್ಷಿಸಿರುವ ಮಾದರಿಯನ್ನು ಪರಿಶೀಲಿಸಲಾಗುವುದು. ಹೈಕೋರ್ಟ್‌ನ ಸೂಚನೆ ಕುರಿತು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷರು ಹಾಗೂ ಪಕ್ಷದ ನಾಯಕರು ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲಿದ್ದಾರೆ. ಮೀಸಲಾತಿ ಉಳಿಸಿಕೊಳ್ಳಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಮುನಿಯಪ್ಪ ಭರವಸೆ ನೀಡಿದರು.

ಕಾಂಗ್ರೆಸ್ ಸರ್ಕಾರ ಮೀಸಲಾತಿ ಪ್ರಮಾಣವನ್ನು ಉಳಿಸಿಕೊಳ್ಳಲು ವಿಫಲವಾಗಿದೆ ಎಂಬ ಬಿಜೆಪಿಯ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಇತರ ರಾಜ್ಯಗಳ ಮೀಸಲಾತಿ ವ್ಯವಸ್ಥೆಗಳನ್ನು ಅಧ್ಯಯನ ಮಾಡಿ ಕಾನೂನುಬದ್ಧವಾಗಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

## ಸವಿ ವಾಹಿನಿ

ಅಪರಿಮಿತ ಉತ್ಸಾಹ, ಕಾರ್ಯದಕ್ಷತೆ ಮತ್ತು ಸೋಲೊಪ್ಪದ ಗುಣಗಳೇ ಗೆಲ್ಲುವ ಲಕ್ಷಣಗಳು.

## ದಿನ ಪಂಚಾಂಗ

ಅಕ್ಟೋಬರ್, 14–2026, ಬುಧವಾರ ಶರದ್ ಋತು,
ಆಶ್ವಯುಜ ಮಾಸ, ಶುದ್ಧ ಪಕ್ಷ
ಚೌತಿ ತಿಥಿ ರಾ.11:24
ಅನುರಾಧ ನಕ್ಷತ್ರ ರಾ.3:28
ರಾಹುಕಾಲ ಮ 12:05–1:34
ವಿನಾಯಕೀ ಚತುರ್ಥಿ, ವಿಶ್ವ ಮಾನದಂಡಗಳ ದಿನ, ಮಳ್ಳವಳ್ಳಿ ಉತ್ಸವ, ಬೆಳಗಾವಿ ರಥ, ಭರತನೂರು ಗುರು ನಂಜೇಶ್ವರ ರಥ, ಹರಿಹರ ನೀಲಕಂಠಪ್ರಭು ಪುಣ್ಯದಿನ

## ಆಧ್ಯಾತ್ಮ

# ಪ್ರೀತಿಯಿರುವಲ್ಲಿ ಮಾತ್ರ ಮನಸ್ಸಿನ ಸ್ಥಿರತೆ ಸಾಧ್ಯ: ರಾಘವೇಶ್ವರ ಶ್ರೀ



● ವಿಕ್ರಮ ವಾಹಿನಿ । ಬೆಂಗಳೂರು

ಭಕ್ತಿಯೇ ಮುಕ್ತಿಗೆ ಕಾರಣವಾಗಿದ್ದು, ಎಲ್ಲಿ ಪ್ರೀತಿ ಇದೆಯೋ ಅಲ್ಲಿ ಮನಸ್ಸು ಸ್ವಾಭಾವಿಕವಾಗಿ ಸ್ಥಿರವಾಗುತ್ತದೆ. ದೇವರು, ಗುರುಗಳ ಕುರಿತಾದ ಪ್ರೀತಿಗೆ ಭಕ್ತಿ ಎಂಬ ಹೆಸರಿದ್ದು, ದೇವರ ಕುರಿತಾಗಿ ಪ್ರೀತಿ ಉಂಟಾದಾಗ ನಾವು ಜೀವನದ ಕಷ್ಟಗಳನ್ನು ದಾಟುವುದರ ಜೊತೆಗೆ ಮೋಕ್ಷವನ್ನೂ ಪಡೆಯಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀರಾಮಚಂದ್ರಾಪುರ ಮಠದ ಶಾಖೆಯಲ್ಲಿ ನಡೆಯುತ್ತಿರುವ 'ನವರಾತ್ರ ನಮಸ್ಯಾ' ಕಾರ್ಯಕ್ರಮದಲ್ಲಿ 13/10/2026 ರಂದು ಲಲಿತೋಪಾಖ್ಯಾನ ಪ್ರವಚನವನ್ನು ಅನುಗ್ರಹಿಸಿದ ಶ್ರೀಗಳು, ಬ್ರಹ್ಮಾಂಡ ಪುರಾಣದ ಭಾಗವಾಗಿರುವ ಲಲಿತೋಪಾಖ್ಯಾನವು ರಹಸ್ಯವಾಗಿದ್ದು, ಇದನ್ನು ಯೋಗ್ಯರಿಗೆ ಮಾತ್ರ ತಿಳಿಸಬೇಕು.



ಲಲಿತೋಪಾಖ್ಯಾನದ ಕುರಿತಾಗಿ ಅನೇಕ ಪುಸ್ತಕಾದಿಗಳು ಇವೆಯಾದರೂ, ಅದು ಅಷ್ಟು ಪ್ರಚಲಿತದಲ್ಲಿಲ್ಲದೇ ಇಂದಿಗೂ ರಹಸ್ಯವಾಗಿಯೇ ಇದೆ. ಪುರಾಣ ಗ್ರಂಥಗಳು ದೇವರ ಅವತಾರಕ್ಕಿಂತ ಕಡಿಮೆಯಲ್ಲ. ಅಂದು ದೇವರು ಅವತಾರದ ಮೂಲಕ ಮಾಡಿದ್ದನ್ನೇ ಇಂದೂ ಕೂಡ ಗ್ರಂಥಗಳು ಮಾಡುತ್ತಿವೆ. ದೇವರ ಅವತಾರಗಳು ಹಾಗೂ ಅದನ್ನು ತಿಳಿಸುವ ಗ್ರಂಥಗಳು ಜೀವಿಗಳ ಕುರಿತಾಗಿ ದಯೆಯನ್ನು ಹೊಂದಿದ್ದು, ಅವು ನಮ್ಮ ಉದ್ಧಾರಕ್ಕೆ ಕಾರಣವಾಗುವಂತವು ಎಂದರು.

ಪ್ರಪಂಚವು ಪ್ರಕೃತಿ ಹಾಗೂ ಪುರುಷಾತ್ಮಕವಾಗಿದ್ದು, ಸೃಷ್ಟಿಯ ಭೌತಿಕ ರೂಪ ಪ್ರಕೃತಿಯಾದರೇ, ಪುರುಷ ಎಂಬುದು ಅದರೊಳಗಿರುವ ಚೇತನವಾಗಿದೆ. ಪ್ರಕೃತಿ ಹಾಗೂ ಪುರುಷವನ್ನು ಸಮರ್ಪಕವಾಗಿ ಅರಿತುಕೊಂಡರೆ ಅದೇ ಮುಕ್ತಿಗೆ ಮಾರ್ಗವಾಗಿದೆ. ಪರಮ ಪಾಪಿಯೂ ಕೂಡ ಲಲಿತಾ ತ್ರಿಪುರಸುಂದರಿಯನ್ನು ಧ್ಯಾನಿಸಿದರೆ ಪರಮ ಪುಣ್ಯಾತ್ಮನಾಗುತ್ತಾನೆ ಎಂದು ತಿಳಿಸಿದರು.

ತಾಪತ್ರಯಗಳು ಜೀವನದಲ್ಲಿ ಮುಗಿಯುವುದೇ ಇಲ್ಲ. ಜೀವನದಲ್ಲಿ ಕಷ್ಟಗಳು ಸಮುದ್ರದ ತೆರೆಗಳಂತೆ ಒಂದಾದ ಮೇಲೊಂದು ಬರುತ್ತಲೇ ಇರುತ್ತದೆ.

ದೇವರಲ್ಲಿ ಭಕ್ತಿಯನ್ನು ಹೊಂದಿದಾಗ ಈ ಸಂಸಾರ ಸಾಗರವನ್ನು ದಾಟಬಹುದು. ಭಾವ ಮತ್ತು ಬುದ್ಧಿಗಳಿಗೆ ಮಹತ್ವವನ್ನು ಕೊಟ್ಟು ಬದುಕಬೇಕು. ಅರಿವಿನ ಬದುಕು ನಮ್ಮದಾದಾಗ ಮಾತ್ರ ಜೀವನವನ್ನು ಸಾರ್ಥಕಪಡಿಸಿಕೊಳ್ಳಬಹುದು. ಆದರೆ ನಾವಿಂದು ಹೊಟ್ಟೆಪಾಡಿನ ಬದುಕನ್ನು ಮಾಡುತ್ತಿದ್ದೇವೆ ಎಂದು ಅಭಿಪ್ರಾಯಪಟ್ಟರು.

ಇಮಾಮಿ ಸಂಸ್ಥೆಯ ಸಂಸ್ಥಾಪಕ ರಾಧೇಶ್ಯಾಮ್ ಗೋಯೆಂಕಾ, ಉದ್ಯಮಿ ಆರ್.ಕೆ ಅಗರ್'ವಾಲ್, ಉದ್ಯಮಿ ಜೆ.ಕೆ. ಜವೇರ್ ಶ್ರೀಗಳ ಆಶೀರ್ವಾದ ಪಡೆದರು. ಶ್ರೀದುರ್ಗಾಸೂಕ್ತ ಹವನ, ದುರ್ಗಾ ಸಪ್ತಶತೀ ಪಾರಾಯಣ, ಮಾತೆಯರಿಂದ ಕುಂಕುಮಾರ್ಚನೆ, ಭಜನಾ ಮಂಡಳಿಗಳಿಂದ ಭಜನೆ, ದುರ್ಗಾ ದೀಪನಮಸ್ಕಾರ ಸೇರಿದಂತೆ ಅನೇಕ ಕಾರ್ಯಕ್ರಮಗಳು ನಡೆದವು. ಹಿರಿಯ ನ್ಯಾಯವಾದಿ ಗಣಪತಿ ಹೆಗಡೆ ದುವಾ, ಮಂಜುನಾಥ ರಾವ್ ಕೆ.ಎನ್, ದಿನಪ್ರಧಾನರಾಗಿ ಅರವಿಂದ ದರ್ಬೆ ದಂಪತಿಗಳು ಉಪಸ್ಥಿತರಿದ್ದರು.

# 16ರಂದು ಮೋನಿಷಾ ಐಸಿರಿ ಭರತನಾಟ್ಯ ರಂಗಪ್ರವೇಶ

● ವಿಕ್ರಮ ವಾಹಿನಿ । ಬೆಂಗಳೂರು

ಯುವ ನೃತ್ಯ ಕಲಾವಿದೆ ಮೋನಿಷಾ ಐಸಿರಿ ಗೌಡ ಅವರ ಭರತನಾಟ್ಯ ರಂಗಪ್ರವೇಶ ಕಾರ್ಯಕ್ರಮ ಅ.16ರಂದು ನಗರದ ಮಲ್ಲೇಶ್ವರದ ಚೌಡಯ್ಯ ಸ್ಮಾರಕ ಭವನದಲ್ಲಿ ಸಂಜೆ 5.30ಕ್ಕೆ ನಡೆಯಲಿದೆ. ಸಾಯಿ ಆರ್ಟ್ಸ್ ಇಂಟರ್‌ನ್ಯಾಷನಲ್ ಸಂಸ್ಥೆಯ ಕಲಾವಿದೆಯಾಗಿರುವ ಮೋನಿಷಾ, ವಿದುಷಿ ಡಾ. ಸುಪರ್ಣಾ ವೆಂಕಟೇಶ್ ಅವರ ಮಾರ್ಗದರ್ಶನದಲ್ಲಿ ನೃತ್ಯಾಭ್ಯಾಸ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಮಂಡಳಿ (ಐಸಿಸಿಆರ್) ದಕ್ಷಿಣ ವಲಯದ ನಿರ್ದೇಶಕಿ ನಿಷಿ ಬಾಲಾ, ನೃತ್ಯ ಕಲಾವಿದ ವಿದ್ವಾನ್ ಪಾರ್ಶ್ವನಾಥ ಉಪಾಧ್ಯೆ ಹಾಗೂ ಡಾನ್ಸ್ ಇಂಡಿಯಾ ನಿಯತಕಾಲಿಕೆಯ ಸಂಪಾದಕ ವಿಕ್ರಂ ಕುಮಾರ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ತಾಂತ್ರಿಕ ನಿರ್ದೇಶಕ ಸಾಯಿ ವೆಂಕಟೇಶ್ ಹಾಗೂ ಮೋನಿಷಾ ಅವರ ಪೋಷಕರಾದ ವೈ. ಎಂ. ಜಗದೀಶ್ ಮತ್ತು ಶ್ರೀದೇವಿ ಜಗದೀಶ್ ಉಪಸ್ಥಿತರಿರಲಿದ್ದಾರೆ.

**ಕಥಕ್, ಭರತನಾಟ್ಯದಲ್ಲಿ ಸಾಧನೆ:** ಮೂರನೇ ವಯಸ್ಸಿನಿಂದಲೇ ನೃತ್ಯಾಭ್ಯಾಸ ಆರಂಭಿಸಿದ ಮೋನಿಷಾ, ಕಥಕ್‌ನಲ್ಲಿ ಮಾಯಾರಾವ್, ಶ್ವೇತಾ ವೆಂಕಟೇಶ್ ಹಾಗೂ ದುರ್ಗಾ ಆರ್ಯ



ಅವರಲ್ಲಿ ತರಬೇತಿ ಪಡೆದಿದ್ದಾರೆ. ಪುಣೆಯ ತಿಲಕ್ ಮಹಾರಾಷ್ಟ್ರ ವಿದ್ಯಾಪೀಠದಿಂದ ಕಥಕ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದು, ಬೆಂಗಳೂರು ವಿಶ್ವವಿದ್ಯಾಲಯದಿಂದ ಭರತನಾಟ್ಯದಲ್ಲಿ ಎಂ.ಎ. ಪದವಿ ಗಳಿಸಿದ್ದಾರೆ. ದೂರದರ್ಶನದ ಬಿ ಹೈ ಗ್ರೇಡ್ ಕಲಾವಿದೆಯಾಗಿಯೂ ಗುರುತಿಸಿಕೊಂಡಿದ್ದಾರೆ.

ಇಂಗ್ಲೆಂಡ್‌ನ ನಾಟಿಂಗ್‌ಹ್ಯಾಮ್ ಟ್ರೆಂಟ್ ವಿಶ್ವವಿದ್ಯಾಲಯದಿಂದ ಅಂತಾರಾಷ್ಟ್ರೀಯ ವ್ಯವಹಾರ ಅಧ್ಯಯನದಲ್ಲಿ ಪದವಿ ಪಡೆದಿರುವ ಮೋನಿಷಾ, ಕಲೆ ಮತ್ತು ಶಿಕ್ಷಣ ಎರಡರಲ್ಲೂ ಸಾಧನೆ ಮಾಡಿದ್ದಾರೆ. ಐಸಿಸಿಆರ್ ಸಹಯೋಗದಲ್ಲಿ ರಷ್ಯಾದಲ್ಲಿ ಪ್ರದರ್ಶನ ನೀಡಿರುವ ಅವರು, ಉಡುಪಿಯ ಶ್ರೀಕೃಷ್ಣ ಮಠ, ಉಚ್ಚಿಲ ಬ್ರಹ್ಮಕಲಶೋತ್ಸವ, ಅಮರಾವತಿ ನಾಟ್ಯೋತ್ಸವ, ಚೆನ್ನೈನ ಮಾರ್ಗಳಿ ಉತ್ಸವ ಹಾಗೂ ನವರಾತ್ರಿ ಉತ್ಸವಗಳಲ್ಲಿ ನೃತ್ಯ ಪ್ರದರ್ಶನ ನೀಡಿದ್ದಾರೆ. ಈಗಾಗಲೇ ಕಥಕ್‌ನಲ್ಲಿ ರಂಗಪ್ರವೇಶ ಮಾಡಿರುವ ಮೋನಿಷಾ, 'ಸ್ಥಿತಿಗತಿ ಡಾನ್ಸ್ ಕಂಪನಿ'ಯನ್ನು ಆರಂಭಿಸಿ ಯುವ ಕಲಾವಿದರಿಗೆ ತರಬೇತಿ ಹಾಗೂ ವೇದಿಕೆ ಪ್ರದರ್ಶನದ ಅವಕಾಶ ಕಲ್ಪಿಸುವ ಪ್ರಯತ್ನದಲ್ಲಿದ್ದಾರೆ.

**ಕಲೆ ಜೀವನಪೂರ್ತಿ ಕಲಿಕೆ:** "ಭರತನಾಟ್ಯ ಮತ್ತು ಕಥಕ್ ಕೇವಲ ನೃತ್ಯವಲ್ಲ; ಅವು ನನಗೆ ಜೀವನಪೂರ್ತಿ ಕಲಿಕೆ, ಭಾವಾಭಿವ್ಯಕ್ತಿಯ ವೇದಿಕೆ ಹಾಗೂ ಅಂತರಂಗದ ಶೋಧನೆಯ ಮಾರ್ಗ. ಕಲೆಯನ್ನು ಪ್ರೀತಿಸಬೇಕು. ಅದಕ್ಕೆ ಗುರುವೇ ಸಾಧನ; ಗುರುವಿನಿಂದಲೇ ಎಲ್ಲವೂ ಪ್ರಾಪ್ತಿ," ಎಂದು ಮೋನಿಷಾ ಐಸಿರಿ ತಿಳಿಸಿದ್ದಾರೆ.

ಹಿಮ್ಮೇಳ: ಗುರು ಸುಪರ್ಣಾ ವೆಂಕಟೇಶ್ ನಟುವಾಂಗ, ಶ್ರೀಕಾಂತ ಗೋಪಾಲಕೃಷ್ಣನ್ ಗಾಯನ, ವಿದ್ವಾನ್ ವಿದ್ಯಾಶಂಕರ್ ಮೃದಂಗ, ಕಿಕ್ಕೇರಿ ಜಯರಾಮ್ ಪಿಟೀಲು ಹಾಗೂ ಮತ್ತೂರು ಶ್ರೀನಿಧಿ ಕೊಳಲು ವಾದನದಲ್ಲಿ ಸಹಕರಿಸಲಿದ್ದಾರೆ.

# ಸುದೀಪ್‌ಗೆ ಉಗ್ರಪ್ಪ ಸವಾಲು: ಮೀಸಲಾತಿ ಹೋರಾಟಕ್ಕೆ ಬನ್ನಿ

1ನೇ ಪುಟದಿಂದ

**ಮದಕರಿ ನಾಯಕ ಹೆಸರಿನಲ್ಲಿ ಸ್ಮಾರಕಕ್ಕೆ ಆಗ್ರಹ**

ಚಿತ್ರದುರ್ಗದ ಬಸ್ ನಿಲ್ದಾಣ, ರೈಲು ನಿಲ್ದಾಣ ಹಾಗೂ ಜಿಲ್ಲಾಧಿಕಾರಿ ಕಚೇರಿಗೆ ಮದಕರಿ ನಾಯಕ ಹೆಸರಿಡಬೇಕು ಎಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಉಗ್ರಪ್ಪ ಒತ್ತಾಯಿಸಿದರು. ರಾಜ್ಯ ಸರ್ಕಾರ ಮದಕರಿ ನಾಯಕ ಹೆಸರಿನಲ್ಲಿ ಪ್ರಾಧಿಕಾರ ರಚಿಸುವುದರ ಜತೆಗೆ ಚಿತ್ರದುರ್ಗದಲ್ಲಿ ಸ್ಮಾರಕ ನಿರ್ಮಿಸಬೇಕು ಎಂದು ಆಗ್ರಹಿಸಿದರು.

"ನನ್ನ ಕೊನೆಯ ಉಸಿರಿರುವವರೆಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಸೇವೆ ಮಾಡುತ್ತೇನೆ" ಎಂದು ಹೇಳಿದ ಅವರು, ಈ ಸಮುದಾಯಗಳ ಹಕ್ಕುಗಳ ರಕ್ಷಣೆಗೆ ನಿರಂತರವಾಗಿ ಹೋರಾಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಸುದೀಪ್ ಅಭಿಮಾನಿಗಳು ಘೋಷಣೆ ಕೂಗುತ್ತಿದ್ದ ಹಿನ್ನೆಲೆಯಲ್ಲಿ, ಅವರನ್ನೇ ಉದ್ದೇಶಿಸಿ ಉಗ್ರಪ್ಪ ಮೀಸಲಾತಿ ಹೋರಾಟಕ್ಕೆ ಕರೆ ನೀಡಿರುವುದು ಗಮನ ಸೆಳೆಯಿತು.

# ರೈಲ್ವೆಯಲ್ಲಿ 3,548 ಹುದ್ದೆಗಳಿಗೆ ಅರ್ಜಿ ಆಹ್ವಾನ

● ವಿಕ್ರಮ ವಾಹಿನಿ । ಬೆಂಗಳೂರು

ಭಾರತೀಯ ರೈಲ್ವೆಯಲ್ಲಿ ಉದ್ಯೋಗ ಪಡೆಯಲು ಬಯಸುವ ಪದವೀಧರರಿಗೆ ಅವಕಾಶವಿದ್ದು, ರೈಲ್ವೆ ನೇಮಕಾತಿ ಮಂಡಳಿ (ಆರ್‌ಆರ್‌ಬಿ) ವಿವಿಧ ವಿಭಾಗಗಳ 3,548 ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಿದೆ. ಆನ್‌ಲೈನ್ ಅರ್ಜಿ ಸಲ್ಲಿಕೆ ಅಕ್ಟೋಬರ್ 8ರಿಂದ ಆರಂಭವಾಗಿದ್ದು, ನವೆಂಬರ್ 6 ಕೊನೆಯ ದಿನವಾಗಿದೆ.

ಹುದ್ದೆಗಳ ವಿವರ
ಮುಖ್ಯ ವಾಣಿಜ್ಯ ಮತ್ತು ಟಿಕೆಟ್ ಮೇಲ್ವಿಚಾರಕ – 127
ಗೂಡ್ಸ್ ಟ್ರೈನ್ ಮ್ಯಾನೇಜರ್ – 2,750
ಜೂನಿಯರ್ ಅಕೌಂಟ್ಸ್ ಅಸಿಸ್ಟಂಟ್ ಕಮ್ ಟೈಪಿಸ್ಟ್ – 300
ಸೀನಿಯರ್ ಕ್ಲರ್ಕ್ ಕಮ್ ಟೈಪಿಸ್ಟ್ – 371

**ವಿದ್ಯಾರ್ಹತೆ, ವಯೋಮಿತಿ:** ಅಭ್ಯರ್ಥಿಗಳು ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಪಡೆದಿರಬೇಕು. 2027ರ ಜನವರಿ 1ಕ್ಕೆ ಅನ್ವಯಿಸುವಂತೆ ಕನಿಷ್ಠ 18ರಿಂದ ಗರಿಷ್ಠ 33 ವರ್ಷ ವಯೋಮಿತಿ ನಿಗದಿಪಡಿಸಲಾಗಿದೆ. ಅರ್ಹ ವರ್ಗಗಳಿಗೆ ನಿಯಮಾನುಸಾರ ವಯೋಮಿತಿ ಸಡಿಲಿಕೆ ಅನ್ವಯಿಸಲಿದೆ.

**ಆಯ್ಕೆ ಪ್ರಕ್ರಿಯೆ, ಅರ್ಜಿ ಶುಲ್ಕ:** ಕಂಪ್ಯೂಟರ್ ಆಧಾರಿತ ಮೊದಲ ಮತ್ತು ಎರಡನೇ ಹಂತದ ಪರೀಕ್ಷೆ, ದಾಖಲೆ ಪರಿಶೀಲನೆ ಹಾಗೂ ವೈದ್ಯಕೀಯ ಪರೀಕ್ಷೆಗಳ ಮೂಲಕ ಆಯ್ಕೆ ನಡೆಯಲಿದೆ. ಹುದ್ದೆಗಳಿಗೆ ಅನುಗುಣವಾಗಿ ಆರಂಭಿಕ ಮೂಲ ವೇತನ ತಿಂಗಳಿಗೆ 29,200ರಿಂದ 35,400ರವರೆಗೆ ಇರಲಿದೆ.

ಅರ್ಜಿ ಶುಲ್ಕ, ವಿನಾಯಿತಿ ಹಾಗೂ ಇತರ ಅರ್ಹತಾ ನಿಯಮಗಳ ಸಂಪೂರ್ಣ ವಿವರವನ್ನು ಅಧಿಕೃತ ಅಧಿಸೂಚನೆಯಲ್ಲಿ ಪರಿಶೀಲಿಸಬೇಕು. ಆಸಕ್ತರು rrbapply.gov.in ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ರೈಲ್ವೆ ನೇಮಕಾತಿ ಮಂಡಳಿಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬಹುದು.

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಮೊದಲು ಅಧಿಕೃತ ಅಧಿಸೂಚನೆಯಲ್ಲಿ ನೀಡಿರುವ ಹುದ್ದೆವಾರು ಅರ್ಹತೆ, ಪರೀಕ್ಷಾ ಮಾದರಿ, ಅಗತ್ಯ ದಾಖಲೆಗಳು ಹಾಗೂ ಅರ್ಜಿ ಸಲ್ಲಿಸುವ ವಿಧಾನವನ್ನು ಪರಿಶೀಲಿಸಬೇಕು. ಕೊನೆಯ ದಿನದವರೆಗೆ ಕಾಯದೆ ನಿಗದಿತ ಅವಧಿಯಲ್ಲೇ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿದೆ.

# 'ರಾಹುಲ್ ಗಾಂಧಿ ನನ್ನನ್ನು ತಳ್ಳಲಿಲ್ಲ'

● ವಿಕ್ರಮ ವಾಹಿನಿ । ನವದೆಹಲಿ

"ದೆಹಲಿಯಲ್ಲಿ ನಡೆದ ಎಸ್ ಐಆರ್ ಪ್ರತಿಭಟನೆ ವೇಳೆ ರಾಹುಲ್ ಗಾಂಧಿ ಅವರು ನನ್ನನ್ನು ತಳ್ಳಲಿಲ್ಲ. ಪ್ರತಿಭಟನಾಕಾರರು ಹೆಚ್ಚಾಗಿದ್ದರಿಂದ ಹಿಂದೆ ಬರುತ್ತಿದ್ದ ವಾಹನದಲ್ಲಿ ಹತ್ತುವಂತೆ ಸಲಹೆ ನೀಡಿ ನನ್ನ ಬಗ್ಗೆ ಕಾಳಜಿ ತೋರಿದರು" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಸ್ಪಷ್ಟನೆ ನೀಡಿದ್ದಾರೆ.



ದೆಹಲಿಯಲ್ಲಿ ಮಾಧ್ಯಮ ಕೇಳಿದ ಪ್ರಶ್ನೆಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು. ದೆಹಲಿ ಚಲೋ ಪ್ರತಿಭಟನೆ ವೇಳೆ ರಾಹುಲ್ ಗಾಂಧಿ ಅವರು ನಿಮ್ಮನ್ನು ತಳ್ಳಿದ್ದಾರೆ ಎಂದು ಬಿಜೆಪಿ ನಾಯಕರು ಆರೋಪ ಮಾಡುತ್ತಿದ್ದಾರೆ ಎಂದು ಕೇಳಿದಾಗ, "ಪ್ರತಿಭಟನೆಯಲ್ಲಿ ಯಾರೂ ಕೂಡ ನನ್ನನ್ನು ತಳ್ಳಲಿಲ್ಲ. ಜನಸಂದಣಿ ಜಾಸ್ತಿ ಇತ್ತು. ಬಿಜೆಪಿ ಅವರಿಗೆ ನನ್ನ ಮೇಲೆ ಸಿಕ್ಕಾಪಟ್ಟೆ ಪ್ರೀತಿ. ಹಾಗಾಗಿ ಈ ರೀತಿ ಅಪಪ್ರಚಾರ ಮಾಡುತ್ತಿದ್ದಾರೆ" ಎಂದು ತಿರುಗೇಟು ನೀಡಿದರು.

# ನೀಟ್ ಸೋರಿಕೆ ತಡೆಯಲು ಎಐ ಅಸ್ತ್ರ

● ವಿಕ್ರಮ ವಾಹಿನಿ । ನವದೆಹಲಿ

ನೀಟ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಮತ್ತು ವಂಚನೆ ತಡೆಯಲು ಪರೀಕ್ಷೆಯ ದಿನವೇ ಕೃತಕ ಬುದ್ಧಿಮತ್ತೆ (ಎಐ) ನೆರವಿನಿಂದ ಪ್ರಶ್ನೆಪತ್ರಿಕೆ ಸಿದ್ಧಪಡಿಸುವ ಹೊಸ ವಿಧಾನವನ್ನು ಇನ್ಫೋಸಿಸ್ ಸಹ–ಸಂಸ್ಥಾಪಕ ನಂದನ್ ನಿಲೇಕಣಿ ಪ್ರಸ್ತಾಪಿಸಿದ್ದಾರೆ.

ನವದೆಹಲಿಯಲ್ಲಿ ಅ.13ರಂದು ನಡೆದ ಬ್ಲೂಮ್‌ಬರ್ಗ್ ನ್ಯೂ ಎಕಾನಮಿ ಫೋರಂನಲ್ಲಿ ಮಾತನಾಡಿದ ಅವರು, ಪರೀಕ್ಷಾ ವ್ಯವಸ್ಥೆಯಲ್ಲಿ ತಂತ್ರಜ್ಞಾನ ಆಧಾರಿತ ಸುಧಾರಣೆಗಳ ಅಗತ್ಯವನ್ನು ಒತ್ತಿಹೇಳಿದರು.

ಪರೀಕ್ಷಾ ಸುಧಾರಣೆಗಳ ಕುರಿತು ಕೇಂದ್ರ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಕಾರ್ಯಪಡೆಯ ನೇತೃತ್ವ ವಹಿಸಿರುವ ನಿಲೇಕಣಿ, ಪ್ರಶ್ನೆಪತ್ರಿಕೆ ಸೋರಿಕೆ ತಡೆಯಲು ಪರ್ಯಾಯ ವ್ಯವಸ್ಥೆ ರೂಪಿಸುವ ಬಗ್ಗೆ ಸಲಹೆ ನೀಡಿದ್ದಾರೆ.

ಈ ಪ್ರಸ್ತಾವನೆಯ ಪ್ರಕಾರ, ಪರೀಕ್ಷಾ ಸಂಸ್ಥೆಗಳು ವಿವಿಧ ವಿಷಯಗಳ ಪ್ರಶ್ನೆಗಳ ಬೃಹತ್ ಸಂಗ್ರಹವನ್ನು ಸಿದ್ಧಪಡಿಸಬೇಕು. ಪರೀಕ್ಷೆ ಆರಂಭವಾಗುವ ಸ್ವಲ್ಪ ಸಮಯದ ಮೊದಲು ಈ ಸಂಗ್ರಹದಿಂದ ಪ್ರಶ್ನೆಗಳನ್ನು ಆಯ್ಕೆ ಮಾಡಿ, ಎಐ ನೆರವಿನಿಂದ ಪ್ರಶ್ನೆಪತ್ರಿಕೆ ರೂಪಿಸಬಹುದು.

ಇದರಿಂದ ಮುಂಚಿತವಾಗಿ ಒಂದೇ ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿ ಮುದ್ರಿಸುವ ಮತ್ತು ವಿತರಿಸುವ ಪ್ರಕ್ರಿಯೆಯ ಮೇಲಿನ ಅವಲಂಬನೆ ಕಡಿಮೆಯಾಗಬಹುದು.

ಪ್ರಶ್ನೆಪತ್ರಿಕೆ ಸೋರಿಕೆಗೆ ಇರುವ ಅವಕಾಶಗಳನ್ನು ಕಡಿಮೆ ಮಾಡುವುದು ಈ ವಿಧಾನದ ಪ್ರಮುಖ ಉದ್ದೇಶವಾಗಿದೆ. ಆದರೆ, ಈ ಪ್ರಸ್ತಾವನೆ ಜಾರಿಗೆ ಬಂದಿದೆಯೇ ಅಥವಾ ಯಾವ ಪರೀಕ್ಷೆಗಳಲ್ಲಿ ಅಳವಡಿಸಲಾಗುತ್ತದೆ ಎಂಬ ಬಗ್ಗೆ ಇನ್ನೂ ಅಧಿಕೃತ ನಿರ್ಧಾರ ಪ್ರಕಟವಾಗಿಲ್ಲ. ಎಐ ಆಧಾರಿತ ಪ್ರಶ್ನೆಪತ್ರಿಕೆ ಸಿದ್ಧತೆಯು ಪರೀಕ್ಷೆಯ ಗುಣಮಟ್ಟ, ಸಮಾನತೆ ಮತ್ತು ಭದ್ರತೆಯನ್ನು ಖಚಿತಪಡಿಸುವಂತೆ ವ್ಯವಸ್ಥೆ ರೂಪಿಸುವುದು ಮುಖ್ಯವಾಗಲಿದೆ.

# ಆರ್‌ಟಿಒಗಳಲ್ಲಿ ಲಂಚಾವತಾರ: ಬಗೆದಷ್ಟು ಬಯಲು!

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ಸಾರಿಗೆ ಇಲಾಖೆಯಲ್ಲಿ ಲಂಚದ ಆರೋಪ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ಹೊರರಾಜ್ಯಗಳಲ್ಲಿ ನೋಂದಣಿಯಾಗಿರುವ ಬಸ್‌ಗಳು ರಾಜ್ಯಕ್ಕೆ ಪ್ರವೇಶಿಸುವಾಗ ತೆರಿಗೆ ಪಾವತಿಸದೆ ಸಂಚರಿಸಲು ಆರ್‌ಟಿಒ ಅಧಿಕಾರಿಗಳ ಹೆಸರಿನಲ್ಲಿ ಡಿಜಿಟಲ್ ಮೂಲಕ ಹಣ ವಸೂಲಿ ಮಾಡಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಈ ಸಂಬಂಧ ಆಡಿಯೊ ದಾಖಲೆಗಳು ಮತ್ತು ವಾಟ್ಸ್‌ಆಪ್ ಸಂದೇಶಗಳು ಬಹಿರಂಗವಾಗಿದ್ದು, ಸಾರಿಗೆ ಆಯುಕ್ತರಿಗೆ ದೂರು ಸಲ್ಲಿಸಲಾಗಿದೆ ಎಂದು ವರದಿಯಾಗಿದೆ. ಇತ್ತೀಚೆಗೆ ಕೋರಮಂಗಲ ಆರ್‌ಟಿಒ ಕಚೇರಿಗೆ ಸಂಬಂಧಿಸಿದ ಅಕ್ರಮಗಳ ಆರೋಪ ಚರ್ಚೆಯಲ್ಲಿರುವಾಗಲೇ, ಕೇರಳ ಮತ್ತು ತಮಿಳುನಾಡಿನಲ್ಲಿ ನೋಂದಣಿಯಾದ ಬಸ್‌ಗಳಿಂದ ಫೋನ್‌ಪೇ ಹಾಗೂ ಗೂಗಲ್‌ಪೇ ಮೂಲಕ ಹಣ ಪಡೆಯಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಎಲೆಕ್ಟ್ರಾನಿಕ್ ಸಿಟಿ ಆರ್‌ಟಿಒಗೆ ಸಂಬಂಧಿಸಿದ ಗುರು ಎಂಬ ವ್ಯಕ್ತಿ ಈ ವಸೂಲಿ ಜಾಲದಲ್ಲಿ ಭಾಗಿಯಾಗಿದ್ದಾರೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.



**ಐದು ಆರ್‌ಟಿಒ ಕಚೇರಿಗಳಿಗೆ ಹಣ ಹಂಚಿಕೆ ಆರೋಪ:**

ಆರೋಪದ ಪ್ರಕಾರ, ಪ್ರತಿ ಬಸ್‌ನಿಂದ ಸಂಗ್ರಹಿಸುವ ರೂ 30 ಸಾವಿರದಲ್ಲಿ ಅತ್ತಿಬೆಲೆ, ಎಲೆಕ್ಟ್ರಾನಿಕ್ ಸಿಟಿ, ಕೋರಮಂಗಲ ಮತ್ತು ರಾಜಾಜಿನಗರ ಆರ್‌ಟಿಒ ಕಚೇರಿಗಳಿಗೆ ತಲಾ ರೂ 5 ಸಾವಿರ ಹಾಗೂ ದೇವನಹಳ್ಳಿ ಆರ್‌ಟಿಒ ಕಚೇರಿಗೆ ರೂ 7 ಸಾವಿರ ನೀಡಲಾಗುತ್ತದೆ ಎನ್ನಲಾಗಿದೆ. ಉಳಿದ ಹಣ ಮಧ್ಯವರ್ತಿಗಳ ಪಾಲಾಗುತ್ತದೆ ಎಂಬ ಆರೋಪವೂ ಇದೆ. ಈ ಆರೋಪಗಳಿಗೆ ಸಂಬಂಧಿಸಿದಂತೆ ಅಧಿಕೃತ ತನಿಖೆಯ ಫಲಿತಾಂಶ ಇನ್ನಷ್ಟೇ ಹೊರಬರಬೇಕಿದೆ.

ಕೇರಳ ಮತ್ತು ತಮಿಳುನಾಡಿನಲ್ಲಿ ನೋಂದಣಿಯಾದ ಬಸ್‌ಗಳು ನಿಯಮಾನುಸಾರ ರಾಜ್ಯಕ್ಕೆ ಪಾವತಿಸಬೇಕಾದ ತೆರಿಗೆಯನ್ನು ತಪ್ಪಿಸಿಕೊಂಡು ಸಂಚರಿಸಲು ಹಣ ಪಡೆಯಲಾಗುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಅತ್ತಿಬೆಲೆಯಿಂದ ದೇವನಹಳ್ಳಿ ಟೋಲ್‌ವರೆಗೆ ಬಸ್‌ಗಳು ಸಂಚರಿಸಲು ಈ ಹಣ ಪಾವತಿಸಬೇಕಾಗುತ್ತದೆ ಎಂಬ ಆರೋಪವೂ ಕೇಳಿಬಂದಿದೆ. ದಿನಕ್ಕೆ ಸುಮಾರು 600ರಿಂದ 650 ಬಸ್‌ಗಳು ಈ ಮಾರ್ಗದಲ್ಲಿ ಸಂಚರಿಸುತ್ತವೆ ಎಂದು ವರದಿಯಾಗಿದ್ದು, ಆರೋಪಗಳು ನಿಜವೆಂದು ಸಾಬೀತಾದರೆ ರಾಜ್ಯದ ಬೊಕ್ಕಸಕ್ಕೆ ದೊಡ್ಡ ಪ್ರಮಾಣದ ನಷ್ಟ ಉಂಟಾಗಿರುವ ಸಾಧ್ಯತೆಯಿದೆ.

ಒಂದು ಬಸ್‌ಗೆ ತ್ರೈಮಾಸಿಕವಾಗಿ ಸುಮಾರು 1.20 ಲಕ್ಷ ತೆರಿಗೆ ಪಾವತಿಸಬೇಕಾಗುತ್ತದೆ ಎನ್ನಲಾಗಿದ್ದು, ಅದಕ್ಕೆ ಬದಲಾಗಿ 30 ಸಾವಿರ ನೀಡುವ ಮೂಲಕ ತೆರಿಗೆ ತಪ್ಪಿಸಲಾಗುತ್ತಿದೆ ಎಂಬ ಆರೋಪ ಗಂಭೀರ ಚರ್ಚೆಗೆ ಕಾರಣವಾಗಿದೆ.

ಈ ಸಂಬಂಧ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಸಾರಿಗೆ ಇಲಾಖೆ ತಿಳಿಸಿದೆ ಎಂದು ವರದಿಯಾಗಿದೆ. ಆರೋಪಗಳ ಸತ್ಯಾಸತ್ಯತೆ ತನಿಖೆಯಿಂದ ದೃಢಪಡಬೇಕಿದ್ದು, ಸಂಬಂಧಪಟ್ಟ ಅಧಿಕಾರಿಗಳ ಪಾತ್ರದ ಬಗ್ಗೆಯೂ ಸ್ಪಷ್ಟತೆ ಬರಬೇಕಿದೆ.

# ಇಂದಿನಿಂದ ರಾಜ್ಯಾದ್ಯಂತ 'ಅನ್ನಸೇವೆ' ಆ್ಯಪ್ ಲಭ್ಯ

● ವಿಕ್ರಮ ವಾಹಿನಿ । ಬೆಂಗಳೂರು

ಅನ್ನಭಾಗ್ಯ ಸೇರಿದಂತೆ ಸಾರ್ವಜನಿಕ ವಿತರಣಾ ವ್ಯವಸ್ಥೆಯ ವಿವಿಧ ಯೋಜನೆಗಳ ಫಲಾನುಭವಿಗಳು ಮನೆಯಲ್ಲೇ ಸ್ವತಃ ಇ–ಕೆವೈಸಿ (e-KYC) ಮಾಡಿಕೊಳ್ಳಲು ಅನುಕೂಲವಾಗುವ 'ಅನ್ನಸೇವೆ' ಮೊಬೈಲ್ ಆಪ್ ಅ.14ರಿಂದ ರಾಜ್ಯಾದ್ಯಂತ ಲಭ್ಯವಾಗಲಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ತಿಳಿಸಿದೆ.

ರಾಷ್ಟ್ರೀಯ ಮಾಹಿತಿ ಕೇಂದ್ರ (ಎನ್‌ಐಸಿ) ಹಾಗೂ ಇ–ಆಡಳಿತ ಇಲಾಖೆಯ ಸಹಯೋಗದಲ್ಲಿ ಅಭಿವೃದ್ಧಿಪಡಿಸಿರುವ ಈ ಆಪ್ ಅನ್ನು ಸಚಿವ ರಿಜ್ವಾನ್ ಅರ್ಷದ್ ಅ.1ರಂದು ಬಿಡುಗಡೆ ಮಾಡಿದ್ದರು. ಮೊದಲ ಹಂತದಲ್ಲಿ ಎಂಟು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಬಳಕೆಗೆ ಅವಕಾಶ ಕಲ್ಪಿಸಲಾಗಿತ್ತು. ಇದೀಗ ರಾಜ್ಯದ ಎಲ್ಲ ಜಿಲ್ಲೆಗಳ ಫಲಾನುಭವಿಗಳೂ ಆಪ್ ಮೂಲಕ ಇ–ಕೆವೈಸಿ ಪೂರ್ಣಗೊಳಿಸಬಹುದು.

ಫಲಾನುಭವಿಗಳು ಗೂಗಲ್ ಪ್ಲೇ ಸ್ಟೋರ್‌ನಿಂದ 'ಅನ್ನಸೇವೆ' ಆಪ್ ಡೌನ್‌ಲೋಡ್ ಮಾಡಿಕೊಂಡು, ಯುಐಡಿಎಐ ಮುಖ ದೃಢೀಕರಣ ವ್ಯವಸ್ಥೆಯ ಮೂಲಕ ಇ–ಕೆವೈಸಿ ಮಾಡಿಕೊಳ್ಳಬಹುದು. ಉದ್ಯೋಗಕ್ಕಾಗಿ ಬೇರೆ ನಗರಗಳಿಗೆ ವಲಸೆ ಹೋಗುವ ಕಾರ್ಮಿಕರು ಇ–ಕೆವೈಸಿಗಾಗಿ ಸ್ವಗ್ರಾಮಗಳಿಗೆ ತೆರಳುವ ಅಗತ್ಯವನ್ನು ಈ ವ್ಯವಸ್ಥೆ ತಪ್ಪಿಸಲಿದೆ. ನ್ಯಾಯಬೆಲೆ ಅಂಗಡಿಗಳ ಮುಂದೆ ಸರದಿ ಸಾಲಿನಲ್ಲಿ ಕಾಯುವ ತೊಂದರೆಯೂ ಕಡಿಮೆಯಾಗಲಿದೆ.

ಅ.1ರಿಂದ 12ರವರೆಗೆ ಪ್ರಾಯೋಗಿಕವಾಗಿ ಆಪ್ ಲಭ್ಯವಿದ್ದ ಎಂಟು ಜಿಲ್ಲೆಗಳ 1,60,267 ಫಲಾನುಭವಿಗಳು ಇದರ ಮೂಲಕ ಇ–ಕೆವೈಸಿ ಪೂರ್ಣಗೊಳಿಸಿದ್ದಾರೆ. ರಾಜ್ಯದಲ್ಲಿ ಇ–ಕೆವೈಸಿ ಮಾಡಿಸಬೇಕಿರುವ 2,67,64,276 ಫಲಾನುಭವಿಗಳ ಪೈಕಿ ಅ.12ರ ವೇಳೆಗೆ 2,06,76,278 ಮಂದಿ ಪ್ರಕ್ರಿಯೆ ಪೂರ್ಣಗೊಳಿಸಿದ್ದಾರೆ. ಇನ್ನೂ 60 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಇ–ಕೆವೈಸಿ ಮಾಡಿಸಬೇಕಿದೆ.

ಈ ಹಿಂದೆ ಇ–ಕೆವೈಸಿ ಮಾಡಿಸಿಕೊಂಡವರೂ ಮತ್ತೊಮ್ಮೆ ಪ್ರಕ್ರಿಯೆ ಪೂರ್ಣಗೊಳಿಸುವುದು ಕಡ್ಡಾಯ ಎಂದು ಇಲಾಖೆ ತಿಳಿಸಿದೆ. ಇ–ಕೆವೈಸಿ ಮಾಡಲು ಅ.20 ಕೊನೆಯ ದಿನವಾಗಿದ್ದು, ಬಾಕಿ ಉಳಿದಿರುವ ಫಲಾನುಭವಿಗಳು 'ಅನ್ನಸೇವೆ' ಆಪ್‌ನ ಸೌಲಭ್ಯ ಬಳಸಿಕೊಂಡು ನಿಗದಿತ ಅವಧಿಯೊಳಗೆ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸಚಿವ ರಿಜ್ವಾನ್ ಅರ್ಷದ್ ಮನವಿ ಮಾಡಿದ್ದಾರೆ.

# ಎಸ್‌ಐಆರ್ ಸಮರ್ಥನೆ: ಕಾಂಗ್ರೆಸ್ ವಿರುದ್ಧ ಛಲವಾದಿ ವಾಗ್ದಾಳಿ

● ವಿಕ್ರಮ ವಾಹಿನಿ । ರಾಯಚೂರು

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯನ್ನು ಸಮರ್ಥಿಸಿಕೊಂಡ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮತಗಳ್ಳತನದ ಆರೋಪದ ಮೂಲಕ ಕಾಂಗ್ರೆಸ್ ಜನರ ಗಮನವನ್ನು ಬೇರೆಡೆ ಸೆಳೆಯುತ್ತಿದೆ ಎಂದು ಟೀಕಿಸಿದ್ದಾರೆ.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅನರ್ಹ ಹೆಸರುಗಳನ್ನು ತೆಗೆದುಹಾಕುವುದರಿಂದ ಮತದಾರರ ಪಟ್ಟಿ ಶುದ್ಧೀಕರಣಕ್ಕೆ ನೆರವಾಗಲಿದೆ ಎಂದರು. ರಾಜ್ಯದಲ್ಲಿ ಮಳೆ ಕೊರತೆ, ಮೇವಿನ ಅಭಾವ ಮತ್ತು ಕುಡಿಯುವ ನೀರಿನ ಸಮಸ್ಯೆಗಳಿದ್ದರೂ ಸರ್ಕಾರ ರೈತರ ಸಂಕಷ್ಟಗಳಿಗೆ ಪರಿಹಾರ ಕಲ್ಪಿಸುವ ಬದಲು ರಾಜಕೀಯ ಆರೋಪಗಳಲ್ಲಿ ತೊಡಗಿದೆ ಎಂದು ದೂರಿದರು.

ಸ್ಟಿಂಗ್ ಆಪರೇಷನ್ ವಿವಾದದ ಕುರಿತು ಮಾತನಾಡಿದ ಅವರು, ಪ್ರಕರಣದ ಹಿಂದಿರುವವರನ್ನು ಪತ್ತೆಹಚ್ಚಿ ಸತ್ಯಾಂಶ ಬಹಿರಂಗಪಡಿಸಬೇಕು. ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಆಗ್ರಹಿಸಿದರು.

ಕಬ್ಬು ಬೆಳೆಗಾರರ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಅವರು, ರೈತರಿಗೆ ನ್ಯಾಯಯುತ ಬೆಲೆ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ಸಮಿತಿ ರಚಿಸಿ ಸಮಸ್ಯೆ ಪರಿಹರಿಸುವ ಪ್ರಯತ್ನ ಮಾಡುತ್ತಿರುವುದನ್ನು ಸ್ವಾಗತಿಸಿದ ಅವರು, ರೈತರ ಬೇಡಿಕೆಗಳಿಗೆ ಶೀಘ್ರ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಸ್ಟಿಂಗ್ ಆಪರೇಷನ್ ವಿವಾದದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರನ್ನು ಎಳೆದು ತಂದು ಅವಮಾನಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಛಲವಾದಿ ನಾರಾಯಣಸ್ವಾಮಿ, ಈ ಬೆಳವಣಿಗೆಗಳ ಹಿಂದೆ ಯಾರಿದ್ದಾರೆ ಎಂಬುದು ತನಿಖೆಯಿಂದ ಬಹಿರಂಗವಾಗಬೇಕು. ರಾಜಕೀಯ ಆರೋಪಗಳಿಗಿಂತ ಜನರ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

# ರಾಜ್ಯದಲ್ಲಿ 37,243 ರೌಡಿಗಳು: ಬೆಂಗಳೂರಿನಲ್ಲೇ 6,952 ಮಂದಿ

● ವಿಕ್ರಮ ವಾಹಿನಿ । ಬೆಂಗಳೂರು

**ರಾಜ್ಯದಲ್ಲಿ 37,243 ಮಂದಿ ರೌಡಿಪಟ್ಟಿಯಲ್ಲಿದ್ದು, ಬೆಂಗಳೂರಿನಲ್ಲೇ ಸುಮಾರು 7 ಸಾವಿರ ಮಂದಿ ಗುರುತಿಸಲ್ಪಟ್ಟಿದ್ದಾರೆ. ರೌಡಿ ನಿಗ್ರಹ ಪಡೆ ಕಾರ್ಯಾಚರಣೆ ನಡುವೆಯೂ ಅಪರಾಧ ಚಟುವಟಿಕೆಗಳು ಮುಂದುವರಿದಿದ್ದು, ಈ ವರ್ಷದ ಏಳು ತಿಂಗಳಲ್ಲಿ 8,430 ಪ್ರಕರಣಗಳು ದಾಖಲಾಗಿವೆ.**

ರಾಜ್ಯದಲ್ಲಿ ಒಟ್ಟು 37,243 ಮಂದಿ ರೌಡಿಪಟ್ಟಿಯಲ್ಲಿದ್ದು, ಬೆಂಗಳೂರಿನಲ್ಲೇ 6,952 ಮಂದಿ ಗುರುತಿಸಲ್ಪಟ್ಟಿದ್ದಾರೆ. ರೌಡಿ ನಿಗ್ರಹ ಪಡೆ ರಚನೆ, ನಿರಂತರ ಕಾರ್ಯಾಚರಣೆಗಳ ನಡುವೆಯೂ ಹಫ್ತಾ ವಸೂಲಿ, ಸುಲಿಗೆ, ಹಲ್ಲೆ ಹಾಗೂ ಬಿಲ್ಡರ್‌ಗಳಿಗೆ ಬೆದರಿಕೆ ಹಾಕುವಂತಹ ಅಪರಾಧ ಚಟುವಟಿಕೆಗಳು ಪೊಲೀಸರಿಗೆ ಸವಾಲಾಗಿವೆ.

ಬೆಂಗಳೂರು ನಗರದಲ್ಲಿ 2023ರಲ್ಲಿ 7,320, 2024ರಲ್ಲಿ 6,350 ಮತ್ತು 2025ರಲ್ಲಿ 6,620 ರೌಡಿಗಳಿದ್ದರು. ಈ ವರ್ಷದ ಮೊದಲ ಏಳು ತಿಂಗಳಲ್ಲಿ ಸಂಖ್ಯೆ 6,952ಕ್ಕೆ ಏರಿಕೆಯಾಗಿದೆ. ದಕ್ಷಿಣ ಕನ್ನಡ, ತುಮಕೂರು ಮತ್ತು ರಾಯಚೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿಯೂ ರೌಡಿ ಚಟುವಟಿಕೆಗಳು ಮುಂದುವರಿದಿವೆ. ಮತ್ತೊಂದೆಡೆ, ಕೊಪ್ಪಳ, ಕಲಬುರಗಿ, ಶಿವಮೊಗ್ಗ, ಕೋಲಾರ ಮತ್ತು ಹುಬ್ಬಳ್ಳಿ–ಧಾರವಾಡ ಜಿಲ್ಲೆಗಳಲ್ಲಿ ಇಳಿಕೆ ಕಂಡುಬಂದಿದೆ ಎಂದು ವರದಿಯಾಗಿದೆ.

ಪೊಲೀಸ್ ಇಲಾಖೆಯ ಅಂಕಿ–ಅಂಶಗಳ ಪ್ರಕಾರ, ಈ ವರ್ಷದ ಮೊದಲ ಏಳು ತಿಂಗಳಲ್ಲಿ ರೌಡಿಗಳ ವಿರುದ್ಧ 8,430 ಪ್ರಕರಣಗಳು ದಾಖಲಾಗಿವೆ. 527 ಮಂದಿಯನ್ನು ಗಡಿಪಾರು ಮಾಡಲಾಗಿದ್ದು, 42 ಮಂದಿಯ ವಿರುದ್ಧ ಕೋಕಾ ಕಾಯ್ದೆ ಹಾಗೂ 53 ಮಂದಿಯ ವಿರುದ್ಧ ಗೂಂಡಾ ಕಾಯ್ದೆಯಡಿ ಕ್ರಮ ಕೈಗೊಳ್ಳಲಾಗಿದೆ.

ರೌಡಿಗಳ ಚಟುವಟಿಕೆಗಳ ಮೇಲೆ ನಿಗಾ ಇರಿಸಲು ಪೊಲೀಸ್ ಠಾಣೆಗಳ ಮಟ್ಟದಲ್ಲಿ ವಿಶೇಷ ಕಾರ್ಯಾಚರಣೆ ನಡೆಸಲಾಗುತ್ತಿದೆ. ರೌಡಿಶೀಟ್‌ಗಳನ್ನು ನಿಯಮಿತವಾಗಿ ಪರಿಶೀಲಿಸಿ, ಅಪರಾಧ ಚಟುವಟಿಕೆಗಳಿಂದ ದೂರವಿದ್ದು ಉತ್ತಮ ನಡತೆ ತೋರುವವರ ಹೆಸರನ್ನು ನಿಯಮಾನುಸಾರ ಕೈಬಿಡಲಾಗುತ್ತದೆ. ಅಪರಾಧಗಳಲ್ಲಿ ನಿರಂತರವಾಗಿ ಭಾಗಿಯಾಗುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ತಿಳಿಸಿದ್ದಾರೆ.

## ಪೈಲಟ್ ಮೇಲಿನ ಹಲ್ಲೆ: ಇಬ್ಬರು ಸಹ-ಪೈಲಟ್‌ಗಳು ವಶಕ್ಕೆ

● ವಿಕ್ರಮ ವಾಹಿನಿ । ದುಬೈ

ಭಾರತೀಯ ವಿಮಾನ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರ ಮೇಲೆ ಹಲ್ಲೆ ನಡೆಸಿದ ಆರೋಪ ಎದುರಿಸುತ್ತಿರುವ ಒಮಾನಿ ಸಹ-ಪೈಲಟ್ ಹಮಾಮ್ ಅಲ್-ಹಮ್ಮಮಿ ಜತೆ ನಿಕಟ ಸಂಪರ್ಕ ಹೊಂದಿದ್ದ ಮಾಲ್ಡೀವ್ಸ್‌ನ ಇಬ್ಬರು ಸಹ-ಪೈಲಟ್‌ಗಳನ್ನು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ಅಧಿಕಾರಿಗಳು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಸೆಪ್ಟೆಂಬರ್ 30ರಂದು ಫ್ಲೈದುಬೈ ವಿಮಾನಯಾನ ಸಂಸ್ಥೆಯ ಕಾರ್ಯಾಚರಣೆಯ ವೇಳೆ ಕ್ಯಾಪ್ಟನ್ ಮಚ್ಚಾರ್ ಅವರ ಮೇಲೆ ಹಲ್ಲೆ ನಡೆದಿತ್ತು ಎನ್ನಲಾಗಿದೆ. ಪ್ರಕರಣದ ತನಿಖೆಯನ್ನು ತೀವ್ರಗೊಳಿಸಿರುವ ಅಧಿಕಾರಿಗಳು, ಅಕ್ಟೋಬರ್ 3ರಂದು ಮಾಲ್ಡೀವ್ಸ್ ಮೂಲದ ಇಬ್ಬರು ಸಹ-ಪೈಲಟ್‌ಗಳನ್ನು ವಶಕ್ಕೆ ಪಡೆದಿದ್ದಾರೆ ಎಂದು ವರದಿಗಳು ತಿಳಿಸಿವೆ.

ತನಿಖಾಧಿಕಾರಿಗಳ ಪ್ರಕಾರ, ಈ ಇಬ್ಬರು ಸಹ-ಪೈಲಟ್‌ಗಳು ಅಲ್-ಹಮ್ಮಮಿ ಜತೆ ನಿಕಟ ಸಂಬಂಧ ಹೊಂದಿದ್ದರು. ಮೂವರು ಒಂದೇ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದು, ವಿಮಾನ ಹಾರಾಟದ ಪಾಳಿಗಳನ್ನು ಹಂಚಿಕೊಳ್ಳುತ್ತಿದ್ದರು. ಅಲ್ಲದೆ, ಒಂದೇ ವಸತಿ ಕಟ್ಟಡದಲ್ಲಿ ವಾಸಿಸುತ್ತಿದ್ದರು ಎನ್ನಲಾಗಿದೆ.

ಅಲ್-ಹಮ್ಮಮಿ ಅವರ ಹಿನ್ನೆಲೆ, ಸಂಪರ್ಕಗಳು ಹಾಗೂ ಅವರೊಂದಿಗೆ ವಶಕ್ಕೆ ಪಡೆದಿರುವ ಇಬ್ಬರು ಸಹ-ಪೈಲಟ್‌ಗಳ ಸಂಬಂಧದ ಕುರಿತು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಭಯೋತ್ಪಾದನೆ ನಿಗ್ರಹ ದಳದ ಅಧಿಕಾರಿಗಳು, ಆರೋಪಿಯು ಉಗ್ರಗಾಮಿ ವಿಚಾರಗಳನ್ನು ವ್ಯಕ್ತಪಡಿಸಿದ್ದರೇ ಅಥವಾ ಸೆಪ್ಟೆಂಬರ್ 11ರ ಅಮೆರಿಕದ ದಾಳಿಯ ಮಾದರಿಯ ಘಟನೆಗಳ ಕುರಿತು ಪ್ರಸ್ತಾಪಿಸಿದ್ದರೇ ಎಂಬ ಬಗ್ಗೆಯೂ ವಿಚಾರಣೆ ನಡೆಸುತ್ತಿದ್ದಾರೆ ಎಂದು ವರದಿಗಳು ಹೇಳಿವೆ.

ಆದಾಗ್ಯೂ, ವಶಕ್ಕೆ ಪಡೆದಿರುವ ಇಬ್ಬರು ಸಹ-ಪೈಲಟ್‌ಗಳ ವಿರುದ್ಧದ ಆರೋಪಗಳು ಅಥವಾ ಪ್ರಕರಣದಲ್ಲಿ ಅವರ ಪಾತ್ರದ ಕುರಿತು ಅಂತಿಮ ನಿರ್ಧಾರ ಹೊರಬಿದ್ದಿಲ್ಲ. ತನಿಖೆಯ ಮುಂದಿನ ಬೆಳವಣಿಗೆಗಳ ಬಳಿಕ ಹೆಚ್ಚಿನ ಮಾಹಿತಿ ಲಭ್ಯವಾಗುವ ನಿರೀಕ್ಷೆಯಿದೆ.

## ಪ್ರಗತಿಪಥ ಯೋಜನೆ: ಮೊದಲ ಹಂತದಲ್ಲಿ 2,248 ಕಿ.ಮೀ. ರಸ್ತೆ ಅಭಿವೃದ್ಧಿ

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದ 202 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಪ್ರಗತಿಪಥ ಯೋಜನೆಯಡಿ 5,400 ಕಿ.ಮೀ. ಗ್ರಾಮೀಣ ರಸ್ತೆ ಅಭಿವೃದ್ಧಿಪಡಿಸಲಾಗುತ್ತಿದ್ದು, ಮೊದಲ ಹಂತದಲ್ಲಿ 2,248 ಕಿ.ಮೀ. ರಸ್ತೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸೋಮವಾರ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮೊದಲ ಹಂತದಲ್ಲಿ 1,692 ಕೋಟಿ ಅಂದಾಜು ವೆಚ್ಚದಲ್ಲಿ 562 ರಸ್ತೆಗಳ ಅಭಿವೃದ್ಧಿಗೆ ಯೋಜನೆ ರೂಪಿಸಲಾಗಿದೆ. ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಏಷ್ಯಾ ಅಭಿವೃದ್ಧಿ ಬ್ಯಾಂಕ್‌ನ ನೆರವಿನೊಂದಿಗೆ ಅನುಷ್ಠಾನಗೊಳ್ಳುತ್ತಿರುವ ಯೋಜನೆಯ ಒಟ್ಟು ವೆಚ್ಚದಲ್ಲಿ ಬ್ಯಾಂಕ್ ಶೇ.70ರಷ್ಟು ಹಾಗೂ ರಾಜ್ಯ ಸರ್ಕಾರ ಶೇ.30ರಷ್ಟು ಅನುದಾನ ಒದಗಿಸಲಿದೆ. ಮೊದಲ ಹಂತದ ಕಾಮಗಾರಿಗಳಿಗೆ ನವೆಂಬರ್ ಮೊದಲ ವಾರದಲ್ಲಿ ಚಾಲನೆ ನೀಡಲು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಚಿವರು ನಿರ್ದೇಶನ ನೀಡಿದರು.

ಸಭೆಯಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ, ಗ್ರಾಮೀಣಾಭಿವೃದ್ಧಿ ಇಲಾಖೆಯ ನಿರ್ದೇಶಕ ದೇವರಾಜೇಗೌಡ, ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಮುಖ್ಯ ಎಂಜಿನಿಯರ್ ಮುರಳೀಧರ್ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

## ‘ಫಾರಂ-7 ಆಕ್ಷೇಪಣೆಗಳ ಬಗ್ಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡಲಿ’

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಮಾಹಿತಿ ಸಾರ್ವಜನಿಕವಾಗಿ ಲಭ್ಯವಿದೆ ಎಂಬ ಕಾರಣಕ್ಕೆ ಒಂದೇ ಸಮುದಾಯದ ನೂರಾರು ಮತದಾರರ ಹೆಸರುಗಳನ್ನು ಒಟ್ಟುಗೂಡಿಸಿ ಫಾರಂ-7 ಮೂಲಕ ಆಕ್ಷೇಪಣೆ ಸಲ್ಲಿಸುವುದನ್ನು ಸಮರ್ಥಿಸಲಾಗುವುದಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಹೇಳಿದ್ದಾರೆ.



ಮತದಾರರ ಮಾಹಿತಿಯ ಬಳಕೆ, ಫಾರಂ-7 ಅರ್ಜಿಗಳ ಸಲ್ಲಿಕೆ ಹಾಗೂ ಆಕ್ಷೇಪಣೆಗಳ ಪರಿಶೀಲನಾ ಪ್ರಕ್ರಿಯೆ ಕುರಿತು ಚುನಾವಣಾ ಆಯೋಗ ಸೂಕ್ತ ಸ್ಪಷ್ಟನೆ ನೀಡಬೇಕು ಎಂದು ಅವರು ಆಗ್ರಹಿಸಿದರು.

ವೈಯಾಲಿಕಾವಲ್ ಮತ್ತು ಯಶವಂತಪುರ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ಎರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ಹೈಕೋರ್ಟ್ ತಡೆಯಾಜ್ಞೆ ನೀಡಿರುವ ಕುರಿತು ಪ್ರತಿಕ್ರಿಯಿಸಿದ ಅವರು, ತಮ್ಮ ಆಕ್ಷೇಪಣೆ ನ್ಯಾಯಾಲಯದ ವಿರುದ್ಧವಲ್ಲ, ಚುನಾವಣಾ ಆಯೋಗದ ಕಾರ್ಯವಿಧಾನದ ಬಗ್ಗೆ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆಗೆ ಅನುಸರಿಸುತ್ತಿರುವ ಪ್ರಕ್ರಿಯೆ, ಕೈಗೊಂಡಿರುವ ಕ್ರಮಗಳು ಹಾಗೂ ಅವುಗಳ ಪರಿಣಾಮಗಳ ಬಗ್ಗೆ ಪ್ರಶ್ನಿಸುತ್ತಿದ್ದೇವೆ. ನ್ಯಾಯಾಲಯದ ವಿರುದ್ಧ ಯಾವುದೇ ಆಕ್ಷೇಪಣೆ ಇಲ್ಲ. ಚುನಾವಣಾ ಆಯೋಗದ ಕ್ರಮಗಳು ಸಂವಿಧಾನಾತ್ಮಕ ಮೌಲ್ಯಗಳು ಮತ್ತು ಮತದಾರರ ಹಕ್ಕುಗಳಿಗೆ ಅನುಗುಣವಾಗಿರಬೇಕು ಎಂಬುದು ನಮ್ಮ ನಿಲುವು ಎಂದು ಸ್ಪಷ್ಟಪಡಿಸಿದರು.

**ವಿಪತ್ತು ಸಂಭವಿಸುವ ಮುನ್ನವೇ ಮುನ್ನೆಚ್ಚರಿಕೆ ಅಗತ್ಯ**

ಬರ ಹಾಗೂ ವಿಪತ್ತು ನಿರ್ವಹಣೆಗೆ ಸಂಬಂಧಿಸಿದ ಸಭೆಯ ಕುರಿತು ಮಾತನಾಡಿದ ಪರಮೇಶ್ವರ, ವಿಪತ್ತು ಸಂಭವಿಸಿದ ಬಳಿಕ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳನ್ನು ಕೈಗೊಳ್ಳುವುದರ ಜೊತೆಗೆ, ವಿಪತ್ತು ಸಂಭವಿಸುವ ಮೊದಲೇ ಮುನ್ನೆಚ್ಚರಿಕಾ ಕ್ರಮಗಳಿಗೆ ಆದ್ಯತೆ ನೀಡಬೇಕಿದೆ ಎಂದರು.

ಸಂಭವನೀಯ ಅಪಾಯಗಳ ಕುರಿತು ಸಾರ್ವಜನಿಕರಿಗೆ ಮುಂಚಿತವಾಗಿ ಮಾಹಿತಿ ನೀಡುವುದು, ಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವ ಕುರಿತು ಚರ್ಚಿಸಲು ರಾಷ್ಟ್ರೀಯ ಮಟ್ಟದ ವಿಚಾರಸಂಕಿರಣ ಆಯೋಜಿಸಲಾಗಿದೆ. ವಿಪತ್ತು ನಿರ್ವಹಣೆಯಲ್ಲಿ ಮುನ್ನೆಚ್ಚರಿಕೆ ಮತ್ತು ಪೂರ್ವಸಿದ್ಧತೆಗೆ ಹೆಚ್ಚಿನ ಮಹತ್ವ ನೀಡುವ ಅಗತ್ಯವಿದೆ ಎಂದು ಅವರು ತಿಳಿಸಿದರು.

## ಸುಪ್ರೀಂ ಕೋರ್ಟ್ ಮೆರವಣಿಗೆ: ರಾಹುಲ್ ಗಾಂಧಿ ವಿರುದ್ಧ ಎಫ್ಐಆರ್

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯಲ್ಲಿನ ಅಕ್ರಮಗಳನ್ನು ಖಂಡಿಸಿ ಸುಪ್ರೀಂ ಕೋರ್ಟ್‌ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದ ಇಂಡಿಯಾ ಮೈತ್ರಿಕೂಟದ ನಾಯಕರು ಮತ್ತು ಬೆಂಬಲಿಗರ ವಿರುದ್ಧ ದೆಹಲಿ ಪೊಲೀಸರು ಹಲವು ಎಫ್ಐಆರ್‌ಗಳನ್ನು ದಾಖಲಿಸಿದ್ದಾರೆ.

ನಿಷೇಧಾಜ್ಞೆ ಉಲ್ಲಂಘಿಸಿದ ಆರೋಪದಡಿ ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ 163ನೇ ವಿಧಿಗೆ ಸಂಬಂಧಿಸಿದಂತೆ ಕನ್ನಾಟ್ ಪ್ಲೇಸ್, ತಿಲಕ್ ಮಾರ್ಗ, ಬರಾಖಂಬಾ ಮತ್ತು ಮಂದಿರ ಮಾರ್ಗ ಪೊಲೀಸ್ ಠಾಣೆಗಳಲ್ಲಿ ಪ್ರಕರಣಗಳು ದಾಖಲಾಗಿವೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಹಲವು ವಿರೋಧ ಪಕ್ಷದ ನಾಯಕರ ನೇತೃತ್ವದಲ್ಲಿ ನಡೆದ ಪ್ರತಿಭಟನೆಗೆ ಸಂಬಂಧಿಸಿದಂತೆ ಈ ಕ್ರಮ ಕೈಗೊಳ್ಳಲಾಗಿದೆ.

ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ಮುರಿದು, ಅನುಮತಿಯಿಲ್ಲದೆ ಸುಪ್ರೀಂ ಕೋರ್ಟ್‌ನತ್ತ ಸಾಗಲು ಯತ್ನಿಸಿದರು ಎಂದು ಪೊಲೀಸರು ಆರೋಪಿಸಿದ್ದಾರೆ. ಕೆಲವು ಪ್ರತಿಭಟನಾಕಾರರು ಬ್ಯಾರಿಕೇಡ್‌ಗಳನ್ನು ತಳ್ಳಿಕೊಂಡು ಮುಂದೆ ಸಾಗಲು ಸಣ್ಣ ಸರಕು ಸಾಗಣೆ ವಾಹನವನ್ನು ಬಳಸಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದೆಹಲಿಯ ಕಾನ್ಸಿಟ್ಯೂಷನ್ ಕ್ಲಬ್‌ನಿಂದ ಆರಂಭವಾದ ಮೆರವಣಿಗೆಯನ್ನು ಸುಪ್ರೀಂ ಕೋರ್ಟ್‌ನಿಂದ ಸುಮಾರು 500 ಮೀಟರ್ ದೂರದಲ್ಲಿ ತಡೆಯಲಾಗಿತ್ತು. ಬಳಿಕ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಮತ್ತು ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ ಸೇರಿದಂತೆ 11 ವಿರೋಧ ಪಕ್ಷದ ನಾಯಕರು ಸುಪ್ರೀಂ ಕೋರ್ಟ್ ಆವರಣ ಪ್ರವೇಶಿಸಿ, ಎಸ್ಐಆರ್ ಪ್ರಕ್ರಿಯೆಯನ್ನು ಪ್ರಶ್ನಿಸಿ ಜಂಟಿಯಾಗಿ ಅರ್ಜಿ ಸಲ್ಲಿಸಿದ್ದರು.

ಮತದಾರರ ಪಟ್ಟಿಯ ಪರಿಷ್ಕರಣೆ ವೇಳೆ ಚುನಾವಣಾ ಆಯೋಗ ಕೈಗೊಂಡ ನಿರ್ಧಾರಗಳು ಮತ್ತು ಅವುಗಳ ಅನುಷ್ಠಾನದ ಕುರಿತು ನ್ಯಾಯಾಂಗ ಪರಿಶೀಲನೆ ನಡೆಸಬೇಕೆಂದು ಅರ್ಜಿದಾರರು ಕೋರಿದ್ದಾರೆ.

ಪೊಲೀಸರ ಕ್ರಮವನ್ನು ಖಂಡಿಸಿರುವ ರಾಹುಲ್ ಗಾಂಧಿ, ಪ್ರಜಾಸತ್ತಾತ್ಮಕ ಪ್ರತಿಭಟನೆಯನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ. ಸಂವಿಧಾನ ಮತ್ತು ಯುವಜನರ ಹಕ್ಕುಗಳ ರಕ್ಷಣೆಗಾಗಿ ಹೋರಾಟ ನಡೆಸಲಾಗುತ್ತಿದ್ದು, ಪೊಲೀಸ್ ಬಲಪ್ರಯೋಗದಿಂದ ತಮ್ಮನ್ನು ತಡೆಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಇಂಡಿಯಾ ಮೈತ್ರಿಕೂಟ ಯಾವುದೇ ಬೆದರಿಕೆಗಳಿಗೆ ಮಣಿಯುವುದಿಲ್ಲ; ಪ್ರಜಾಪ್ರಭುತ್ವ ಮತ್ತು ಸಂವಿಧಾನದ ರಕ್ಷಣೆಗಾಗಿ ಹೋರಾಟ ಮುಂದುವರಿಯಲಿದೆ ಎಂದು ತಿಳಿಸಿದ್ದಾರೆ.

ಇನ್ನೊಂದೆಡೆ, ದೆಹಲಿಯ ಅತಿ ಭದ್ರತೆಯ ಪ್ರದೇಶಗಳಲ್ಲಿ ನಿಯಮ ಉಲ್ಲಂಘನೆಯನ್ನು ಸಹಿಸುವುದಿಲ್ಲ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಪ್ರತಿಭಟನೆಯ ವಿಡಿಯೊ ದೃಶ್ಯಾವಳಿಗಳನ್ನು ಪರಿಶೀಲಿಸಿ, ನಿಯಮ ಉಲ್ಲಂಘಿಸಿದವರನ್ನು ಗುರುತಿಸಲಾಗುತ್ತಿದೆ. ತನಿಖೆಯ ಆಧಾರದಲ್ಲಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ರೋರಿಕ್-ದೇವಿಕಾ ರಾಣಿ ಎಸ್ಟೇಟ್ ಅಭಿವೃದ್ಧಿ ಕಾಮಗಾರಿ ಚುರುಕುಗೊಳಿಸಿ: ಜಾರ್ಜ್

● ವಿಕ್ರಮ ವಾಹಿನಿ । ಬೆಂಗಳೂರು

ರೋರಿಕ್-ದೇವಿಕಾ ರಾಣಿ ಎಸ್ಟೇಟ್‌ನಲ್ಲಿ ನ್ಯಾಯಾಲಯದ ನಿರ್ದೇಶನಗಳ ಮಿತಿಯಲ್ಲಿ ಕೈಗೊಳ್ಳಲಾಗುತ್ತಿರುವ ಪರಿಸರ ಸ್ನೇಹಿ ಅಭಿವೃದ್ಧಿ ಕಾಮಗಾರಿಗಳನ್ನು ಚುರುಕುಗೊಳಿಸಿ, ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಎಸ್ಟೇಟ್‌ಗೆ ಭೇಟಿ ನೀಡಿದ ಸಚಿವರು, ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿ, ಪ್ರವಾಸಿಗರಿಗೆ ಅಗತ್ಯ ಮೂಲಸೌಲಭ್ಯಗಳನ್ನು ಕಲ್ಪಿಸುವಂತೆ ಸೂಚಿಸಿದರು.



ಎಸ್ಟೇಟ್‌ನ ನೈಸರ್ಗಿಕ ಪರಿಸರ, ಹಸಿರು ವಲಯ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸಿಕೊಂಡೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು. ಇಲ್ಲಿನ ಪ್ರತಿಯೊಂದು ಕಾಮಗಾರಿಯೂ ನ್ಯಾಯಾಲಯದ ನಿರ್ದೇಶನ ಹಾಗೂ ಪರಿಸರ ಸಂರಕ್ಷಣಾ ಮಾನದಂಡಗಳಿಗೆ ಅನುಗುಣವಾಗಿರಬೇಕು. ಅನುಮತಿ ಪಡೆದ ಕಾಮಗಾರಿಗಳನ್ನು ವಿಳಂಬವಿಲ್ಲದೆ ಪೂರ್ಣಗೊಳಿಸಿ, ಎಸ್ಟೇಟ್ ಅನ್ನು ಸಂರಕ್ಷಣೆ ಆಧಾರಿತ ಪರಿಸರ ಪ್ರವಾಸೋದ್ಯಮ ತಾಣವನ್ನಾಗಿ ರೂಪಿಸುವುದು ಉದ್ದೇಶವಾಗಿದೆ ಎಂದು ಜಾರ್ಜ್ ತಿಳಿಸಿದರು. ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ರಾಮ್ ಪ್ರಸಾತ್ ಮನೋಹರ್ ಮಾತನಾಡಿ, ಪರಿಸರ ಮತ್ತು ಕಲಾತ್ಮಕ ಪರಂಪರೆಯ ಮಹತ್ವವನ್ನು ಕಾಪಾಡಿಕೊಂಡೇ ಪ್ರವಾಸಿಗರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗುವುದು. ನ್ಯಾಯಾಲಯ ಅನುಮತಿಸಿರುವ ಕಾಮಗಾರಿಗಳಿಗೆ ಆದ್ಯತೆ ನೀಡಿ, ಸಂಬಂಧಿತ ಇಲಾಖೆಗಳ ಸಮನ್ವಯದೊಂದಿಗೆ ಮುಂದಿನ ಹಂತದ ಅಭಿವೃದ್ಧಿ ಕಾರ್ಯಗಳನ್ನು ಯೋಜಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆಯ ಆಯುಕ್ತ ಶಿವಪ್ರಸಾದ್ ಪಿ.ಆರ್., ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ಸ್ ವ್ಯವಸ್ಥಾಪಕ ನಿರ್ದೇಶಕ ಶಿವರಾಮ್ ಬಾಬು ಎಂ. ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಬುದ್ಧಿವಾದ ಹೇಳಿದ ಅಜ್ಜಿಯನ್ನೇ ಕೊಂದ ಮೊಮ್ಮಗಳು!

● ವಿಕ್ರಮ ವಾಹಿನಿ । ಮಂಡ್ಯ

ಪ್ರೀತಿಯ ವಿಚಾರವಾಗಿ ಬುದ್ಧಿವಾದ ಹೇಳಿದ್ದಕ್ಕೆ ಅಜ್ಜಿಯನ್ನೇ ಕೊಲೆ ಮಾಡಿದ ಆರೋಪದ ಮೇಲೆ 16 ವರ್ಷದ ಮೊಮ್ಮಗಳು ಹಾಗೂ ಆಕೆಯ ಪ್ರಿಯಕರನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಕೆ.ಆರ್.ಪೇಟೆ ತಾಲ್ಲೂಕಿನ ಬೂಕನಕೆರೆ ಗ್ರಾಮದಲ್ಲಿ ನಡೆದ ಈ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಬೂಕನಕೆರೆ ಗ್ರಾಮದ ಮಹದೇವಮ್ಮ (52) ಕೊಲೆಯಾದವರು. ಅವರ ಮೊಮ್ಮಗಳು ಕೀರ್ತನಾ, ಆಕಾಶ್ ಎಂಬ ಯುವಕನನ್ನು ಪ್ರೀತಿಸುತ್ತಿದ್ದಳು ಎನ್ನಲಾಗಿದೆ. ಈ ವಿಚಾರ ತಿಳಿದ ಮಹದೇವಮ್ಮ, ಯುವಕನ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ಮೊಮ್ಮಗಳಿಗೆ ಬುದ್ಧಿವಾದ ಹೇಳಿದ್ದರು. ಇದರಿಂದ ಕೋಪಗೊಂಡ ಕೀರ್ತನಾ, ಪ್ರಿಯಕರನೊಂದಿಗೆ ಸೇರಿ ಅಜ್ಜಿಯನ್ನು ಕೊಲೆ ಮಾಡಲು ಸಂಚು ರೂಪಿಸಿದ್ದಳು ಎಂದು ಪೊಲೀಸರು ಶಂಕಿಸಿದ್ದಾರೆ.

ಆರೋಪಿಗಳಿಬ್ಬರೂ ಮಹದೇವಮ್ಮ ಅವರನ್ನು ಆಕಾಶ್‌ನ ಮನೆಗೆ ಕರೆಸಿಕೊಂಡು, ದಿಂಬಿನಿಂದ ಉಸಿರುಗಟ್ಟಿಸಿ, ಹಗ್ಗದಿಂದ ಬಿಗಿದು ಕೊಲೆ ಮಾಡಿದ್ದಾರೆ ಎನ್ನಲಾಗಿದೆ. ಘಟನೆಯ ಮಾಹಿತಿ ತಿಳಿದ ಕೆ.ಆರ್.ಪೇಟೆ ಗ್ರಾಮಾಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತದೇಹವನ್ನು ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಮಿಮ್ಸ್) ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಲಾಯಿತು.

ಮೃತರ ಅಕ್ಕನ ಮಗ ರವಿಕುಮಾರ್ ನೀಡಿದ ದೂರಿನ ಆಧಾರದಲ್ಲಿ ಪ್ರಕರಣ ದಾಖಲಾಗಿದೆ. ಅಪ್ರಾಪ್ತ ಕೀರ್ತನಾಳನ್ನು ವಶಕ್ಕೆ ಪಡೆದ ಪೊಲೀಸರು, ವಿಚಾರಣೆ ಬಳಿಕ ಶಿವಮೊಗ್ಗದ ಬಾಲಮಂದಿರಕ್ಕೆ ಕಳುಹಿಸಿದ್ದಾರೆ. ಮತ್ತೊಬ್ಬ ಆರೋಪಿ ಆಕಾಶ್ ತಲೆಮರೆಸಿಕೊಂಡಿದ್ದು, ಆತನ ಬಂಧನಕ್ಕಾಗಿ ಪೊಲೀಸರು ವಿಶೇಷ ತಂಡ ರಚಿಸಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿ.ಜೆ. ಶೋಭಾರಾಣಿ, ಡಿವೈಎಸ್‌ಪಿ ಚಲುವರಾಜು, ಸಿಪಿಐ ಮಹೇಶ್ ಹಾಗೂ ಎಸ್‌ಐ ಸಿದ್ದಲಿಂಗ ಬಾನಸಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣದ ಕುರಿತು ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

## ಟಿಕೆಟ್‌ರಹಿತ ಪ್ರಯಾಣ: ಒಂದೇ ತಿಂಗಳಲ್ಲಿ 8.45 ಲಕ್ಷ ದಂಡ ವಸೂಲಿ

● ವಿಕ್ರಮ ವಾಹಿನಿ । ಬೆಂಗಳೂರು

ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಟಿಕೆಟ್ ಇಲ್ಲದೆ ಪ್ರಯಾಣಿಸಿದವರ ವಿರುದ್ಧ ಕಾರ್ಯಾಚರಣೆ ನಡೆಸಿರುವ ನಿಗಮದ ತನಿಖಾಧಿಕಾರಿಗಳು, ಸೆಪ್ಟೆಂಬರ್ ತಿಂಗಳಲ್ಲಿ 8.45 ಲಕ್ಷ ದಂಡ ವಸೂಲಿ ಮಾಡಿದ್ದಾರೆ.

ಈ ಅವಧಿಯಲ್ಲಿ 42,784 ಬಸ್‌ಗಳನ್ನು ತಪಾಸಣೆ ನಡೆಸಲಾಗಿದ್ದು, 4,310 ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ. ಟಿಕೆಟ್ ಇಲ್ಲದೆ ಪ್ರಯಾಣಿಸುತ್ತಿದ್ದ 4,382 ಪ್ರಯಾಣಿಕರಿಂದ ಒಟ್ಟು 8,45,034 ದಂಡ ಸಂಗ್ರಹಿಸಲಾಗಿದೆ. ತಪಾಸಣೆ ವೇಳೆ ನಿಗಮದ ಆದಾಯ ಸೋರಿಕೆಯಾಗುತ್ತಿದ್ದ 1,12,019 ಮೊತ್ತವನ್ನೂ ಪತ್ತೆಹಚ್ಚಲಾಗಿದೆ. ಟಿಕೆಟ್‌ರಹಿತ ಪ್ರಯಾಣಕ್ಕೆ ಕಡಿವಾಣ ಹಾಕುವ ಉದ್ದೇಶದಿಂದ ತನಿಖಾಧಿಕಾರಿಗಳು ತಪಾಸಣೆಯನ್ನು ತೀವ್ರಗೊಳಿಸಿದ್ದು, ನಿಯಮ ಉಲ್ಲಂಘಿಸಿದವರ ವಿರುದ್ಧ ಕ್ರಮ ಕೈಗೊಂಡಿದ್ದಾರೆ.

## ಸ್ಟಿಂಗ್ ಅಪರೇಷನ್-ವಿಪಕ್ಷಗಳ ಷಡ್ಯಂತ್ರ ಶೀಘ್ರ ಬಯಲು: ತಂಗಡಗಿ

● ವಿಕ್ರಮ ವಾಹಿನಿ । ಬೆಂಗಳೂರು



**ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ನಡೆದಿದೆ ಎನ್ನಲಾದ ಸ್ಟಿಂಗ್ ಆಪರೇಷನ್ ಕುರಿತು ಪ್ರತಿಕ್ರಿಯಿಸಿದ ಸಚಿವ ಶಿವರಾಜ್ ಎಸ್. ತಂಗಡಗಿ, “ಇಂದಲ್ಲ, ನಾಳೆ ವಿಪಕ್ಷಗಳ ಷಡ್ಯಂತ್ರ ಬಯಲಾಗಲಿದೆ” ಎಂದರು. ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಸಹಿಸಲಾಗದೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ. ನಮ್ಮಲ್ಲೇ ಭಿನ್ನಾಭಿಪ್ರಾಯ ಸೃಷ್ಟಿಸಿ ಬೆಂಕಿ ಹಚ್ಚುವ ಯತ್ನ ನಡೆಯುತ್ತಿದೆ. ವಿಪಕ್ಷಗಳ ಆರೋಪಗಳಿಗೆ ಅವಕಾಶ ನೀಡದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲು ಮುಖ್ಯಮಂತ್ರಿ ಸೂಚಿಸಿದ್ದಾರೆ ಎಂದು ಹೇಳಿದರು.**

ತಮ್ಮ ವಿರುದ್ಧ ನಡೆದಿದೆ ಎನ್ನಲಾದ ಸ್ಟಿಂಗ್ ಅಪರೇಷನ್ ಬಗ್ಗೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಪ್ರತಿಕ್ರಿಯಿಸಿದ್ದು, ಇಂದಲ್ಲ, ನಾಳೆ ವಿಪಕ್ಷಗಳ ಷಡ್ಯಂತ್ರ ಬಯಲಾಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್.ಎಸ್. ತಂಗಡಗಿ ಅವರು ಖಾರವಾಗಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಅಭಿವೃದ್ಧಿ ಕಾರ್ಯಗಳನ್ನು ಸಹಿಸಲಾಗದೆ ಪ್ರತಿಪಕ್ಷದ ನಾಯಕರು ಹತಾಶೆ ಮತ್ತು ಅಸೂಯೆಯಿಂದ ಸರ್ಕಾರಕ್ಕೆ ಕೆಟ್ಟ ಹೆಸರು ತರಲು ಪ್ರಯತ್ನಿಸುತ್ತಿದ್ದಾರೆ ಎಂದರು.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಗೆ ಧಕ್ಕೆ ತರಲು ಸ್ಟಿಂಗ್ ಆಪರೇಷನ್ ನಡೆಸಲಾಗಿದೆಯೇ ಎಂಬ ಪ್ರಶ್ನೆಗೆ, ಸಿದ್ದರಾಮಯ್ಯ ಅವರಷ್ಟೇ ಅಲ್ಲ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕಂಡರೂ ಬಿಜೆಪಿ ಮತ್ತು ಜೆಡಿಎಸ್ ನಾಯಕರಿಗೆ ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ಕೇಂದ್ರ ಸಚಿವ ಎಚ್.ಡಿ. ಕುಮಾರ ಸ್ವಾಮಿ ಅವರಿಗೆ ನಿದ್ರೆ ಇಲ್ಲದಂತಾಗಿದೆ. ನಮ್ಮಲ್ಲಿಯೇ ಭಿನ್ನಾಭಿಪ್ರಾಯ ಮೂಡಿಸಿ ಬೆಂಕಿ ಹಚ್ಚುವ ಪ್ರಯತ್ನ ಮಾಡುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾದ ಬಳಿಕ ಯಾರಿಗೆ ನಿದ್ರೆ ಬರುತ್ತಿಲ್ಲವೋ ಗೊತ್ತಿಲ್ಲ, ಆದರೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಮಾತ್ರ ನಿದ್ರೆ ಬರುತ್ತಿಲ್ಲ ಎಂದು ವ್ಯಂಗ್ಯವಾಡಿದರು.

ಸರ್ಕಾರದ ವಿರುದ್ಧ ಆರೋಪ ಮಾಡುವ ಅವಕಾಶಕ್ಕಾಗಿ ಪ್ರತಿಪಕ್ಷಗಳು ಕಾಯುತ್ತಿವೆ. ಹೀಗಾಗಿ ಪ್ರತಿಯೊಬ್ಬರೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನಮ್ಮೆಲ್ಲರಿಗೂ ಸೂಚಿಸಿದ್ದಾರೆ. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪ್ರತಿದಿನ ತಮ್ಮ ಬಳಿ ಪೆನ್‌ಡ್ರೈವ್ ಇದೆ ಎಂದು ಮಾಧ್ಯಮಗಳ ಬಳಿ ತೋರಿಸುತ್ತಾರೆ. ಇದೆಲ್ಲವನ್ನು ನೋಡಿ ಮುಖ್ಯಮಂತ್ರಿಗಳು ನಮಗೆ ಎಚ್ಚರಿಕೆಯಿಂದ ಇರುವಂತೆ ಹೇಳಿದ್ದಾರೆ ಎಂದು ತಿಳಿಸಿದರು.

ರಾಜಕೀಯದಲ್ಲಿ ವಿರೋಧಿಗಳು ಇರುವುದು ಸಹಜ. ಆದರೆ ಎದುರಾಳಿಗಳು ಉತ್ತಮ ಕೆಲಸ ಮಾಡಿದಾಗ ಅದನ್ನು ಪ್ರಶಂಸಿಸುವ ಮನೋಭಾವ ಇರಬೇಕು. ತಾವು ಅಧಿಕಾರದಲ್ಲಿದ್ದಾಗ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗದವರು, ಈಗ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಸಚಿವ ತಂಗಡಗಿ ಟೀಕಿಸಿದರು.

ತಮಗೆ ಯಾವುದೇ ಸ್ಟಿಂಗ್ ಆಪರೇಷನ್ ಬಗ್ಗೆ ವೈಯಕ್ತಿಕ ಅನುಭವವಾಗಿಲ್ಲ. ಮಾಧ್ಯಮದ ಸ್ನೇಹಿತರು ಈ ಕುರಿತು ಹೇಳುತ್ತಿರುವ ವಿಚಾರಗಳು ತಮಗೆ ಹೊಸ ಅನುಭವವಾಗಿವೆ. ತಾವು ಯಾರನ್ನೂ ಅನುಮಾನದಿಂದ ನೋಡುವುದಿಲ್ಲ. ಮಾಧ್ಯಮದ ಸ್ನೇಹಿತರು ಯಾವಾಗ ಬಂದರೂ ನಿರಾಳವಾಗಿ ಮಾತನಾಡಲು ಸಿದ್ಧರಿದ್ದೇನೆ ಎಂದು ಮಾರ್ಮಿಕವಾಗಿ ಹೇಳಿದರು. ಐದು ಉಪ ಸಮಿತಿ ರಚನೆ: ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಲಹಾ ಸಮಿತಿಯ ಸದಸ್ಯರೊಂದಿಗೆ ಸಭೆ ನಡೆಸಿ ಪ್ರಶಸ್ತಿ ಪುರಸ್ಕೃತರ ಆಯ್ಕೆ ಕುರಿತು ಚರ್ಚಿಸಲಾಗಿದೆ. ಪ್ರಶಸ್ತಿ ಆಯ್ಕೆ ಪ್ರಕ್ರಿಯೆಯನ್ನು ವ್ಯವಸ್ಥಿತವಾಗಿ ನಡೆಸಲು ಐದು ಉಪ ಸಮಿತಿಗಳನ್ನು ರಚಿಸಲಾಗಿದ್ದು, ಪ್ರತಿ ಸಮಿತಿಯು 1:2 ಅನುಪಾತದಲ್ಲಿ ಪ್ರಶಸ್ತಿಗೆ ಅರ್ಹರ ಹೆಸರನ್ನು ಶಿಫಾರಸು ಮಾಡುವಂತೆ ಸೂಚಿಸಲಾಗಿದೆ. ಮುಂದಿನ ಸಭೆಯಲ್ಲಿ ಸಮಿತಿಯ ಸದಸ್ಯರು ತಮ್ಮ ವರದಿಯನ್ನು ಸಲ್ಲಿಸಲಿದ್ದಾರೆ ಎಂದು ಸಚಿವರು ಇದೇ ವೇಳೆ ತಿಳಿಸಿದರು.

ಹೀಗಾಗಲೇ ನಟರಾದ ದಿವಂಗತ ವಿಷ್ಣುವರ್ಧನ್ ಹಾಗೂ ಹಿರಿಯ ನಟಿ ಬಿ. ಸರೋಜಾದೇವಿ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಲಾಗಿದ್ದು, ಈ ಪ್ರಶಸ್ತಿಗಳನ್ನು ಪ್ರದಾನ ಮಾಡುವ ಕಾರ್ಯಕ್ರಮವನ್ನು ನವೆಂಬರ್ 14ರಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಲು ಉದ್ದೇಶಿಸಲಾಗಿದೆ. ಮುಖ್ಯಮಂತ್ರಿ ಅವರ ದಿನಾಂಕವನ್ನು ಖಚಿತಪಡಿಸಿಕೊಂಡು ಕಾರ್ಯಕ್ರಮ ಆಯೋಜಿಸಲಾಗುವುದು ಎಂದರು.

ಕರ್ನಾಟಕ ರತ್ನಕ್ಕೆ ಅಂಬರೀಶ್ ಅರ್ಹರು: ಇದೇ ವೇಳೆ, ದಿವಂಗತ ನಟ ಅಂಬರೀಶ್ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಸಚಿವ ರಾಮಲಿಂಗಾರೆಡ್ಡಿ ಅವರು ಪತ್ರ ಬರೆದಿದ್ದಾರೆ. ಅಂಬರೀಶ್ ಅವರು ಅತ್ಯುತ್ತಮ ನಟರಾಗಿದ್ದು, ಕರ್ನಾಟಕ ರತ್ನ ಪ್ರಶಸ್ತಿ ಪಡೆಯಲು ಅರ್ಹರಾಗಿದ್ದಾರೆ. ಈ ಕುರಿತು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದರು.

## ಕೃಷ್ಣಾ ನದಿ ನೀರು ವಿವಾದಕ್ಕೆ ಪರಿಹಾರದ ಪ್ರಯತ್ನ: ನಾಯ್ಡು-ವಿಜಯ್ ಮಹತ್ವದ ಸಭೆ

● ವಿಕ್ರಮ ವಾಹಿನಿ । ವಿಜಯವಾಡ

ಕೃಷ್ಣಾ ನದಿ ನೀರು ಹಂಚಿಕೆ ಮತ್ತು ಚೆನ್ನೈಗೆ ನೀರು ಪೂರೈಕೆಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಆಂಧ್ರಪ್ರದೇಶದ ಮುಖ್ಯಮಂತ್ರಿ ಎನ್. ಚಂದ್ರಬಾಬು ನಾಯ್ಡು ಹಾಗೂ ತಮಿಳುನಾಡಿನ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಮಂಗಳವಾರ ವಿಜಯವಾಡದಲ್ಲಿ ಮಹತ್ವದ ಸಭೆ ನಡೆಸಿದರು.

ಸಭೆಯಲ್ಲಿ ‘ತೆಲುಗು ಗಂಗಾ’ ಯೋಜನೆಯಡಿ ಚೆನ್ನೈಗೆ ಕೃಷ್ಣಾ ನದಿ ನೀರು ಪೂರೈಸುವ ಕುರಿತು ಪ್ರಮುಖವಾಗಿ ಚರ್ಚಿಸಲಾಯಿತು. ತಮಿಳುನಾಡಿಗೆ ನಿಗದಿಪಡಿಸಿರುವ ನೀರಿನ ಪಾಲು ಸಮರ್ಪಕವಾಗಿ ಲಭ್ಯವಾಗುತ್ತಿಲ್ಲ ಎಂಬ ಕಳವಳವನ್ನು ವಿಜಯ್ ವ್ಯಕ್ತಪಡಿಸಿದರು. ಚೆನ್ನೈನಲ್ಲಿ ನೀರಿನ ಕೊರತೆ ನಿವಾರಿಸಲು ನಿಗದಿತ ಪ್ರಮಾಣದ ನೀರು ಪೂರೈಕೆಯಾಗುವುದು ಅಗತ್ಯ ಎಂದು ಅವರು ಪ್ರತಿಪಾದಿಸಿದರು.

ಇದಕ್ಕೆ ಸ್ಪಂದಿಸಿದ ಚಂದ್ರಬಾಬು ನಾಯ್ಡು, ತಮಿಳುನಾಡಿಗೆ ಹಂಚಿಕೆಯಾಗಿರುವ ನೀರನ್ನು ಸಮರ್ಪಕವಾಗಿ ಬಿಡುಗಡೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಕುರಿತು ಭರವಸೆ ನೀಡಿದರು ಎಂದು ವರದಿಯಾಗಿದೆ. ನೀರು ಪೂರೈಕೆಯಲ್ಲಿನ ಸಮಸ್ಯೆಗಳನ್ನು ಪರಿಹರಿಸಲು ಎರಡೂ ರಾಜ್ಯಗಳ ಅಧಿಕಾರಿಗಳ ನಡುವೆ ಸಮನ್ವಯ ಸಾಧಿಸುವ ಬಗ್ಗೆಯೂ ಚರ್ಚೆ ನಡೆಯಿತು.

ದಕ್ಷಿಣ ಭಾರತದ ಪ್ರಮುಖ ರಾಜ್ಯಗಳ ನಡುವಿನ ನದಿ ನೀರು ಹಂಚಿಕೆ ಸಮಸ್ಯೆಗಳಿಗೆ ಮಾತುಕತೆಯ ಮೂಲಕ ಪರಿಹಾರ ಕಂಡುಕೊಳ್ಳುವ ಪ್ರಯತ್ನವಾಗಿ ಈ ಸಭೆ ಮಹತ್ವ ಪಡೆದಿದೆ. ಆದರೆ, ದಶಕಗಳ ವಿವಾದಕ್ಕೆ ಅಂತಿಮ ಪರಿಹಾರ ದೊರೆತಿದೆಯೇ ಎಂಬುದು ಮುಂದಿನ ಮಾತುಕತೆ ಹಾಗೂ ಕೈಗೊಳ್ಳುವ ಕ್ರಮಗಳ ಮೇಲೆ ಅವಲಂಬಿತವಾಗಿದೆ.

## 108 ಸಿಬ್ಬಂದಿಯ ಮುಷ್ಕರಕ್ಕೂ ನಮಗೂ ಸಂಬಂಧವಿಲ್ಲ: ಯು.ಟಿ.ಖಾದರ್

● ವಿಕ್ರಮ ವಾಹಿನಿ । ಬೆಂಗಳೂರು

ಕಳೆದ ಮೂರು ತಿಂಗಳಿಂದ ಹಮ್ಮಿಕೊಂಡಿದ್ದಾರೆನ್ನಲಾಗುವ 108 ತುರ್ತು ವಾಹನ ಸಿಬ್ಬಂದಿಗಳ ಮುಷ್ಕರಕ್ಕೂ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲವೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ಯು.ಟಿ.ಖಾದರ್ ಅವರು ಸ್ಪಷ್ಟಪಡಿಸಿದ್ದಾರೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ನಿರ್ದೇಶನಾಲಯದಲ್ಲಿ ಇಂದು ಸುದ್ದಿಗೋಷ್ಠಿಯ ವೇಳೆ ಪತ್ರಕರ್ತರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, 108 ಅಂಬ್ಯುಲೆನ್ಸ್ ತುರ್ತು ವಾಹನದ ಸಮಸ್ಯೆಯ ಅರಿವಿದೆ. ಇದು ತುಂಬಾ ದಿನಗಳಿಂದಲೇ ಜಾರಿಯಲ್ಲಿದೆ. ಇನ್ನೆರಡು ತಿಂಗಳು ಅವಕಾಶ ಕೊಟ್ಟರೆ ಸರ್ಕಾರದಿಂದಲೇ ಹೊಸ ಬಗೆಯ ಯೋಜನೆ ರೂಪಿಸುತ್ತೇವೆ.

ಅಲ್ಲಿಯವರೆಗೂ ಕರ್ನಾಟಕದ ಜನತೆ ಸಹಕಾರ ನೀಡಬೇಕು. ಈ ಹಿಂದೆ ನಾನು ಆರೋಗ್ಯ ಮಂತ್ರಿಯಾಗಿದ್ದಾಗ ಕಲ್ಯಾಣ ಕರ್ನಾಟಕ ಭಾಗದಲ್ಲಿ ತುರ್ತು ಅಂಬ್ಯುಲೆನ್ಸ್ ವಾಹನ ಸೌಲಭ್ಯ ಒದಗಿಸಿದ್ದೆ. ಬಳಿಕ ರಾಜ್ಯದಾದ್ಯಂತ ಆರೋಗ್ಯ ವಾಹನ ಸೌಲಭ್ಯವನ್ನು ಸರ್ಕಾರಗಳು ಕಲ್ಪಿಸಿವೆ. 2 ತಿಂಗಳಲ್ಲಿ ಸಮಯ ಕೊಟ್ಟರೆ ಸರಿಪಡಿಸುತ್ತೇನೆ. ಅಂಬ್ಯುಲೆನ್ಸ್ ವಾಹನಕ್ಕೆ ಈಗ ಕಾಲ್ ಮಾಡಿದರೆ 45 ನಿಮಿಷ ಆದಮೇಲೆ ವಾಹನ ಬರುತ್ತದೆ. ನಮ್ಮ ಪೇಷೆಂಟ್ ಗಳಿಗೆ ಏನಾದರೂ ತೊಂದರೆ ಆದರೆ ಜಿ.ವಿ.ಕೆ.ಸಂಸ್ಥೆಗೆ ನಾವು ಪ್ರಶ್ನಿಸಬೇಕಾಗುತ್ತದೆ.

ಮುಷ್ಕರ ನಡೆಸುವವರು ನಡೆಸಲಿ, ನಮ್ಮ ಅಭ್ಯಂತರವೇನೂ ಇಲ್ಲ. ಜಿವಿಕೆ ಅವರು ಬಂದು ಸರ್ಕಾರದ ಬಳಿ ಮಾತನಾಡಬೇಕು. ಮುಷ್ಕರ ನಡೆಸುವವರಿಗೂ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ. ಈ ಕಾರಣಕ್ಕಾಗಿ ಶೀಘ್ರವೇ ಹೊಸ ವ್ಯವಸ್ಥೆ ಜಾರಿಗೆ ತರಲಿದ್ದೇವೆ. ಬೆದರಿಕೆಗೆ ನಾವು ಬಗ್ಗಲ್ಲ. ಜನರು ಸಹಕಾರ ನೀಡಬೇಕೆಂದು ಸಚಿವ ಯು.ಟಿ.ಖಾದರ್ ಮನವಿ ಮಾಡಿದರು.

## ಜಂತರ್ ಮಂತರ್‌ಗೆ ನುಗ್ಗಿದ ಕಾರ್ಯಕರ್ತರು: ಮೂವರ ವಶಕ್ಕೆ

**ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಗೆ ಆಗ್ರಹ; ಪ್ರತಿಭಟನಾ ಸ್ಥಳಗಳ ಪಟ್ಟಿಯಿಂದ ಕೈಬಿಟ್ಟಿದ್ದಕ್ಕೆ ವಿರೋಧ**

● ವಿಕ್ರಮ ವಾಹಿನಿ । ನವದೆಹಲಿ

### ಜಂತರ್ ಮಂತರ್ ಕೈಬಿಟ್ಟ ನಿರ್ಧಾರಕ್ಕೆ ವಿರೋಧ

**ದೆಹಲಿ ಸರ್ಕಾರದ ನಿರ್ಧಾರವನ್ನು ಕಾಕ್ರೋಚ್ ಜನತಾ ಪಕ್ಷದ ಸದಸ್ಯರು ಖಂಡಿಸಿದ್ದು, ಪ್ರತಿಭಟನೆ ನಡೆಸಲು ಸೂಕ್ತ ಸ್ಥಳ ಒದಗಿಸುವಂತೆ ಆಗ್ರಹಿಸಿದ್ದಾರೆ. ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಕೂಡ ನಿರ್ಧಾರವನ್ನು ಟೀಕಿಸಿದ್ದು, ಇದು ಪ್ರಜಾಸತ್ತಾತ್ಮಕ ಪ್ರತಿಭಟನೆ ಮತ್ತು ಭಿನ್ನಾಭಿಪ್ರಾಯ ವ್ಯಕ್ತಪಡಿಸುವ ಹಕ್ಕನ್ನು ನಿರ್ಬಂಧಿಸುವ ಪ್ರಯತ್ನ ಎಂದು ಆರೋಪಿಸಿದ್ದಾರೆ.**

ಪ್ರತಿಭಟನೆಗೆ ಮೀಸಲಾದ ಸ್ಥಳಗಳ ಪಟ್ಟಿಯಿಂದ ಜಂತರ್ ಮಂತರ್ ಅನ್ನು ಕೈಬಿಟ್ಟ ನಿರ್ಧಾರವನ್ನು ವಿರೋಧಿಸಿ, ಬೀಗ ಹಾಕಿದ್ದ ಗೇಟ್ ಹತ್ತಿ ಒಳಪ್ರವೇಶಿಸಿದ ಆರೋಪದ ಮೇಲೆ ಕಾಕ್ರೋಚ್ ಜನತಾ ಪಕ್ಷದ ಮೂವರು ಕಾರ್ಯಕರ್ತರನ್ನು ದೆಹಲಿ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದ ಪಕ್ಷದ ಸದಸ್ಯರಾದ ಅಶುತೋಷ್ ರಂಕಾ, ಸೌರವ್ ದಾಸ್ ಮತ್ತು ಅಜಿಂಕ್ಯ ಶಿಂಧೆ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಜಂತರ್ ಮಂತರ್ ಪ್ರವೇಶಿಸಿದ ಮತ್ತು ಪೊಲೀಸರು ವಶಕ್ಕೆ ಪಡೆಯುತ್ತಿರುವ ಕುರಿತು ಕಾರ್ಯಕರ್ತರು ಸಾಮಾಜಿಕ ಜಾಲತಾಣಗಳಲ್ಲಿ ಸಂದೇಶಗಳನ್ನು ಹಂಚಿಕೊಂಡಿದ್ದಾರೆ.

ಪ್ರತಿಭಟನಾ ಸ್ಥಳಗಳ ಪಟ್ಟಿಯಿಂದ ಜಂತರ್ ಮಂತರ್ ಅನ್ನು ಕೈಬಿಟ್ಟಿರುವುದರಿಂದ ಸರ್ಕಾರದ ವಿರುದ್ಧ ಧ್ವನಿ ಎತ್ತುವ ಜನರ ಹಕ್ಕನ್ನು ನಿರ್ಬಂಧಿಸಲು ಸಾಧ್ಯವಿಲ್ಲ ಎಂದು ಪಕ್ಷದ ಸದಸ್ಯರು ಹೇಳಿದ್ದಾರೆ. ಪ್ರತಿಭಟನಾ ಸ್ಥಳಕ್ಕೆ ಪ್ರವೇಶಿಸಿದ ಕಾರ್ಯಕರ್ತರು ತ್ರಿವರ್ಣ ಧ್ವಜ ಹಿಡಿದು ಘೋಷಣೆಗಳನ್ನು ಕೂಗಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿವೆ.

ಸೋಮವಾರ ಹೊರಡಿಸಲಾದ ಅಧಿಕೃತ ಅಧಿಸೂಚನೆಯ ಪ್ರಕಾರ, ದೆಹಲಿಯಲ್ಲಿ ಪ್ರತಿಭಟನೆ ಮತ್ತು ಸಾರ್ವಜನಿಕ ಪ್ರದರ್ಶನಗಳಿಗೆ ನಿಗದಿಪಡಿಸಿದ್ದ ಸ್ಥಳಗಳ ಪಟ್ಟಿಯಿಂದ ಜಂತರ್ ಮಂತರ್ ಅನ್ನು ಕೈಬಿಡಲಾಗಿದೆ. ರಾಮಲೀಲಾ ಮೈದಾನ, ಬುರಾರಿ ಮೈದಾನ ಮತ್ತು ಪೂರ್ವ ದೆಹಲಿಯ ಸಿಬಿಡಿ ಮೈದಾನಗಳನ್ನು ಪರ್ಯಾಯ ಪ್ರತಿಭಟನಾ ಸ್ಥಳಗಳಾಗಿ ಗುರುತಿಸಲಾಗಿದೆ.

ಪ್ರತಿಭಟನೆಗೆ ಸೂಕ್ತ ಪರ್ಯಾಯ ಸ್ಥಳಗಳನ್ನು ಪರಿಶೀಲಿಸಲು ಕೇಂದ್ರ ಗೃಹ ಸಚಿವಾಲಯ ರಚಿಸಿದ್ದ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

www.VIKRAMAVAHINI.com

|| ಕನ್ನಡ ದಿನಪತ್ರಿಕೆ ||

PRGI NO: KARKAN/2018/78481

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

# ಸ್ಟಿಂಗ್ ಆಪರೇಷನ್ ವಿವಾದ: ಸಿಬಿಐ ತನಿಖೆಗೆ ಕುಮಾರಸ್ವಾಮಿ ಆಗ್ರಹ

**ಸ್ಟಿಂಗ್ ಆಪರೇಷನ್‌ಗಳ ಮೂಲಕ ರಾಜಕೀಯ ನಾಯಕರು ಮತ್ತು ಅವರ ಕುಟುಂಬಗಳನ್ನು ಗುರಿಯಾಗಿಸಲಾಗುತ್ತಿದೆ ಎಂಬ ಆರೋಪದ ಕುರಿತು ಸಿಬಿಐ ತನಿಖೆಗೆ ಎಚ್‌.ಡಿ. ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಸದಾಶಿವನಗರದಲ್ಲಿ ಫೋನ್ ಕದ್ದಾಲಿಕೆ ನಡೆಯುತ್ತಿದೆ ಎಂದು ಆರೋಪಿಸಿರುವ ಅವರು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ದೂರು ನೀಡುವುದಾಗಿ ತಿಳಿಸಿದ್ದಾರೆ. ಸಿದ್ದರಾಮಯ್ಯ ಅವರು ಮೌನ ಮುರಿದು ಷಡ್ಯಂತ್ರದ ವಿರುದ್ಧ ಧ್ವನಿ ಎತ್ತಬೇಕು ಎಂದೂ ಒತ್ತಾಯಿಸಿದ್ದಾರೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಸ್ಟಿಂಗ್ ಆಪರೇಷನ್‌ಗಳ ಮೂಲಕ ರಾಜಕೀಯ ನಾಯಕರು, ಶಾಸಕರು, ಸಚಿವರು ಹಾಗೂ ಅವರ ಕುಟುಂಬಗಳನ್ನು ಗುರಿಯಾಗಿಸಲಾಗುತ್ತಿದೆ ಎಂಬ ಆರೋಪಗಳ ಕುರಿತು ಸಮಗ್ರ ತನಿಖೆ ನಡೆಸಬೇಕು. ಪ್ರಕರಣವನ್ನು ಸಿಬಿಐಗೆ ವಹಿಸುವಂತೆ ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷ ಎಚ್‌.ಡಿ. ಕುಮಾರಸ್ವಾಮಿ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ. ಈ ಸಂಬಂಧ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿಯಾಗಿ ದೂರು ಸಲ್ಲಿಸುವುದಾಗಿಯೂ ತಿಳಿಸಿದ್ದಾರೆ.



ಜೆಡಿಎಸ್ ಕಚೇರಿ ಜೆಪಿ ಭವನದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್‌ಗಳ ಹಿಂದೆ ಯಾರಿದ್ದಾರೆ, ಕಾರ್ಯಾಚರಣೆಗಳನ್ನು ಯಾರು ನಡೆಸುತ್ತಿದ್ದಾರೆ ಹಾಗೂ ಇದರಲ್ಲಿ ಯಾರ ಪಾತ್ರವಿದೆ ಎಂಬುದನ್ನು ತನಿಖೆಯಿಂದ ಪತ್ತೆಹಚ್ಚಬೇಕು. ಆರೋಪಗಳ ಸತ್ಯಾಸತ್ಯತೆ ಹೊರಬರಲು ನಿಷ್ಪಕ್ಷಪಾತ ತನಿಖೆ ಅಗತ್ಯ ಎಂದು ಹೇಳಿದರು.

**ಪೆನ್‌ಡ್ರೈವ್ ಪ್ರಕರಣದಲ್ಲೂ ಕ್ರಮವಾಗಲಿ:** 2024ರ ಲೋಕಸಭಾ ಚುನಾವಣೆಗೂ ಮುನ್ನ ಮಂಡ್ಯ ಮತ್ತು ಹಾಸನ ಭಾಗಗಳಲ್ಲಿ ಮಹಿಳೆಯರಿಗೆ ಸಂಬಂಧಿಸಿದ ವಿಡಿಯೋಗಳನ್ನು ಪೆನ್‌ಡ್ರೈವ್‌ಗಳ ಮೂಲಕ ಹಂಚಿದ ಪ್ರಕರಣವನ್ನು ಪ್ರಸ್ತಾಪಿಸಿದ ಕುಮಾರಸ್ವಾಮಿ, ವಿಡಿಯೋಗಳನ್ನು ಸಿದ್ಧಪಡಿಸಿ ಹಂಚಿದವರು ಯಾರು, ಮಹಿಳೆಯರ ಗೌಪ್ಯತೆ ಕಾಪಾಡದವರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಶ್ನಿಸಿದರು.

ವಿಡಿಯೋಗಳ ಪ್ರಸಾರದಿಂದ ಮಹಿಳೆಯರು ಮತ್ತು ಅವರ ಕುಟುಂಬಗಳ ಗೌರವಕ್ಕೆ ಧಕ್ಕೆಯಾಗಿದೆ. ಈ ಪ್ರಕರಣದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದ ಅವರು, ಪ್ರಜ್ವಲ್ ರೇವಣ್ಣ ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಿರುವುದನ್ನು ತಾವು ವಿರೋಧಿಸಿಲ್ಲ. ಇತರ ಗಂಭೀರ ಆರೋಪಗಳಲ್ಲಿಯೂ ಇದೇ ರೀತಿಯ ತನಿಖಾ ಗಂಭೀರತೆ ಇರಬೇಕು ಎಂದು ಹೇಳಿದರು.

**ಸರ್ಕಾರ ಬೀಳಿಸುವ ಉದ್ದೇಶವಿಲ್ಲ:** ರಾಜ್ಯ ಸರ್ಕಾರವನ್ನು ವಜಾಗೊಳಿಸಬೇಕು ಅಥವಾ ಕೆಡವಬೇಕು ಎಂಬುದು ತಮ್ಮ ಉದ್ದೇಶವಲ್ಲ. ಸ್ಟಿಂಗ್ ಆಪರೇಷನ್‌ಗಳ ಮೂಲಕ ವ್ಯಕ್ತಿಗಳು ಮತ್ತು ಕುಟುಂಬಗಳನ್ನು ಗುರಿಯಾಗಿಸುವ ಪ್ರವೃತ್ತಿ ನಿಲ್ಲಬೇಕು ಅಷ್ಟೇ ಎಂದು ಕುಮಾರಸ್ವಾಮಿ ಸ್ಪಷ್ಟಪಡಿಸಿದರು.

ಸರ್ಕಾರಕ್ಕೆ ಬಹುಮತವಿದ್ದು, ತನಿಖೆಗೆ ಹೆದರಬೇಕಾದ ಅಗತ್ಯವಿಲ್ಲ. ಆರೋಪಗಳಲ್ಲಿ ಸತ್ಯಾಂಶವಿದ್ದರೆ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು. ಈ ಸಂಬಂಧ ಅಮಿತ್ ಶಾ ಅವರನ್ನು ಭೇಟಿಯಾಗಿ ತಮ್ಮ ಬಳಿ ಇರುವ ಮಾಹಿತಿಯನ್ನು ನೀಡಿ, ತನಿಖೆಗೆ ಮನವಿ ಮಾಡುವುದಾಗಿ ತಿಳಿಸಿದರು.

ಬಿಡದಿ ರೈತರ ಹೋರಾಟ ಮತ್ತು ನೈಸ್ ಯೋಜನೆಗೆ ಸಂಬಂಧಿಸಿದ ವಿಚಾರಗಳು ಮುನ್ನೆಲೆಗೆ ಬಂದಾಗ ಪ್ರಜ್ವಲ್ ರೇವಣ್ಣ ಪ್ರಕರಣದ ವಿಷಯವನ್ನು ಮತ್ತೆ ಚರ್ಚೆಗೆ ತರುತ್ತಿರುವುದೇಕೆ ಎಂದೂ ಅವರು ಪ್ರಶ್ನಿಸಿದರು. ರಾಜ್ಯದ ಪ್ರಮುಖ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಯುವ ಸಂದರ್ಭದಲ್ಲಿ ಜನರ ಗಮನ ಬೇರೆಡೆ ಸೆಳೆಯುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

## ಸದಾಶಿವನಗರದಲ್ಲಿ ಫೋನ್ ಕದ್ದಾಲಿಕೆ ಆರೋಪ

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮುಖ್ಯಮಂತ್ರಿಯಾದ ಬಳಿಕ ಸದಾಶಿವನಗರದ ನಿವಾಸದಲ್ಲಿ ನಾಲ್ವರು ನಿವೃತ್ತ ಪೊಲೀಸ್ ಅಧಿಕಾರಿಗಳನ್ನು ನೇಮಿಸಿಕೊಂಡು, ಅತ್ಯಾಧುನಿಕ ಉಪಕರಣಗಳ ಮೂಲಕ ಸಚಿವರು ಮತ್ತು ಇತರರ ಮಾತುಕತೆಗಳ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂಬ ಮಾಹಿತಿ ತಮ್ಮ ಗಮನಕ್ಕೆ ಬಂದಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

ಈ ಕುರಿತು ಪೊಲೀಸ್ ಇಲಾಖೆಯಲ್ಲಿಯೂ ಚರ್ಚೆ ನಡೆಯುತ್ತಿದೆ ಎಂಬ ಮಾಹಿತಿ ಇದೆ ಎಂದ ಅವರು, ಮುಖ್ಯಮಂತ್ರಿ ತಮ್ಮ ಸ್ಥಾನ ಭದ್ರಪಡಿಸಿಕೊಳ್ಳಲು ಸ್ವಪಕ್ಷದ ಶಾಸಕರು ಮತ್ತು ಸಚಿವರ ಮೇಲೆಯೇ ನಿಗಾ ಇರಿಸಿದರೆ ಹೇಗೆ ಎಂದು ಪ್ರಶ್ನಿಸಿದರು. ಆದರೆ, ಮುಖ್ಯಮಂತ್ರಿ ಅವರೇ ಇದಕ್ಕೆ ಆದೇಶ ನೀಡಿದ್ದಾರೆ ಎಂದು ತಾನು ಹೇಳುತ್ತಿಲ್ಲ. ಇಲಾಖೆಯಲ್ಲಿ ಏನು ನಡೆಯುತ್ತಿದೆ ಎಂಬುದನ್ನು ತನಿಖೆ ಮೂಲಕ ಪರಿಶೀಲಿಸಬೇಕು ಎಂದು ಸ್ಪಷ್ಟಪಡಿಸಿದರು.

## ಸಿದ್ದರಾಮಯ್ಯ ಮೌನ ಮುರಿಯಲಿ

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ವಿರುದ್ಧ ನಡೆಯುತ್ತಿದೆ ಎನ್ನಲಾದ ಷಡ್ಯಂತ್ರದ ಬಗ್ಗೆ ಮೌನ ವಹಿಸಬಾರದು. ಹಿಂದಿನ ಹೋರಾಟದ ಮನೋಭಾವದೊಂದಿಗೆ ಗಟ್ಟಿಯಾಗಿ ಮಾತನಾಡಬೇಕು ಎಂದು ಕುಮಾರಸ್ವಾಮಿ ಮನವಿ ಮಾಡಿದರು. "ಸಿದ್ದರಾಮಯ್ಯ ಅವರು ಎಂಟು ವರ್ಷ ಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದಾರೆ. ದೇವರಾಜ ಅರಸು ಅವರ ದಾಖಲೆಯನ್ನು ಮೀರಿದ ನಾಯಕರು. ಇಂತಹ ಹಿನ್ನೆಲೆಯಿರುವ ಅವರು ತಮ್ಮ ವಿರುದ್ಧದ ಷಡ್ಯಂತ್ರಕ್ಕೆ ಹೆದರುವ ಅಗತ್ಯವಿಲ್ಲ. ನಾನು ಅವರ ಪರವಾಗಿ ಅನುಕಂಪದಿಂದ ಮಾತನಾಡುತ್ತಿಲ್ಲ. ಅವರ ವಿರುದ್ಧ ನಡೆಯುತ್ತಿದೆ ಎನ್ನಲಾದ ಸಂಚಿನ ಬಗ್ಗೆ ಮಾತನಾಡುತ್ತಿದ್ದೇನೆ," ಎಂದರು. ಹಿಂದೆ ಮಾಜಿ ಮುಖ್ಯಮಂತ್ರಿಯೊಬ್ಬರ ವಿರುದ್ಧ ಸ್ಟಿಂಗ್ ನಡೆಸಲಾಯಿತು. ಬಳಿಕ ರಮೇಶ್ ಜಾರಕಿಹೊಳಿ ಹಾಗೂ ಕೆ.ಎನ್. ರಾಜಣ್ಣ ಅವರ ಪ್ರಕರಣಗಳು ಮುನ್ನೆಲೆಗೆ ಬಂದವು. ಈಗ ಸಿದ್ದರಾಮಯ್ಯ ಅವರ ಸರದಿ ಬಂದಿದೆ ಎಂದು ಆರೋಪಿಸಿದರು. ಸ್ಟಿಂಗ್ ಆಪರೇಷನ್‌ಗಳ ಮೂಲಕ ರಾಜಕೀಯ ವಿರೋಧಿಗಳನ್ನು ಗುರಿಯಾಗಿಸುವ ಪ್ರವೃತ್ತಿಗೆ ಅಂತ್ಯ ಹಾಡಬೇಕು ಎಂದು ಒತ್ತಾಯಿಸಿದರು.

## ಬಾಲಕಿಯ ಕುರಿತ ದೂರಿನ ತನಿಖೆಗೂ ಆಗ್ರಹ

ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿರುವ ಸ್ಟಿಂಗ್ ಆಪರೇಷನ್ ವಿಡಿಯೋಕ್ಕೆ ಸಂಬಂಧಿಸಿದಂತೆ ನೈಜ ಹೋರಾಟಗಾರರ ವೇದಿಕೆ ಅಕ್ಟೋಬರ್ 9ರಂದು ನ್ಯಾಯಾಂಗ ಸಂಸ್ಥೆಗಳಿಗೆ ಮನವಿ ಸಲ್ಲಿಸಿರುವುದನ್ನು ಕುಮಾರಸ್ವಾಮಿ ಪ್ರಸ್ತಾಪಿಸಿದರು. ಮನವಿಯಲ್ಲಿ 14 ವರ್ಷದ ಬಾಲಕಿಯ ಮೇಲಿನ ಶೋಷಣೆಗೆ ಸಂಬಂಧಿಸಿದ ಆರೋಪಗಳಿದ್ದು, ಬಾಲಕಿಯನ್ನು ಬಳಸಿಕೊಂಡು ಸ್ಟಿಂಗ್ ಆಪರೇಷನ್ ನಡೆಸಲಾಗಿದೆ ಎಂಬ ಆರೋಪವೂ ಇದೆ ಎಂದು ತಿಳಿಸಿದರು.

ಈ ಆರೋಪಗಳ ಸತ್ಯಾಸತ್ಯತೆಯನ್ನೂ ತನಿಖೆಯಿಂದ ಪರಿಶೀಲಿಸಬೇಕು ಎಂದ ಅವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದ ಮೊರೆ ಹೋಗಿರುವ ವರದಿಗಳ ಬಗ್ಗೆಯೂ ಪ್ರಸ್ತಾಪಿಸಿದರು. ಆರೋಪಗಳ ಕುರಿತು ಸತ್ಯ ಹೊರಬರಬೇಕು ಮತ್ತು ನ್ಯಾಯಾಂಗ ಸಂಸ್ಥೆಗಳ ತೀರ್ಪಿಗೆ ಎಲ್ಲರೂ ತಲೆಬಾಗಬೇಕು ಎಂಬುದು ತಮ್ಮ ನಿಲುವು ಎಂದರು.

## 'ಕುಮಾರಸ್ವಾಮಿ ಒಳ್ಳೆಯ ವಿಚಾರದ ಬಗ್ಗೆ ಗಮನ ಸೆಳೆದಿದ್ದಾರೆ'

● ವಿಕ್ರಮ ವಾಹಿನಿ । ನವದೆಹಲಿ

ಕೇಂದ್ರ ಸಚಿವ ಎಚ್‌.ಡಿ. ಕುಮಾರಸ್ವಾಮಿ ಅವರು ಒಳ್ಳೆಯ ವಿಚಾರದ ಬಗ್ಗೆ ರಾಜ್ಯದ ಗಮನ ಸೆಳೆದಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವ್ಯಂಗ್ಯವಾಡಿದ್ದಾರೆ.



ದೆಹಲಿಯ ಕರ್ನಾಟಕ ಭವನದ ಬಳಿ ಮಂಗಳವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಮ್ಮ ಸಚಿವ ಸಂಪುಟದ ಸಹೋದ್ಯೋಗಿಗಳ ವಿರುದ್ಧದ ಸ್ಟಿಂಗ್ ಆಪರೇಷನ್ ಹಿಂದೆ ತಾವೇ ಇದ್ದಾರೆ ಎಂಬ ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿದರು. "ಬಹಳ ಸಂತೋಷ. ಕುಮಾರಸ್ವಾಮಿ ಅವರ ಆರೋಪಗಳಿಗೆ ಕಾಲವೇ ಉತ್ತರಿಸಲಿದೆ. ಅವರು ಹೇಳಿರುವ ದಾಖಲೆಗಳು ಏನಿವೆಯೋ ಅವುಗಳನ್ನು ತರಿಸಿಕೊಟ್ಟು ತಿಳಿಸುತ್ತೇನೆ. ತನಿಖೆ ನಡೆಸಲು ಯಾರಿಗಾದರೂ ವಹಿಸಬೇಕು ಎಂದು ಹೇಳಿದ್ದಾರಲ್ಲ, ಅವರಿಗೆ ದಾಖಲೆಗಳನ್ನು ನೀಡಲಿ," ಎಂದು ತಿರುಗೇಟು ನೀಡಿದರು. ಸ್ಟಿಂಗ್ ಆಪರೇಷನ್ ವಿಚಾರವಾಗಿ ಕುಮಾರಸ್ವಾಮಿ ಮಾಡಿರುವ ಆರೋಪಗಳ ಕುರಿತು ಸೂಕ್ತ ಸಮಯದಲ್ಲಿ ಉತ್ತರ ದೊರೆಯಲಿದೆ ಎಂಬರ್ಥದಲ್ಲಿ ಡಿ.ಕೆ. ಶಿವಕುಮಾರ್ ಪ್ರತಿಕ್ರಿಯಿಸಿದರು.

# ಯುಪಿಐ ಶುಲ್ಕ ಜಾರಿ ಮುಂದೂಡಿಕೆ; ಹಬ್ಬಕ್ಕೆ ನಿರಾಳತೆ

● ವಿಕ್ರಮ ವಾಹಿನಿ । ನವದೆಹಲಿ

ಹಬ್ಬದ ಋತುವಿನಲ್ಲಿ ಗ್ರಾಹಕರು ಮತ್ತು ವ್ಯಾಪಾರಿಗಳಿಗೆ ನಿರಾಳತೆ ನೀಡುವ ಉದ್ದೇಶದಿಂದ, 2,000ಕ್ಕಿಂತ ಹೆಚ್ಚಿನ ಮೌಲ್ಯದ ಆಯ್ದ ಯುಪಿಐ ವ್ಯಾಪಾರಿ ಪಾವತಿಗಳ ಮೇಲೆ ವಿಧಿಸಲು ಉದ್ದೇಶಿಸಿದ್ದ ವ್ಯಾಪಾರಿ ರಿಯಾಯಿತಿ ದರದ (ಎಂಡಿಆರ್) ಜಾರಿಯನ್ನು ದೀಪಾವಳಿಯ ನಂತರಕ್ಕೆ ಮುಂದೂಡಲಾಗಿದೆ ಎಂದು ರಾಷ್ಟ್ರೀಯ ಪಾವತಿ ನಿಗಮ (ಎನ್‌ಪಿಸಿಐ) ತಿಳಿಸಿದೆ.

ಆಯ್ದ ವ್ಯಕ್ತಿಯಿಂದ ವ್ಯಾಪಾರಿಗೆ ನಡೆಯುವ ಪಾವತಿಗಳ ಮೇಲೆ ಶುಲ್ಕ ವಿಧಿಸುವ ಪ್ರಸ್ತಾವವನ್ನು ದೀಪಾವಳಿಯ ಬಳಿಕ ಪ್ರತ್ಯೇಕವಾಗಿ ಪ್ರಕಟಿಸುವ ದಿನಾಂಕದಿಂದ ಜಾರಿಗೆ ತರಲಾಗುವುದು. ಹಬ್ಬದ ವ್ಯಾಪಾರಕ್ಕೆ ಶುಲ್ಕದ ಹೊರೆ ಉಂಟಾಗಬಹುದು ಎಂಬ ಆತಂಕದಿಂದ ವ್ಯಾಪಾರಿ ಸಂಘಟನೆಗಳು, ಹಣಕಾಸು ತಂತ್ರಜ್ಞಾನ ಸಂಸ್ಥೆಗಳು ಹಾಗೂ ಪಾವತಿ ಸೇವಾ ಕಂಪನಿಗಳು ಜಾರಿ ಮುಂದೂಡುವಂತೆ ಮನವಿ ಮಾಡಿದ್ದವು.

**ಯಾವ ವಹಿವಾಟಿಗೆ ಎಷ್ಟು ಶುಲ್ಕ?:** 2,000ಕ್ಕಿಂತ ಹೆಚ್ಚಿನ ಮೌಲ್ಯದ ಆಯ್ದ ವ್ಯಕ್ತಿಯಿಂದ ವ್ಯಾಪಾರಿಗೆ ನಡೆಯುವ ಪಾವತಿಗಳ ಮೇಲೆ ಶೇ.0.4ರಷ್ಟು ವ್ಯಾಪಾರಿ ರಿಯಾಯಿತಿ ದರ ವಿಧಿಸುವ ಪ್ರಸ್ತಾವವಿದೆ. ರೈಲ್ವೆ, ದೂರಸಂಪರ್ಕ, ವಿಮೆ, ಇಂಧನ ಮತ್ತು ಕೃಷಿ ಪರಿಕರಗಳಂತಹ ಅಗತ್ಯ ಸೇವೆ ಹಾಗೂ ಕಡಿಮೆ ಲಾಭಾಂಶದ ವಲಯಗಳಲ್ಲಿ 2,000ಕ್ಕಿಂತ ಹೆಚ್ಚಿನ ವಹಿವಾಟಿಗೆ ಪ್ರತಿ ಪಾವತಿಗೆ 5ರ ನಿಗದಿತ ಶುಲ್ಕ ವಿಧಿಸುವ ವ್ಯವಸ್ಥೆಯನ್ನೂ ಪ್ರಸ್ತಾಪಿಸಲಾಗಿದೆ.

ಈ ಶುಲ್ಕವನ್ನು ಬ್ಯಾಂಕುಗಳು, ಪಾವತಿ ಸೇವಾ ಸಂಸ್ಥೆಗಳು ಹಾಗೂ ಯುಪಿಐ ಅನ್ವಯಿಕೆಗಳನ್ನು ಒದಗಿಸುವ ಸಂಸ್ಥೆಗಳ ನಡುವೆ ಹಂಚಿಕೆ ಮಾಡಲಾಗುತ್ತದೆ.

**ವ್ಯಕ್ತಿಯಿಂದ ವ್ಯಕ್ತಿಗೆ ಹಣ ವರ್ಗಾವಣೆ ಉಚಿತ**

ವ್ಯಕ್ತಿಯಿಂದ ವ್ಯಕ್ತಿಗೆ ನಡೆಯುವ ಹಣ ವರ್ಗಾವಣೆಗೆ ಯಾವುದೇ ಶುಲ್ಕ ಅನ್ವಯಿಸುವುದಿಲ್ಲ. 2,000ವರೆಗಿನ ವ್ಯಾಪಾರಿ ಪಾವತಿಗಳೂ ಉಚಿತವಾಗಿಯೇ ಮುಂದುವರಿಯಲಿವೆ. ಸಣ್ಣ ವ್ಯಾಪಾರಿಗಳು ಮತ್ತು ಬೀದಿಬದಿ ಮಾರಾಟಗಾರರು ಯುಪಿಐ ತ್ವರಿತ ಪ್ರತಿಕ್ರಿಯೆ ಸಂಕೇತಗಳ (ಕ್ಯೂಆರ್ ಕೋಡ್) ಮೂಲಕ ಸ್ವೀಕರಿಸುವ ಪಾವತಿಗಳಿಗೆ ಶೂನ್ಯ ಶುಲ್ಕದ ಸೌಲಭ್ಯ ಮುಂದುವರಿಯಲಿದೆ. ಈ ವರ್ಗದಡಿ ತಿಂಗಳಿಗೆ 1 ಲಕ್ಷದವರೆಗಿನ ವಹಿವಾಟುಗಳಿಗೆ ಸೌಲಭ್ಯ ಅನ್ವಯಿಸುತ್ತದೆ.

ಮ್ಯೂಚುವಲ್ ಫಂಡ್‌ಗಳು, ಷೇರುಗಳು, ಷೇರು ದಲ್ಲಾಳಿಗಳು ಮತ್ತು ವ್ಯಾಪಾರಿಗಳಿಗೆ ಸಂಬಂಧಿಸಿದ ಬಂಡವಾಳ ಮಾರುಕಟ್ಟೆ ವಹಿವಾಟುಗಳ ಮೇಲೆ ಶೇ.0.02ರಷ್ಟು ಶುಲ್ಕ ಹಾಗೂ ಪ್ರತಿ ವಹಿವಾಟಿಗೆ ಗರಿಷ್ಠ 300 ಮಿತಿ ನಿಗದಿಪಡಿಸುವ ಪ್ರಸ್ತಾವವೂ ಇದೆ.

ಒಟ್ಟಿನಲ್ಲಿ, ಹಬ್ಬದ ಮಾರಾಟದ ಅವಧಿಯಲ್ಲಿ ಗ್ರಾಹಕರು ಮತ್ತು ವ್ಯಾಪಾರಿಗಳ ಮೇಲೆ ತಕ್ಷಣದ ಶುಲ್ಕದ ಹೊರೆ ಬೀಳದಂತೆ ಆಯ್ದ ಯುಪಿಐ ವಹಿವಾಟುಗಳ ಮೇಲಿನ ಶುಲ್ಕ ಜಾರಿಯನ್ನು ಮುಂದೂಡಲಾಗಿದೆ.

# ಕರ್ಲಾನ್ ಘಟಕದಲ್ಲಿ ಬೆಂಕಿ: ದಟ್ಟ ಹೊಗೆಯಿಂದ ಆತಂಕ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿರುವ ಕರ್ಲಾನ್ (Kurlon) ಹಾಸಿಗೆ ತಯಾರಿಕಾ ಘಟಕದಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಸುತ್ತಮುತ್ತಲಿನ ಪ್ರದೇಶದಲ್ಲಿ ದಟ್ಟ ಹೊಗೆ ಆವರಿಸಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಘಟಕದಲ್ಲಿ ಹಾಸಿಗೆ ತಯಾರಿಕೆಗೆ ಬಳಸುವ ಕಚ್ಚಾ ವಸ್ತುಗಳನ್ನು ಸಂಗ್ರಹಿಸಿಟ್ಟಿದ್ದ ಶೆಡ್‌ನಲ್ಲಿ ಮಧ್ಯಾಹ್ನ ಸುಮಾರು 3 ಗಂಟೆಗೆ ಬೆಂಕಿ ಕಾಣಿಸಿಕೊಂಡಿದೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಬೆಂಕಿ ಕಾಣಿಸಿಕೊಂಡ ತಕ್ಷಣ ದಟ್ಟ ಹೊಗೆ ಮೇಲಕ್ಕೆ ವ್ಯಾಪಿಸಿದ್ದು, ಸುತ್ತಮುತ್ತಲಿನ ಕೈಗಾರಿಕಾ ಪ್ರದೇಶದ ಜನರಲ್ಲಿ ಆತಂಕ ಮೂಡಿಸಿತು. ಸ್ಥಳೀಯರು ನೀಡಿದ ಮಾಹಿತಿ ಆಧರಿಸಿ ಸ್ಥಳಕ್ಕೆ ಧಾವಿಸಿದ ಎರಡು ಅಗ್ನಿಶಾಮಕ ವಾಹನಗಳ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯಾಚರಣೆ ಕೈಗೊಂಡರು.

ಕಚ್ಚಾ ವಸ್ತುಗಳು ಸಂಗ್ರಹಿಸಿದ್ದ ಶೆಡ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದ್ದರಿಂದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ಇತರ ಭಾಗಗಳಿಗೆ ಹರಡದಂತೆ ನಿಯಂತ್ರಿಸಲು ಪ್ರಯತ್ನಿಸಿದರು. ಘಟನೆಯಿಂದ ಉಂಟಾದ ಹಾನಿಯ ಪ್ರಮಾಣದ ಕುರಿತು ಮಾಹಿತಿ ಲಭ್ಯವಾಗಿಲ್ಲ.

ಅಗ್ನಿ ಅವಘಡದಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದೆ. ಬೆಂಕಿ ಕಾಣಿಸಿಕೊಳ್ಳಲು ನಿಖರವಾದ ಕಾರಣ ಹಾಗೂ ನಷ್ಟದ ಪ್ರಮಾಣದ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

ಬೆಂಕಿ ಕಾಣಿಸಿಕೊಂಡ ಸ್ಥಳದಿಂದ ದಟ್ಟ ಹೊಗೆ ವ್ಯಾಪಕವಾಗಿ ಹರಡಿದ್ದರಿಂದ ಸುತ್ತಮುತ್ತಲಿನ ಪ್ರದೇಶದ ನಿವಾಸಿಗಳು ಹಾಗೂ ಕೈಗಾರಿಕಾ ಘಟಕಗಳ ಸಿಬ್ಬಂದಿ ಕೆಲಕಾಲ ಆತಂಕಕ್ಕೊಳಗಾದರು. ಬೆಂಕಿಯ ತೀವ್ರತೆಯನ್ನು ಗಮನಿಸಿದ ಅಗ್ನಿಶಾಮಕ ಸಿಬ್ಬಂದಿ, ಕಾರ್ಯಾಚರಣೆ ನಡೆಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪ್ರಯತ್ನಿಸಿದರು:ಬೇಕಿದೆ.

# ಪ್ರತಿಭಟನೆಯ ಹಕ್ಕು ಕಸಿಯಲು ಬಿಡುವುದಿಲ್ಲ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ಶಾಂತಿಯುತ ಪ್ರತಿಭಟನೆ ಪ್ರಜಾಪ್ರಭುತ್ವದ ಮೂಲಭೂತ ಹಕ್ಕಾಗಿದ್ದು, ಅದನ್ನು ಹತ್ತಿಕ್ಕಲು ಅವಕಾಶ ನೀಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಪ್ರತಿಭಟನಾಕಾರರು ಮತ್ತು ಮಾಧ್ಯಮ ಪ್ರತಿನಿಧಿಗಳನ್ನು ಒಳಗೊಂಡಂತೆ ನಿನ್ನೆ ನಡೆದ ಘಟನೆಯನ್ನು ಗಮನಿಸಿದ್ದೇನೆ. ಪೊಲೀಸರ ಕಾರ್ಯಾಚರಣೆಗೆ ಕಾರಣವಾದ ಸಂದರ್ಭಗಳ ಕುರಿತು ಸಂಪೂರ್ಣ ವರದಿ ನೀಡುವಂತೆ ಸೂಚಿಸಿದ್ದೇನೆ. ಅನಗತ್ಯ ಬಲಪ್ರಯೋಗ ಅಥವಾ ಅತಿರೇಕ ನಡೆದಿರುವುದು ವರದಿಯಲ್ಲಿ ಕಂಡುಬಂದರೆ, ಹೊಣೆಗಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಚುನಾವಣಾ ಆಯೋಗದೊಂದಿಗಿನ ಭಿನ್ನಾಭಿಪ್ರಾಯವಾಗಲಿ, ಸರ್ಕಾರದ ವಿರುದ್ಧದ ಅಸಮಾಧಾನವಾಗಲಿ ಅಥವಾ ವೈಯಕ್ತಿಕವಾಗಿ ತಮ್ಮ ವಿರುದ್ಧದ ಟೀಕೆಯಾಗಲಿ, ಶಾಂತಿಯುತವಾಗಿ ಅಭಿಪ್ರಾಯ ವ್ಯಕ್ತಪಡಿಸುವ ಹಕ್ಕನ್ನು ಯಾರಿಂದಲೂ ಕಸಿಯಲು ಬಿಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ದೆಹಲಿಯಲ್ಲಿ ಪ್ರತಿಭಟನೆಯ ಹಕ್ಕನ್ನು ಪ್ರತಿಪಾದಿಸುತ್ತಾ, ಬೆಂಗಳೂರಿನಲ್ಲಿ ಅದೇ ಹಕ್ಕನ್ನು ನಿರಾಕರಿಸುವುದು ಸರಿಯಲ್ಲ. ದೇಶದ ಇತರ ಭಾಗಗಳಿಂದ ನಿರೀಕ್ಷಿಸುವ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಕರ್ನಾಟಕದಲ್ಲಿಯೂ ಪಾಲಿಸಬೇಕು. ಈ ವಿಚಾರದಲ್ಲಿ ಯಾವುದೇ ದ್ವಿಮುಖ ನೀತಿಗೆ ಅವಕಾಶವಿಲ್ಲ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

# ಕಬ್ಬು ಬೆಳೆಗಾರರಿಗೆ ಶೀಘ್ರ ಸಿಹಿ ಸುದ್ದಿ: ಪ್ರಲ್ಹಾದ್ ಜೋಶಿ ಭರವಸೆ

● ವಿಕ್ರಮ ವಾಹಿನಿ । ನವದೆಹಲಿ/ಹುಬ್ಬಳ್ಳಿ

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಪರಿಹರಿಸಲು ಕೇಂದ್ರ ಸರ್ಕಾರ ಬದ್ಧವಾಗಿದ್ದು, ಶೀಘ್ರದಲ್ಲೇ ಸಿಹಿ ಸುದ್ದಿ ನೀಡಲಾಗುವುದು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭರವಸೆ ನೀಡಿದ್ದಾರೆ. ರೈತರು ರಸ್ತೆ ತಡೆ ಸೇರಿದಂತೆ ಪ್ರತಿಭಟನೆಗಳಿಗೆ ಮುಂದಾಗದೆ, ಸರ್ಕಾರದ ಪ್ರಯತ್ನಗಳಿಗೆ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.



ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹಾಗೂ ರೈತ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ಸುದೀರ್ಘ ಚರ್ಚೆ ನಡೆಸಲಾಗಿದೆ. ಮಾತುಕತೆ ಸಕಾರಾತ್ಮಕವಾಗಿ ನಡೆದಿದ್ದು, ಸಮಸ್ಯೆಗಳಿಗೆ ಸಮಗ್ರ ಪರಿಹಾರ ಕಂಡುಕೊಳ್ಳಲು ಜಂಟಿ ಸಮಿತಿ ರಚಿಸಲು ನಿರ್ಧರಿಸಲಾಗಿದೆ ಎಂದರು.

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಒಂದೆರಡು ಸಚಿವಾಲಯಗಳಿಂದ ಮಾತ್ರ ಪರಿಹರಿಸಲು ಸಾಧ್ಯವಿಲ್ಲ. ಕೇಂದ್ರದ ವಿವಿಧ ಸಚಿವಾಲಯಗಳು ಹಾಗೂ ರಾಜ್ಯ ಸರ್ಕಾರಗಳ ಸಹಕಾರ ಅಗತ್ಯವಿದೆ. ಸಮಿತಿ ರೈತರ ಸಮಸ್ಯೆಗಳನ್ನು ಅಧ್ಯಯನ ಮಾಡಿ ಪರಿಹಾರ ಸೂಚಿಸಲಿದೆ ಎಂದು ತಿಳಿಸಿದರು.

**ಕಬ್ಬಿನ ದರ, ತೂಕದ ವ್ಯತ್ಯಾಸದ ಬಗ್ಗೆ ಚರ್ಚೆ**

ಕಬ್ಬಿನ ನ್ಯಾಯಯುತ ಮತ್ತು ಲಾಭದಾಯಕ ಬೆಲೆ ನಿಗದಿ, ಸಕ್ಕರೆ ಕಾರ್ಖಾನೆಗಳಲ್ಲಿ ತೂಕದ ವ್ಯತ್ಯಾಸ, ಕಟಾವು ಮತ್ತು ಸಾಗಣೆ ಸಂದರ್ಭದಲ್ಲಿ ಉಂಟಾಗುವ ನಷ್ಟ ಹಾಗೂ ತೂಕದ ಯಂತ್ರಗಳಲ್ಲಿನ ಅಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ.

ರೈತರ ಅಹವಾಲುಗಳನ್ನು ಪರಿಶೀಲಿಸಿ, ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡಲಾಗುವುದು ಎಂದು ಜೋಶಿ ಹೇಳಿದರು.

ಕರ್ನಾಟಕದಲ್ಲೂ ಇತರ ಕೆಲವು ರಾಜ್ಯಗಳ ಮಾದರಿಯಲ್ಲಿ ಕಬ್ಬು ಬೆಳೆಗಾರರ ಹಿತ ರಕ್ಷಿಸಲು ರಾಜ್ಯ ಸಲಹಾ ಬೆಲೆ ವ್ಯವಸ್ಥೆ ಜಾರಿಗೆ ತರಬೇಕೆಂಬ ಬೇಡಿಕೆಯನ್ನು ರಾಜ್ಯ ಸರ್ಕಾರದ ಗಮನಕ್ಕೆ ತರಲಾಗಿದೆ. ಕಬ್ಬಿನ ತೂಕ ಮತ್ತು ಇಳುವರಿಯಲ್ಲಿ ವ್ಯತ್ಯಾಸ ತೋರಿಸುವುದು ಸೇರಿದಂತೆ ಕಾರ್ಖಾನೆಗಳಲ್ಲಿ ನಡೆಯುವ ಅಕ್ರಮಗಳನ್ನು ತಡೆಯುವ ಅಗತ್ಯವಿದೆ ಎಂದರು.

ಕರ್ನಾಟಕ ಮತ್ತು ಮಹಾರಾಷ್ಟ್ರದ ರೈತ ಮುಖಂಡರೊಂದಿಗೆ ನಡೆದ ಸಭೆ ವಿಫಲವಾಗಿಲ್ಲ. ರೈತ ಸಂಘಟನೆಗಳ ಪ್ರತಿನಿಧಿಗಳು ನೀಡಿದ ಸಲಹೆಗಳನ್ನು ಸ್ವೀಕರಿಸಲಾಗಿದ್ದು, ಜಂಟಿ ಸಮಿತಿ ರಚನೆಗೆ ಒಪ್ಪಿಗೆ ದೊರೆತಿದೆ ಎಂದು ಅವರು ತಿಳಿಸಿದರು.

**ಜೋಶಿ ನಿವಾಸದಲ್ಲಿ ಡಿ.ಕೆ. ಶಿವಕುಮಾರ್ ಮಾತುಕತೆ:** ಇದೇ ವಿಚಾರವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೆಹಲಿಯಲ್ಲಿ ಸೋಮವಾರ ತಡರಾತ್ರಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ನಿವಾಸಕ್ಕೆ ಭೇಟಿ ನೀಡಿ ಮಾತುಕತೆ ನಡೆಸಿದರು. 2026–27ರ ಸಕ್ಕರೆ ಹಂಗಾಮಿನಲ್ಲಿ ಕಬ್ಬಿನ ದರ ನಿಗದಿ ಕುರಿತು ಕರ್ನಾಟಕದ ರೈತರ ಆತಂಕಗಳನ್ನು ಚರ್ಚಿಸಿದ್ದಾಗಿ ಶಿವಕುಮಾರ್ ತಿಳಿಸಿದ್ದಾರೆ.

ಕಬ್ಬು ಬೆಳೆಗಾರರಿಗೆ ನ್ಯಾಯಯುತ ಮತ್ತು ಲಾಭದಾಯಕ ದರ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಹಾಗೂ ರಾಜ್ಯದ ಅಭಿಪ್ರಾಯಗಳನ್ನು ಪರಿಗಣಿಸಿ ರೈತರ ಹಿತಾಸಕ್ತಿಗಳನ್ನು ರಕ್ಷಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿರುವುದಾಗಿ ಅವರು ಹೇಳಿದ್ದಾರೆ.

ರೈತರ ಸಮಸ್ಯೆಗಳಿಗೆ ಸಕಾರಾತ್ಮಕ ಪರಿಹಾರ ಕಂಡುಕೊಳ್ಳಲು ಕೇಂದ್ರ ಸರ್ಕಾರ ಪ್ರಯತ್ನಿಸುತ್ತಿದ್ದು, ಪ್ರತಿಭಟನೆಗಳ ಬದಲಿಗೆ ಮಾತುಕತೆಯ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಲು ಸಹಕರಿಸುವಂತೆ ಜೋಶಿ ಮನವಿ ಮಾಡಿದರು.



ಟಿಬೆಟ್ ಪಾರ್ಲಿಮೆಂಟ್ ಸದಸ್ಯ ಚೋಪೆಲ್ ಥುಪ್ಟೆನ್ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರನ್ನು ಮಂಗಳವಾರ ಭೇಟಿ ಮಾಡಿ ಧರ್ಮಗುರು ದಲೈಲಾಮಾ ಅವರ ಕರ್ನಾಟಕ ಭೇಟಿ ಹಿನ್ನೆಲೆಯಲ್ಲಿ ಬೈಲುಕುಪ್ಪೆ ಮೂಲಸೌಕರ್ಯ ಅಭಿವೃದ್ಧಿ ಕುರಿತು ಚರ್ಚಿಸಿದರು. ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಉಪಸ್ಥಿತರಿದ್ದರು.

# ಮದ್ಯದ ಅಮಲಿನಲ್ಲಿ ಪೊಲೀಸರೊಂದಿಗೆ ಅನುಚಿತ ವರ್ತನೆ: ಐಎಎಸ್ ಅಧಿಕಾರಿ ವಿರುದ್ಧ ಪ್ರಕರಣ

● ವಿಕ್ರಮ ವಾಹಿನಿ । ಬೆಂಗಳೂರು

ಮದ್ಯದ ಅಮಲಿನಲ್ಲಿ ಪೊಲೀಸರೊಂದಿಗೆ ಅನುಚಿತವಾಗಿ ವರ್ತಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ ಆರೋಪದ ಮೇಲೆ ಆಂಧ್ರಪ್ರದೇಶದ ಐಎಎಸ್ ಅಧಿಕಾರಿ ವಿಕಾಸ್ ಮರ್ಮತ್ ವಿರುದ್ಧ ಬೆಂಗಳೂರಿನಲ್ಲಿ ಪ್ರಕರಣ ದಾಖಲಾಗಿದೆ.

ಆಂಧ್ರಪ್ರದೇಶದ ಕುಪ್ಪಂ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕರಾಗಿರುವ ವಿಕಾಸ್ ಮರ್ಮತ್ ವಿರುದ್ಧ ಈ ಆರೋಪ ಕೇಳಿಬಂದಿದೆ.

ಅ.9ರಂದು ಪೊಲೀಸ್ ಆಯುಕ್ತರ ಸೂಚನೆಯಂತೆ ನಗರದಾದ್ಯಂತ ಪಬ್‌ಗಳಲ್ಲಿ ಪೊಲೀಸರು ತಪಾಸಣೆ ನಡೆಸುತ್ತಿದ್ದರು. ಈ ವೇಳೆ ರೆಸಿಡೆನ್ಸಿ ರಸ್ತೆಯ ಪಬ್‌ವೊಂದರಲ್ಲಿ ಪರಿಶೀಲನೆ ನಡೆಸುತ್ತಿದ್ದ ಪೊಲೀಸರು ವಿಕಾಸ್ ಮರ್ಮತ್ ಅವರ ಗುರುತಿನ ಚೀಟಿ ತೋರಿಸುವಂತೆ ಕೇಳಿದ್ದಾರೆ. ಇದರಿಂದ ಆಕ್ರೋಶಗೊಂಡ ಅವರು, ಇನ್‌ಸ್ಪೆಕ್ಟರ್ ಅರುಣ್ ಸೋಲಂಕಿ ಸೇರಿದಂತೆ ಪೊಲೀಸ್ ಸಿಬ್ಬಂದಿಯನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಅನುಚಿತವಾಗಿ ವರ್ತಿಸಿದ್ದಾರೆ ಎನ್ನಲಾಗಿದೆ.

ಘಟನೆಗೆ ಸಂಬಂಧಿಸಿದಂತೆ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಪಬ್‌ಗಳಲ್ಲಿ ನಿಯಮ ಉಲ್ಲಂಘನೆ ನಡೆಯುತ್ತಿದೆಯೇ ಎಂಬುದನ್ನು ಪರಿಶೀಲಿಸುವ ಉದ್ದೇಶದಿಂದ ಪೊಲೀಸರು ಕಾರ್ಯಾಚರಣೆ ನಡೆಸುತ್ತಿದ್ದರು. ಈ ಸಂದರ್ಭದಲ್ಲಿ ಕರ್ತವ್ಯದಲ್ಲಿದ್ದ ಪೊಲೀಸರೊಂದಿಗೆ ಅಧಿಕಾರಿ ಅನುಚಿತವಾಗಿ ವರ್ತಿಸಿದ್ದಾರೆ ಎಂಬ ಆರೋಪ ಘಟನೆಗೆ ಸಂಬಂಧಿಸಿದಂತೆ ಚರ್ಚೆಗೆ ಕಾರಣವಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಶಾಂತಿ ಕಾಪಾಡುವುದು ಹಾಗೂ ನಿಯಮ ಪಾಲನೆಯಾಗುವುದನ್ನು ಖಚಿತಪಡಿಸಿಕೊಳ್ಳಲು ಪೊಲೀಸರು ತಪಾಸಣೆ ನಡೆಸುತ್ತಿದ್ದರು. ಪ್ರಕರಣದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದು, ಘಟನೆಯ ಸಂಪೂರ್ಣ ವಿವರಗಳು ತನಿಖೆಯ ಬಳಿಕ ತಿಳಿದುಬರಬೇಕಿದೆ.

# ಭಾರತದ ಆರ್ಥಿಕ ಬೆಳವಣಿಗೆ ಶೇ.7ಕ್ಕೆ ಏರಿಕೆ: ಐಎಂಎಫ್

● ವಿಕ್ರಮ ವಾಹಿನಿ । ನವದೆಹಲಿ

*ಭಾರತದ ಆರ್ಥಿಕ ಬೆಳವಣಿಗೆಯ ಮುನ್ಸೂಚನೆಯನ್ನು 2026ನೇ ಸಾಲಿಗೆ ಶೇ.7ಕ್ಕೆ ಹೆಚ್ಚಿಸಿರುವ ಅಂತಾರಾಷ್ಟ್ರೀಯ ಹಣಕಾಸು ನಿಧಿ (ಐಎಂಎಫ್), ಜಾಗತಿಕ ಆರ್ಥಿಕ ಬೆಳವಣಿಗೆ ಕುಂಠಿತವಾಗುವ ಆತಂಕವನ್ನೂ ವ್ಯಕ್ತಪಡಿಸಿದೆ.*

*ಐಎಂಎಫ್‌ನ ಅಕ್ಟೋಬರ್ 2026ರ ವಿಶ್ವ ಆರ್ಥಿಕ ದೃಷ್ಟಿಕೋನ ವರದಿಯ ಪ್ರಕಾರ, ಭಾರತವು ಪ್ರಮುಖ ವೇಗವಾಗಿ ಬೆಳೆಯುವ ಆರ್ಥಿಕತೆಗಳಲ್ಲಿ ಒಂದಾಗಿ ಮುಂದುವರಿಯಲಿದೆ. ಆದರೆ, ಮಧ್ಯಪ್ರಾಚ್ಯದ ಸಂಘರ್ಷ, ಇಂಧನ ಬೆಲೆಗಳ ಏರಿಕೆ, ವ್ಯಾಪಾರ ನೀತಿಗಳಲ್ಲಿನ ಬದಲಾವಣೆ ಹಾಗೂ ಭೌಗೋಳಿಕ ರಾಜಕೀಯ ಅನಿಶ್ಚಿತತೆಗಳು ಜಾಗತಿಕ ಆರ್ಥಿಕತೆಯ ಮೇಲೆ ಒತ್ತಡ ಹೇರುತ್ತಿವೆ.*

*ಜಾಗತಿಕ ಆರ್ಥಿಕ ಬೆಳವಣಿಗೆಯು 2025ರಲ್ಲಿ ಶೇ.3.5ರಷ್ಟಿದ್ದರೆ, 2026ರಲ್ಲಿ ಶೇ.3.1ಕ್ಕೆ ಇಳಿಕೆಯಾಗುವ ನಿರೀಕ್ಷೆಯಿದೆ. ಹೆಚ್ಚುತ್ತಿರುವ ಸಾರ್ವಜನಿಕ ಸಾಲ, ಬಡ್ಡಿ ಪಾವತಿ ವೆಚ್ಚ ಮತ್ತು ಹಣಕಾಸಿನ ಕೊರತೆಯಿಂದಾಗಿ ಹಲವು ದೇಶಗಳ ಆರ್ಥಿಕ ಸ್ಥಿರತೆಗೆ ಸವಾಲು ಎದುರಾಗಬಹುದು ಎಂದು ಐಎಂಎಫ್ ಎಚ್ಚರಿಸಿದೆ.*

***ಅಮೆರಿಕದ ಬೆಳವಣಿಗೆಗೆ ಎಐ ಹೂಡಿಕೆ ಬೆಂಬಲ***

*ಅಮೆರಿಕದ ಆರ್ಥಿಕತೆಯು 2026 ಮತ್ತು 2027ರಲ್ಲಿ ಶೇ.2.3ರಷ್ಟು ಬೆಳೆಯುವ ನಿರೀಕ್ಷೆಯಿದೆ. ಗ್ರಾಹಕ ವೆಚ್ಚ ಹಾಗೂ ಕೃತಕ ಬುದ್ಧಿಮತ್ತೆ ಕ್ಷೇತ್ರದ ಹೂಡಿಕೆಗಳು ಬೆಳವಣಿಗೆಗೆ ನೆರವಾಗಲಿವೆ. ಆದರೆ, ಹಣದುಬ್ಬರ ಮತ್ತು ಸರ್ಕಾರದ ಸಾಲದ ವೆಚ್ಚದ ಏರಿಕೆ ಸವಾಲಾಗಬಹುದು ಎಂದು ವರದಿ ತಿಳಿಸಿದೆ.*

*ಅಮೆರಿಕ–ಚೀನಾ ವ್ಯಾಪಾರಕ್ಕೆ ಸುಂಕದ ಹೊಡೆತ*

*ಅಮೆರಿಕ ಮತ್ತು ಚೀನಾ ನಡುವಿನ ಸುಂಕ ಸಮರದಿಂದ ದ್ವಿಪಕ್ಷೀಯ ವ್ಯಾಪಾರ ಕುಸಿದಿದೆ. 2025ರ ಫೆಬ್ರುವರಿಯಿಂದ 2026ರ ಜನವರಿವರೆಗಿನ ಅವಧಿಯಲ್ಲಿ ಅಮೆರಿಕಕ್ಕೆ ಚೀನಾದ ರಫ್ತು ಶೇ.22ರಷ್ಟು ಹಾಗೂ ಚೀನಾಕ್ಕೆ ಅಮೆರಿಕದ ರಫ್ತು ಶೇ.25ರಷ್ಟು ಇಳಿಕೆಯಾಗಿದೆ. ಜಾಗತಿಕ ವ್ಯಾಪಾರದ ಬೆಳವಣಿಗೆಯೂ 2025ರ ಶೇ.5ರಿಂದ 2026ರಲ್ಲಿ ಶೇ.4.6ಕ್ಕೆ ಕುಸಿಯುವ ನಿರೀಕ್ಷೆಯಿದೆ.*

***ಮಧ್ಯಪ್ರಾಚ್ಯ ಸಂಘರ್ಷದಿಂದ ಆರ್ಥಿಕತೆಗೆ ಹೊಡೆತ***

*ಹಾರ್ಮುಜ್ ಜಲಸಂಧಿಯ ಮೂಲಕ ಇಂಧನ ಸಾಗಣೆಗೆ ಅಡ್ಡಿಯಾಗುವ ಸಾಧ್ಯತೆ ಮಧ್ಯಪ್ರಾಚ್ಯ ಮತ್ತು ಮಧ್ಯ ಏಷ್ಯಾದ ಆರ್ಥಿಕತೆಗಳ ಮೇಲೆ ಪರಿಣಾಮ ಬೀರಬಹುದು.*

*ಈ ವಲಯದ ಆರ್ಥಿಕ ಬೆಳವಣಿಗೆಯು 2025ರ ಶೇ.3.7ರಿಂದ 2026ರಲ್ಲಿ ಮೈನಸ್ ಶೇ.0.3ಕ್ಕೆ ಕುಸಿಯುವ ಸಾಧ್ಯತೆಯಿದೆ. 2027ರಲ್ಲಿ ಶೇ.6.3ಕ್ಕೆ ಚೇತರಿಸಿಕೊಳ್ಳಬಹುದು ಎಂದು ಐಎಂಎಫ್ ಅಂದಾಜಿಸಿದೆ.*

*ಒಟ್ಟಿನಲ್ಲಿ, ಭಾರತದ ಬೆಳವಣಿಗೆಯ ಮುನ್ಸೂಚನೆ ಹೆಚ್ಚಿದ್ದರೂ, ಇಂಧನ ಬೆಲೆಗಳ ಏರಿಕೆ, ಹೆಚ್ಚುತ್ತಿರುವ ಸಾಲದ ಹೊರೆ ಮತ್ತು ಜಾಗತಿಕ ವ್ಯಾಪಾರ ಸಂಘರ್ಷಗಳು ವಿಶ್ವ ಆರ್ಥಿಕತೆಯ ಭವಿಷ್ಯದ ಬಗ್ಗೆ ಅನಿಶ್ಚಿತತೆ ಮೂಡಿಸಿವೆ ಎಂದು ವರದಿ ಎಚ್ಚರಿಸಿದೆ.*

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 188,